15 ಆಗಸ್ಟ್ 2025 ಶುಕ್ರವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 157 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629

ಜನಮನದ ದನಿ

# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ



ಕೇಂದ್ರ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಹೆಚ್‌ಎಂಟಿ ಲಿಮಿಟೆಡ್ ಪುನಶ್ಚೇತನ ಕುರಿತಂತೆ ನೀತಿ ಆಯೋಗದ ಸದಸ್ಯ ಡಾ.ವಿ.ಕೆ.ಸಾರಸ್ವತ್ ಅವರೊಂದಿಗೆ ಗುರುವಾರ ಚರ್ಚೆ ನಡೆಸಿದರು.




ಯಶ್ ಮೊದಲು... ಯಶ್ ಕೊನೆ... » 2



ಭಾರತ ಸ್ವಾತಂತ್ರ್ಯಕ್ಕೆ ಕ್ರಾಂತಿಕಾರಿಗಳ ಕೊಡುಗೆ ಅಪಾರ » 3



ಕಾಡಾನೆ ಕಂಡು ಗುಂಡಿಗೆ ಬಿದ್ದ ಕಾರು » 4


# ಧರ್ಮಸ್ಥಳ ಅಪಪ್ರಚಾರ: ಕಲಾಪದಲ್ಲಿ ಬಿಜೆಪಿ ವಾಗ್ದಾಳಿ

## ಮಧ್ಯಂತರ ವರದಿ, ಅನಾಮಿಕನ ಗುರುತು ಬಹಿರಂಗಪಡಿಸಲು ಆಗ್ರಹ | ದೂರುದಾರನ ಆರೋಪ ಸುಳ್ಳಾದರೆ ಕಾನೂನು ಕ್ರಮ-ಗೃಹ ಸಚಿವ

• ಪ್ರಜೋದಯ ವರದಿ

ಬೆಂಗಳೂರು: ಧರ್ಮಸ್ಥಳ ಸುತ್ತ ಮುತ್ತ ಶವಗಳನ್ನು ಹೂತಿರುವುದಾಗಿ ಅನಾಮಿಕ ವ್ಯಕ್ತಿ ಹೇಳಿಕೊಂಡಿರುವ ವಿಚಾರದ ಬಗ್ಗೆ ಸರ್ಕಾರ ರಚಿಸಿರುವ ಎಸ್‌ಐಟಿ ತನಿಖೆಯ ಮಧ್ಯಂತರ ವರದಿ ಹಾಗು ಅನಾಮಿಕ ವ್ಯಕ್ತಿಯ ಗುರುತು ಬಹಿರಂಗಪಡಿಸಬೇಕೆಂದು ಬಿಜೆಪಿ ಸದಸ್ಯರು ವಿಧಾನಸಭೆಯಲ್ಲಿ ಆಗ್ರಹಿಸಿದರು.

ಕಲಾಪದ ಚರ್ಚೆಯ ಸಂದರ್ಭದಲ್ಲಿ ಬಿಜೆಪಿ ಶಾಸಕರು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿ, ಧರ್ಮಸ್ಥಳ ಮತ್ತು ಅಲ್ಲಿನ ದೇವಸ್ಥಾನ ಗುರಿಯಾಗಿಸಿಕೊಂಡು ಅಪಪ್ರಚಾರ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮಾತನಾಡಿ, ಅನಾಮಿಕನ ಮಾತು ಕೇಳಿಕೊಂಡು ಎಡಪಂಥೀಯರ ಕುಮ್ಮಕ್ಕಿನಿಂದ 20 ವರ್ಷ ಹಿಂದೆ ಹೂಳಲಾಗಿದೆ ಎನ್ನುವ ಶವಗಳನ್ನು ಪತ್ತೆ ಮಾಡಲು ದಿನಕ್ಕೊಂದು ಕಡೆ ಸಿಕ್ಕಸಿಕ್ಕ ಜಾಗದಲ್ಲಿ 20 ಅಡಿ ಅಗೆಯುತ್ತಿರುವ ಸರ್ಕಾರದ ಮೂರ್ಖತನಕ್ಕೆ ಏನು ಹೇಳೋಣ. ಆರೋಪ ಮಾಡುತ್ತಿರುವ ಅನಾಮಿಕ ವ್ಯಕ್ತಿಯ ಗುರುತು



ಬಹಿರಂಗವಾಗಲಿ. ಅವನು ತೋರಿಸಿದ ಕಡೆಯೆಲ್ಲೆಲ್ಲಾ ಮೂರ್ಖರಂತೆ ಗುಂಡಿ ತೋಡುವುದು ಬಿಟ್ಟು ಎಸ್‌ಐಟಿ ತನಿಖೆ ಸರಿಯಾದ ರೀತಿಯಲ್ಲಿ ಮುಂದುವರೆಯಲಿ. ಈ ವಿಚಾರದಲ್ಲಿ ಸರ್ಕಾರದ ಮೂರ್ಖ ನಡೆ ಈಗಾಗಲೇ ಜನರ ಮುಂದೆ ನಗೆಪಾಟಲಿಗೆ ಈಡಾಗಿದೆ ಎಂದಿದ್ದಾರೆ.

ಬಿ.ವೈ.ವಿಜಯೇಂದ್ರ ಮಾತನಾಡಿ, ಎಸ್‌ಐಟಿ ತನಿಖೆ ಮಾಡುವುದಿಲ್ಲ ಎನ್ನುತ್ತಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಎಸ್‌ಐಟಿ ರಚಿಸುವಂತೆ ಯಾವ ಶಕ್ತಿಗಳು, ಯಾವ ಸಂಘಟನೆಗಳು ಒತ್ತಡ ಹೇರಿದ್ದವು ಎಂಬುದನ್ನು ಸದನದಲ್ಲಿ ಬಹಿರಂಗಪಡಿಸಬೇಕು. ಸರ್ಕಾರ ಧರ್ಮಸ್ಥಳ ತನಿಖೆಯ ಮಧ್ಯಂತರ ವರದಿಯನ್ನು ನೀಡಬೇಕು. ಆ ಮುಸುಕುಧಾರಿಯ ಹಿನ್ನೆಲೆ ಏನು, ಆತನ ಹಿಂದೆ ಇರುವವರು ಯಾರೆಂಬುದು ತನಿಖೆಯಾಗಬೇಕೆಂದು ಒತ್ತಾಯಿಸಿದರು.

### ಆರೋಪ ಸುಳ್ಳಾದರೆ ಕ್ರಮ

ಧರ್ಮಸ್ಥಳ ಸಾಮೂಹಿಕ ಸಮಾಧಿ ಪ್ರಕರಣದ ಸಾಕ್ಷಿ ದೂರುದಾರನ ಆರೋಪಗಳು ಸುಳ್ಳು ಎಂದು ವಿಶೇಷ ತನಿಖಾ ತಂಡಕ್ಕೆ ಕಂಡು ಬಂದರೆ ಆತನ ವಿರುದ್ಧ ಕಾನೂನಿನಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಜಿ.ಪರಮೇಶ್ವರ್ ಅವರು ವಿಧಾನಸಭೆಗೆ ತಿಳಿಸಿದರು.

ಯಾವುದೇ ರಾಜಕೀಯ ಅಥವಾ ಧರ್ಮ ಒಳಗೊಂಡಿರಬಾರದು. ಕಾನೂನಿನ ಚೌಕಟ್ಟಿನೊಳಗೆ ಸತ್ಯ ಹೊರಹೊಮ್ಮಬೇಕೆಂಬ ಕಾರಣಕ್ಕೆ ತನಿಖೆ ನಡೆಸಲಾಗುತ್ತಿದೆ. ಈ ವಿಷಯವು ರಾಜಕೀಯ ಅಥವಾ ಧಾರ್ಮಿಕ ತಿರುವುಗಳನ್ನು ಪಡೆಯಬಾರದೆಂಬುದು ನನ್ನ ಏಕೈಕ ವಿನಂತಿ. ಸರ್ಕಾರ ಯಾವುದೇ ಒತ್ತಡದಿಂದ ಎಸ್‌ಐಟಿಯನ್ನು ರಚಿಸಿಲ್ಲ. ನಾವು ಇಲ್ಲಿಯವರೆಗೆ ಒತ್ತಡಕ್ಕೆ ಮಣಿದಿಲ್ಲ ಮತ್ತು ಭವಿಷ್ಯದಲ್ಲಿ ಹಾಗೆ ಮಣಿಯುವುದಿಲ್ಲ. ಸತ್ಯವನ್ನು ಬಹಿರಂಗಪಡಿಸುವುದು ಮತ್ತು ನ್ಯಾಯವನ್ನು ಖಚಿತಪಡಿಸಿಕೊಳ್ಳುವುದು ಮಾತ್ರ ನಮ್ಮ ಉದ್ದೇಶವೆಂದು ಸ್ಪಷ್ಟಪಡಿಸಿದರು.

### ದೊಡ್ಡ ಷಡ್ಯಂತ್ರ ನಡೆದಿದೆ: ಡಿ.ಕೆ.ಶಿ.



ಧರ್ಮಸ್ಥಳ ವಿಚಾರದಲ್ಲಿ ದೊಡ್ಡ ಷಡ್ಯಂತ್ರ ನಡೆದಿದೆ. ಅದನ್ನು ಯಾರು ಮಾಡಿದ್ದಾರೆಂದು ನಾನು ಹೇಳುವುದಿಲ್ಲ. ಧರ್ಮಸ್ಥಳದ ಆಡಳಿತ ಮಂಡಳಿ ಮೇಲೆ ಕಪ್ಪು ಚುಕ್ಕೆ ತರಲು ಅತ್ಯಂತ ವ್ಯವಸ್ಥಿತವಾಗಿ ಷಡ್ಯಂತ್ರ ರೂಪಿಸಲಾಗಿದೆ ಎಂದು ಉಪಮುಖ್ಯಂತ್ರಿ ಡಿ.ಕೆ. ಶಿವಕುಮಾರ್ ಅವರು ತಿಳಿಸಿದ್ದಾರೆ.

ವಿಧಾನಸಭೆ ಕಲಾಪದಲ್ಲಿ ಮಾತನಾಡಿದ ಅವರು, ನಾನು ಧರ್ಮಸ್ಥಳ ಕ್ಷೇತ್ರ ಹಾಗು ಆ ದೇವಸ್ಥಾನದ ಮೇಲೆ ನಂಬಿಕೆ ಇರುವವನು. ನನಗೆ ಧರ್ಮಾಧಿಕಾರಿಗಳ ಮೇಲೂ ನಂಬಿಕೆ ಇದೆ. ಅವರ ಆಚಾರ ವಿಚಾರಗಳ ಬಗ್ಗೆ ಅರಿವಿದೆ. ಈ ಪ್ರಕರಣದಲ್ಲಿ ಪರಿಸ್ಥಿತಿ ಏನಿದೆ ಎಂದು ಗೃಹ ಸಚಿವರು ವಿವರಣೆ ನೀಡುತ್ತಾರೆ ಎಂದರು.

ನಮಗೆ ಈ ಪ್ರಕರಣದ ವಿಚಾರ ಗೊತ್ತಿದೆ. ಸರ್ಕಾರ ಎಸ್‌ಐಟಿ ರಚಿಸಲು ಕಾರಣವೇನೆಂಬುದನ್ನು ವಿವರಿಸುತ್ತಾರೆ. ಈ ವಿಚಾರವಾಗಿ ಇಲ್ಲಿ ನಾವು ನಾಲ್ಕು ಜನ ಮಾತನಾಡುವುದಷ್ಟೇ ಅಲ್ಲ. ಲಕ್ಷಾಂತರ ಭಕ್ತರು ಈ ಕ್ಷೇತ್ರ ನಂಬಿದ್ದಾರೆ. ದೇಶದಲ್ಲಿ ಅನ್ನ ದಾಸೋಹ ಆರಂಭವಾಗದೇ ಇದ್ದ ಕಾಲದಲ್ಲೇ ಈ ಕ್ಷೇತ್ರದಲ್ಲಿ ಆರಂಭಿಸಲಾಗಿತ್ತು. ಈ ವಿಚಾರವನ್ನು ನೀವು ರಾಜಕೀಯವಾಗಿ ತಿರುಗಿಸಬೇಡಿ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷ, ಕಾಂಗ್ರೆಸ್ ಹೈಕಮಾಂಡ್ ಎಂದು ಎಳೆದು ತರಬೇಡಿ. ಈ ಪ್ರಕರಣದಲ್ಲಿ ಕಾಂಗ್ರೆಸ್ ಯಾಕೆ ಹಸ್ತಕ್ಷೇಪ ಮಾಡುತ್ತದೆ. ಅಲ್ಲಿನ ಆಂತರಿಕ ಸಮಸ್ಯೆಯಿಂದ ಯಾವನೋ ಒಬ್ಬ ಬಂದು ಆರೋಪ ಮಾಡಿದ್ದಾನೆ. ನಿಮಗಿಂತ ಹೆಚ್ಚಾಗಿ ನಮ್ಮ ಪಕ್ಷದಲ್ಲೇ ಅನೇಕ ಶಾಸಕರು ಧರ್ಮಸ್ಥಳ ಕ್ಷೇತ್ರದ ಬಗ್ಗೆ ಧ್ವನಿ ಎತ್ತಿದ್ದಾರೆ. ಶಾಸಕಾಂಗ ಪಕ್ಷದ ಸಭೆಯಲ್ಲಿ ಧರ್ಮಸ್ಥಳ ಕ್ಷೇತ್ರದ ಧಾರ್ಮಿಕ ನಂಬಿಕೆ ಉಳಿಸಬೇಕೆಂದು ಒತ್ತಾಯಿಸಿದ್ದಾರೆಂದು ಹೇಳಿದರು.

# 9 ಕೋ.ರೂ. ಅನುದಾನಕ್ಕೆ ನಿರ್ಲಕ್ಷ್ಯ ಸಲ್ಲದು: ಎ.ಮಂಜು

## ಕ್ಯಾಥ್‌ಲ್ಯಾಬ್‌ಗೆ ಜೆಡಿಎಸ್ ಶಾಸಕರ ಮನವಿ | ಸರ್ಕಾರದ ನಡೆಗೆ ಬೇಸರ

• ಪ್ರಜೋದಯ ವರದಿ

**ಹಾಸನ:** ನಗರದ ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಕ್ಯಾಥ್ ಲ್ಯಾಬ್‌ನ ಅವಶ್ಯಕತೆ ಹೆಚ್ಚಿದ್ದು, ಅದಕ್ಕಾಗಿ ಕೇವಲ 9.24 ಕೋ. ರೂ. ಅನುದಾನ ನೀಡಲು ನಿರ್ಲಕ್ಷ್ಯ ವಹಿಸುತ್ತಿರುವುದು ಏಕೆಂದು ಅರಕಲಗೂಡು ಶಾಸಕ ಎ.ಮಂಜು ಅವರು ಸರ್ಕಾರವನ್ನು ಪ್ರಶ್ನಿಸಿದರು.

ವಿಧಾನಸಭೆ ಅಧಿವೇಶನದಲ್ಲಿ ಗುರುವಾರ ಶೂನ್ಯ ವೇಳೆಯಲ್ಲಿ ವಿಷಯ ಪ್ರಸ್ತಾಪಿಸಿದ ಅವರು, ಜಿಲ್ಲೆಯಲ್ಲಿ ಹೃದಯಾಘಾತದಿಂದ ಸಾಕಷ್ಟು ಪ್ರಾಣ ಹಾನಿ ಸಂಭವಿಸಿದೆ. ಸರ್ಕಾರವೂ ಜಯದೇವ ಆಸ್ಪತ್ರೆಯ ಡಾ|| ರವೀಂದ್ರನಾಥ್ ನೇತೃತ್ವದಲ್ಲಿ ಸಮಿತಿ ರಚಿಸಿ ವರದಿ ಪಡೆದಿದೆ. 30 ರಿಂದ 40 ವರ್ಷದ ಒಳಗಿನವರೇ ಹೆಚ್ಚು ಸಾವಿಗೀಡಾಗಿದ್ದಾರೆ. ಹಠಾತ್ ಸಾವಿನಿಂದ ಎಷ್ಟೋ ಕುಟುಂಬಗಳು ಚಿಂತಾಕ್ರಾಂತವಾಗಿವೆ. ಜಿಲ್ಲೆಯಲ್ಲಿ ಈಗಲೂ ಭಯದ ವಾತಾವರಣ ಇದೆ ಎಂದರು.

ತುರ್ತಾಗಿ ಕ್ಯಾಥ್ ಲ್ಯಾಬ್ ನಿರ್ಮಾಣಕ್ಕೆ 9.24 ಕೋ.ರೂ. ನೀಡುವಂತೆ ಜೆಡಿಎಸ್ ಶಾಸಕರು ಜಂಟಿಯಾಗಿ ಮನವಿ ಸಲ್ಲಿಸಿದ್ದೆವು. ಆದರೆ, ಸರ್ಕಾರ



ಲಭ್ಯತೆ ಆಧಾರದ ಮೇಲೆ ಅನುದಾನ ಒದಗಿಸಲಾಗುವುದು ಎಂದಿದೆ. ಕೇವಲ 9 ಕೋ.ರೂ. ಹಣ ನೀಡಲು ನಿರ್ಲಕ್ಷ್ಯ ವಹಿಸುತ್ತಿರುವುದು ಏಕೆ. ಜನರ ಪ್ರಾಣ ರಕ್ಷಣೆ ಸರ್ಕಾರದ ಹೊಣೆಯಲ್ಲವೇ. ಇದು ಭರಿಸಲು ಸಾಧ್ಯವಾಗದಂತಹ ದೊಡ್ಡ ಮೊತ್ತವೇನಲ್ಲ. ತುರ್ತಾಗಿ ಕ್ಯಾಥ್‌ಲ್ಯಾಬ್ ನಿರ್ಮಿಸಿಕೊಡಬೇಕೆಂದು ಮನವಿ ಮಾಡಿದರು.

### ಆನೆ ಕಾರ್ಯಪಡೆ ಕಾಮಗಾರಿ ಕಳಪೆ

ಬೇಲೂರು ಶಾಸಕ ಹೆಚ್.ಕೆ.ಸುರೇಶ್ ಅವರು ಮಾತನಾಡಿ, ಮಲೆನಾಡು ಭಾಗದಲ್ಲಿ ಕಾಡಾನೆ ಹಾವಳಿಯಿಂದ ಬೆಳೆಗಾರರು ಕಂಗಾಲಾಗಿದ್ದಾರೆ. ಆನೆ ದಾಳಿಯಿಂದ ಅನೇಕ ರೈತರು, ಕೂಲಿ ಕಾರ್ಮಿಕರು ಪ್ರಾಣ ಕಳೆದುಕೊಂಡಿದ್ದಾರೆ. ಮಲೆನಾಡು ಭಾಗದ ಜನರು ಎದುರಿಸುತ್ತಿರುವ ಸಂಕಷ್ಟ ಯಾರಿಗೂ ಬೇಡ. ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ಸ್ಥಳಕ್ಕೆ ಭೇಟಿ ಪರಿಸ್ಥಿತಿ ಅರಿತಿದ್ದಾರೆ. ಆದ್ದರಿಂದಲೇ ಅವರು ಬಿಕ್ಕೋಡಿನಲ್ಲಿ ಆನೆ ಕಾರ್ಯಪಡೆ ಕಚೇರಿ ತೆರೆಯಲು ಕ್ರಮ ಕೈಗೊಳ್ಳಲಾಗಿದೆ. 40 ಲಕ್ಷ ರೂ. ವೆಚ್ಚದಲ್ಲಿ ಕಾಮಗಾರಿ ಕೈಗೊಳ್ಳಲಾಗಿದೆ ಯಾದರೂ ಸಂಪೂರ್ಣ ಕಳಪೆಯಾಗಿದೆ ಎಂದು ಫೋಟೋ, ವಿಡಿಯೋ ಸಾಕ್ಷಿ ಸಮೇತ ಸದನದ ಮುಂದಿಟ್ಟರು.

ಅರಣ್ಯ ಸಚಿವರು ಮುತುವರ್ಜಿ ವಹಿಸಿ ಕೆಲಸ ಮಾಡುತ್ತಿದ್ದಾರೆ. ಆದರೆ, ಅಧಿಕಾರಿಗಳ ನಿರ್ಲಕ್ಷ್ಯದಿಂದ ಯೋಜನೆ ಹಳ್ಳ ಹಿಡಿಯುತ್ತಿದೆ. ಕಟ್ಟಡ ನಿರ್ಮಾಣಕ್ಕೆ ಕಳಪೆ ಸಿಮೆಂಟ್, ಮರಳು ಬಳಸುತ್ತಿದ್ದಾರೆ. ಈ ಸಂಬಂಧ ಸ್ಥಳೀಯರು ಪ್ರಶ್ನಿಸಿದರೆ ಉಡಾಫೆಯಿಂದ ವರ್ತಿಸುತ್ತಾರೆ. ಈ ದಿಶೆಯಲ್ಲಿ ಅಧಿಕಾರಿಗಳಿಗೆ ಎಚ್ಚರಿಕೆ ನೀಡುವ ಕೆಲಸ ಸರ್ಕಾರದಿಂದ ಆಗಬೇಕು. ಆನೆ ಹಾವಳಿಯಿಂದ ಆಗುತ್ತಿರುವ ಅನಾಹುತ ತಪ್ಪಿಸಬೇಕೆಂದು ಮನವಿ ಮಾಡಿದರು.

# ಕೇಂದ್ರ ಕಸಾಪ ಗೌರವ ಕಾರ್ಯದರ್ಶಿಯಾಗಿ ಹೆಚ್.ಬಿ.ಮದನಗೌಡ



• ಪ್ರಜೋದಯ ವರದಿ

**ಹಾಸನ:** ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ ಗೌರವ ಕಾರ್ಯದರ್ಶಿಯನ್ನಾಗಿ ಕಸಾಪ ಮಾಜಿ ಜಿಲ್ಲಾಧ್ಯಕ್ಷ ಹೆಚ್.ಬಿ.ಮದನಗೌಡ ಅವರನ್ನು ಪರಿಷತ್ ಅಧ್ಯಕ್ಷ ಡಾ.ಮಹೇಶ್ ಜೋಶಿ ಅವರು ನೇಮಕ ಮಾಡಿ, ಆದೇಶ ಪತ್ರವನ್ನು ಗುರುವಾರ ಕಸಾಪ ಪ್ರಧಾನ ಕಚೇರಿಯಲ್ಲಿ ಹಸ್ತಾಂತರಿಸಿದರು.

ಹೆಚ್.ಬಿ.ಮದನಗೌಡ ಅವರು ಕಳೆದ ಮೂರು ದಶಕಗಳಿಂದ ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ಸಕ್ರಿಯರಾಗಿದ್ದಾರೆ. ಹಾಸನ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದ ಇವರ ಅವಧಿಯಲ್ಲಿ ಹಲವು ಪ್ರಮುಖ ಸಾಹಿತ್ಯ ಚಟುವಟಿಕೆಗಳು ನಡೆದಿದ್ದು, ಕನ್ನಡಪರ ಚಿಂತನ-ಮಂಥನಗಳು, ವಿಚಾರಗೋಷ್ಠಿಗಳು ನಡೆದಿವೆ. ಕನ್ನಡ ಸಾಹಿತ್ಯದ ಪ್ರಮುಖ ಬರಹಗಾರರೆಲ್ಲರ ಜೊತೆಗೆ ನಿಕಟ ಸಂಬಂಧ ಹೊಂದಿರುವ ಹೆಚ್.ಬಿ. ಮದನ ಗೌಡರು ನಿರಂತರವಾಗಿ ಕನ್ನಡ ಸಾಹಿತ್ಯದ ಮತ್ತು ಕನ್ನಡಪರ ಸಂಘಟನೆಗಳಲ್ಲಿ ತೊಡಗಿಕೊಂಡಿದ್ದಾರೆ.

ಜನಮಿತ್ರ ಪತ್ರಿಕೆ ಪ್ರಧಾನ ಸಂಪಾದಕರಾಗಿರುವ ಅವರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ನಿರ್ದೇಶಕರಾಗಿ, ನವದೆಹಲಿಯ ಕಾರ್ಯನಿರತ ಪತ್ರಕರ್ತರ ಸಂಘದ ಅಪರ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯಾಗಿ ಅನುಭವ ಪಡೆದಿರುವ ಅವರು ಹಾಸನ ಜಾನಪದ ಪರಿಷತ್ತಿನ ಅಧ್ಯಕ್ಷರಾಗಿ, ನವದೆಹಲಿಯ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷರಾಗಿ ಹೀಗೆ ಹಲವು ಸಂಘಟನೆಗಳಲ್ಲಿ ಸೇವೆ ಸಲ್ಲಿಸಿದ ಸಶಕ್ತ ಅನುಭವವನ್ನು ಪಡೆದಿದ್ದಾರೆ. ಶ್ರವಣಬೆಳಗೊಳದಲ್ಲಿ 2006 ಮತ್ತು 2018ರಲ್ಲಿ ನಡೆದ ಮಹಾಮಸ್ತಕಾಭಿಷೇಕದ ರಾಷ್ಟ್ರ, ಅಂತರ್‍ರಾಷ್ಟ್ರೀಯ ಮಾಧ್ಯಮ ಸಂಯೋಜಕರಾಗಿ ಕಾರ್ಯನಿರ್ವಹಿಸುವುದರ ಜೊತೆಗೆ ಕನ್ನಡ ಪ್ರಥಮ ಶಿಲಾಶಾಸನ ದೊರೆತ ಹಲ್ಮಿಡಿ ಗ್ರಾಮದಲ್ಲಿ ಶಾಸನದ ಪ್ರತಿಕೃತಿ ನಿರ್ಮಾಣದಲ್ಲಿ ಮುಖ್ಯ ಪಾತ್ರವನ್ನು ವಹಿಸಿದ್ದಾರೆ.

ಕನ್ನಡ ಭಾಷೆಯ ಕುರಿತ ಅದಮ್ಯ ಪ್ರೇಮ ಮತ್ತು ಕನ್ನಡ ನಾಡಿನ ಕುರಿತು ಅಪಾರ ಅಭಿಮಾನ, ಬರಹಗಾರರರೊಂದಿಗೆ ಒಡನಾಟ, ಅಧ್ಯಯನ ಶೀಲತೆ ಹೀಗೆ ಬಹಮುಖಿ

» ನಾಲ್ಕನೇ ಪುಟದಲ್ಲಿ

# ಹೆಚ್‌ಡಿಸಿಸಿ ಬ್ಯಾಂಕ್: ಮುಂದುವರೆಯಲಿದೆ ಜೆಡಿಎಸ್ ಹಿಡಿತ

• ಪ್ರಜೋದಯ ವರದಿ

- ಇಂದು ನಾಮಪತ್ರ ಹಿಂಪಡೆಯಲು ಅವಕಾಶ
- 11 ಮಂದಿ ಅವಿರೋಧ ಆಯ್ಕೆ ಖಚಿತ
- ಆ.21ರಂದು 2 ಸ್ಥಾನಗಳಿಗೆ ಮಾತ್ರ ಚುನಾವಣೆ

**ಹಾಸನ:** ಹಾಸನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನ 13 ನಿರ್ದೇಶಕ ಸ್ಥಾನಗಳಲ್ಲಿ 11 ಮಂದಿ ಜೆಡಿಎಸ್ ಬೆಂಬಲಿತರು ಅವಿರೋಧವಾಗಿ ಆಯ್ಕೆಯಾಗುವುದು ಬಹುತೇಕ ಖಚಿತವಾಗಿದೆ.

13 ಸ್ಥಾನಗಳಿಗೆ ಒಟ್ಟು 28 ಮಂದಿ ನಾಮಪತ್ರ ಸಲ್ಲಿಸಿದ್ದಾರೆ. ಗುರುವಾರ ನಾಮಪತ್ರಗಳ ಪರಿಶೀಲನೆ ನಡೆಸಿ ಎಲ್ಲವೂ ಕ್ರಮಬದ್ಧಗೊಂಡಿವೆ ಎಂದು ಚುನಾವಣಾಧಿಕಾರಿ ಪ್ರಕಟಿಸಿದ್ದಾರೆ. ಶುಕ್ರವಾರ ನಾಮಪತ್ರ ಹಿಂಪಡೆದುಕೊಳ್ಳಲು ಅವಕಾಶ ನೀಡಿರುವುದರಿಂದ ಪಟ್ಟಣ ಸಹಕಾರ ಬ್ಯಾಂಕ್ ಮತ್ತು ವ್ಯವಸಾಯೇತರ ಪತ್ತಿನ ಸಹಕಾರ ಸಂಘಗಳ ಕ್ಷೇತ್ರ ಹಾಗು ಇತರೆ ಸಹಕಾರ ಸಂಘಗಳ ಕ್ಷೇತ್ರವನ್ನು ಹೊರತು ಪಡಿಸಿ ಉಳಿದೆಲ್ಲ ಕ್ಷೇತ್ರಗಳ ಜೆಡಿಎಸ್‌ನ ಮುಖ್ಯ ಅಭ್ಯರ್ಥಿಗಳನ್ನು ಬಿಟ್ಟು ಉಳಿದವರು ನಾಮಪತ್ರಗಳನ್ನು ಹಿಂಪಡೆದುಕೊಳ್ಳಲಿದ್ದಾರೆ. ಹೀಗಾಗಿ 11 ನಿರ್ದೇಶಕರು ಅವಿರೋಧವಾಗಿ ಆಯ್ಕೆಯಾಗಲಿದ್ದಾರೆ ಎನ್ನಲಾಗಿದೆ.

ಜಿಲ್ಲೆಯ ಹಾಲು ಉತ್ಪಾದಕರ ಸಹಕಾರ ಸಂಘಗಳ ಕ್ಷೇತ್ರಕ್ಕೆ 3 ಸ್ಥಾನ, ಹಾಸನ, ಚನ್ನರಾಯಪಟ್ಟಣ, ಹೊಳೆನರಸೀಪುರ, ಅರಸೀಕೆರೆ, ಆಲೂರು-



ಸಕಲೇಶಪುರ, ಬೇಲೂರು, ಅರಕಲಗೂಡು ತಾಲ್ಲೂಕು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಕ್ಷೇತ್ರಕ್ಕೆ 7 ಸ್ಥಾನ, ಕೃಷಿ ಉತ್ಪನ್ನ ಮಾರಾಟ ಸಹಕಾರ ಸಂಘಗಳ ಕ್ಷೇತ್ರ 1 ಸ್ಥಾನ, ಪಟ್ಟಣ ಸಹಕಾರ ಬ್ಯಾಂಕ್ ಮತ್ತು ವ್ಯವಸಾಯೇತರ ಪತ್ತಿನ ಸಹಕಾರ ಸಂಘಗಳ ಕ್ಷೇತ್ರ 1, ಇತರೆ ಸಹಕಾರ ಸಂಘಗಳ ಕ್ಷೇತ್ರಕ್ಕೆ 1 ಸ್ಥಾನ ಮೀಸಲಾಗಿದೆ.

**ಯಾರ್‍ಯಾರು ಆಯ್ಕೆ ಸಾಧ್ಯತೆ**

ಚನ್ನರಾಯಪಟ್ಟಣ ತಾಲ್ಲೂಕು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಕ್ಷೇತ್ರದಿಂದ ಶಾಸಕ ಸಿ.ಎನ್.ಬಾಲಕೃಷ್ಣ, ಹೊಳೆನರಸೀಪುರ ಕ್ಷೇತ್ರದಿಂದ ವಿಧಾನ ಪರಿಷತ್ ಸದಸ್ಯ ಡಾ. ಸೂರಜ್ ರೇವಣ್ಣ, ಹಾಸನ ಕ್ಷೇತ್ರದಿಂದ ಹನುಮೇಗೌಡ, ಅರಸೀಕೆರೆಯಿಂದ ಆರ್.ಎನ್.ಶೇಖರಪ್ಪ, ಆಲೂರು-ಸಕಲೇಶಪುರ ಕ್ಷೇತ್ರದಿಂದ ಪಿ.ಜಗದೀಶ್, ಬೇಲೂರು ಕ್ಷೇತ್ರದಿಂದ ಎಂ.ಎ.ನಾಗರಾಜು, ಅರಕಲಗೂಡು ಕ್ಷೇತ್ರದಿಂದ ಸತೀಶ್ ಹೊನ್ನವಳ್ಳಿ, ಹಾಲು ಉತ್ಪಾದಕರ ಸಂಘದಿಂದ ಹೆಚ್‌ಡಿಸಿಸಿ ಬ್ಯಾಂಕ್ ಹಾಲಿ ಅಧ್ಯಕ್ಷ ಸೋಮನಹಳ್ಳಿ ನಾಗರಾಜ್, ಹೆಚ್.ಎನ್.ಗಂಗಾಧರ್, ಹನುಮಗೌಡ, ಕೃಷಿ ಉತ್ಪನ್ನ ಮಾರಾಟ ಸಹಕಾರ ಸಂಘ ಕ್ಷೇತ್ರದಿಂದ ಹೆಚ್.ಎನ್.ದೇವೇಗೌಡ ಅವರು ಆಯ್ಕೆಯಾಗುವುದು ಬಹುತೇಕ ಖಚಿತವಾಗಿದೆ.

**ಯಾವ ಕ್ಷೇತ್ರಕ್ಕೆ ಚುನಾವಣೆ**

ಪಟ್ಟಣ ಸಹಕಾರ ಬ್ಯಾಂಕ್‌ಗಳು ಮತ್ತು ವ್ಯವಸಾಯೇತರ ಪತ್ತಿನ ಸಹಕಾರ ಸಂಘಗಳ ಕ್ಷೇತ್ರ ಹಾಗು ಗ್ರಾಹಕರ ಸಹಕಾರ ಸಂಘಗಳು, ಸಗಟು ಮಾರಾಟ ಮಳಿಗೆಗಳು ಹಾಗು ಇತರೆ ಸಹಕಾರ ಸಂಘಗಳ ಕ್ಷೇತ್ರಕ್ಕೆ ಆ.21ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಚುನಾವಣೆ ನಡೆಯಲಿದ್ದು, ಅಂದೇ ಮತ ಎಣಿಕೆ ಕಾರ್ಯ ನಡೆದು, ಫಲಿತಾಂಶ ಪ್ರಕಟಗೊಳ್ಳಲಿದೆ.

ಪಟ್ಟಣ ಸಹಕಾರ ಬ್ಯಾಂಕ್‌ಗಳು ಮತ್ತು ವ್ಯವಸಾಯೇತರ ಕ್ಷೇತ್ರಕ್ಕೆ ಗಿರೀಶ್ ಚನ್ನವೀರಪ್ಪ, ಪಿ.ಟಿ. ಸೋಮಶೇಖರ್, ಎಂ.ಬಿ.ರುದ್ರೇಶ್ ಸ್ಪರ್ಧೆ ಮಾಡಿದ್ದು, ಈ ಮೂವರ ನಡುವೆ ಸ್ಪರ್ಧೆ ನಡೆಯಲಿದೆ. ಈ ಕ್ಷೇತ್ರದಲ್ಲಿ ಒಟ್ಟು 45 ಮತದಾರರಿದ್ದಾರೆ. ಇತರೆ ಕ್ಷೇತ್ರದಿಂದ ಬಿದರಿಕೆರೆ ಜಯರಾಮ್, ಪುಟ್ಟರಾಜೇಗೌಡ, ದರ್ಪಣ ಗೋಪಾಲ್ ನಡುವೆ ಪೈಪೋಟಿ ನಡೆಲಿದೆ. ಈ ಕ್ಷೇತ್ರದಲ್ಲಿ ಒಟ್ಟು 55 ಮತದಾರರಿದ್ದಾರೆ. ಈ ಎರಡು ಕ್ಷೇತ್ರವನ್ನು ಜೆಡಿಎಸ್‌ಪ್ರತಿಷ್ಠೆಯ ಪ್ರಶ್ನೆಯಾಗಿ ತೆಗೆದುಕೊಂಡಿರುವುದರಿಂದ ಗೆಲುವಿಗಾಗಿ ಕಸರತ್ತು ನಡೆಸುತ್ತಿದೆ.

### ಸೂರಜ್ ರೇವಣ್ಣಗೆ ಅಧ್ಯಕ್ಷ ಸ್ಥಾನ

13 ಸ್ಥಾನಗಳ ಪೈಕಿ 11 ಸ್ಥಾನಗಳಲ್ಲಿ ಅವಿರೋಧವಾಗಿ ಆಯ್ಕೆಯಾಗುವ ಜೊತೆಗೆ ಉಳಿದ ಎರಡು ಕ್ಷೇತ್ರದಲ್ಲಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳೇ ಗೆಲುವು ಸಾಧ್ಯತೆ ನಿರೀಕ್ಷೆಯೊಂದಿಗೆ ಮತ್ತೊಮ್ಮೆ ಹೆಚ್‌ಡಿಸಿಸಿ ಬ್ಯಾಂಕ್ ಹಿಡಿತ ಜೆಡಿಎಸ್ ಪಾಲಾಗಲಿದೆ. ಈ ಬಾರಿ ವಿಧಾನ ಪರಿಷತ್ ಸದಸ್ಯ ಡಾ.ಸೂರಜ್ ರೇವಣ್ಣ ಅವರು ಅಧ್ಯಕ್ಷರಾಗುವ ಸಾಧ್ಯತೆ ಹೆಚ್ಚಿದೆ ಎನ್ನಲಾಗುತ್ತಿದೆ. ಶಾಸಕ ಸಿ.ಎನ್.ಬಾಲಕೃಷ್ಣ ಅವರು ಅಧ್ಯಕ್ಷ ಸ್ಥಾನದ ಆಕಾಂಕ್ಷಿಯಾಗದೆ ಇರುವುದರಿಂದ ಸೂರಜ್ ರೇವಣ್ಣ ಅವರಿಗೆ ಸುಲಭವಾಗಿ ಅಧ್ಯಕ್ಷಗಾದಿ ದೊರೆಯಲಿದೆ ಎನ್ನಲಾಗಿದೆ. ಈ ಮೂಲಕ ಜೆಡಿಎಸ್ ಸತತವಾಗಿ ಹೆಚ್‌ಡಿಸಿಸಿ ಬ್ಯಾಂಕ್ ಅಧಿಕಾರ ಉಳಿಸಿಕೊಂಡು ಹೋಗಲಿದೆ.

# ಭ್ರಮೆಯಲ್ಲಿ ಅಪಹರಣವೆಂದು ಪೇಚಿಗೆಸಿಲುಕಿಸಿದ ವಿದ್ಯಾರ್ಥಿನಿ

## ರಾತ್ರಿ ಕಂಡ ಕನಸು ನಿಜವೆಂದು ಗೋಗರೆದ ಬಾಲಕಿ | ತನಿಖೆ ಬಳಿಕ ಪ್ರಕರಣ ಸುಖಾಂತ್ಯ

• ಪ್ರಜೋದಯ ವರದಿ

**ಆಲೂರು:** ಶಾಲೆಗೆ ತೆರಳುತ್ತಿದ್ದಾಗ ಓಮಿನಿ ವಾಹನವೊಂದು ತನ್ನ ಬಳಿ ನಿಧಾನವಾಗಿ ಬಂದಿದ್ದರಿಂದ ಆತಂಕಗೊಂಡ ವಿದ್ಯಾರ್ಥಿನಿಯೊಬ್ಬಳು ಹೆದರಿ ಅಪಹರಣಕ್ಕೆ ಯತ್ನಿಸಿದರೆಂದು ಹೇಳಿ ಪೊಲೀಸರನ್ನು ಪೇಚಿಗೆ ಸಿಲುಕಿಸಿದ ಘಟನೆ ಗುರುವಾರ ನಡೆದಿದೆ.

ತಾಲ್ಲೂಕಿನ ಹಂಚೂರು ಸರ್ಕಾರಿ ಪ್ರೌಢಶಾಲೆಯಲ್ಲಿ 8ನೇ ತರಗತಿ ಓದುತ್ತಿರುವ ವಿದ್ಯಾರ್ಥಿನಿ ತನ್ನ ಊರಿನಿಂದ ಬೆಳಿಗ್ಗೆ ಶಾಲೆಗೆ ಬರುತ್ತಿದ್ದಾಗ ಲಗ್ಗೇಜ್ ತುಂಬಿದ ಓಮಿನಿಯೊಂದು ಹಿಂದಿನಿಂದ ಬಂದಿದೆ. ಹದಗೆಟ್ಟ ರಸ್ತೆ ಅದಾಗಿರುವುದರಿಂದ ವಿದ್ಯಾರ್ಥಿನಿ ಸಮೀಪ ಬಂದಾಗ ಚಾಲಕ ನಿಧಾನಕ್ಕೆ ಚಲಿಸಿದ್ದಾನೆ. ತನ್ನ ಅಪಹರಣಕ್ಕಾಗಿಯೇ ಬಂದರೆಂದು ಆತಂಕಗೊಂಡ ವಿದ್ಯಾರ್ಥಿನಿ ಬ್ಯಾಗ್ ಅನ್ನು ಪಕ್ಕದ ತೋಟಕ್ಕೆ ಎಸೆದು ಓಡಿಹೋಗಿದ್ದಾಳೆ. ರಸ್ತೆಯಲ್ಲಿ ಬರುತ್ತಿದ್ದ ಬೈಕ್ ಚಾಲಕ ಆಕೆಯನ್ನು ಕೂರಿಸಿಕೊಂಡು ಶಾಲೆಗೆ ಕರೆದುಕೊಂಡು ಬಂದಿದ್ದಾರೆ.

ಭಾರೀ ಆತಂಕದಲ್ಲಿದ್ದ ಬಾಲಕಿ ತನ್ನನ್ನು ಅಪಹರಣಕ್ಕೆ ಯತ್ನಿಸಿದರು. ವಾಹನದಲ್ಲಿ ನಮ್ಮದೇ ಶಾಲೆಯ ಸಮವಸ್ತ್ರ ಧರಿಸಿದ ಇಬ್ಬರು ಹುಡುಗಿಯರಿದ್ದರು. ಒಬ್ಬ ವ್ಯಕ್ತಿ ನನ್ನನ್ನು ಹಿಡಿಯಲು ವಾಹನದಿಂದ ಇಳಿದು ಬಂದ. ಅವರಿಂದ ತಪ್ಪಿಸಿಕೊಂಡು ಬಂದೆ ಎಂದು ಶಿಕ್ಷಕರಿಗೆ ಅಳುತ್ತಲೇ ವರದಿ ಒಪ್ಪಿಸಿದ್ದಾಳೆ. ವಿದ್ಯಾರ್ಥಿಯ ಅಳಲನ್ನು ಆಲಿಸಿದ ಸ್ಥಳೀಯರು ಬಾಲಕಿಯ ಹೇಳಿಕೆಯನ್ನು ಮೊಬೈಲ್ ಕ್ಯಾಮರಾದಲ್ಲಿ ಸೆರೆ ಹಿಡಿದು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟರು. ಮುಖ್ಯ ಶಿಕ್ಷಕ ನಾಗರಾಜು ಸಹ ವಿದ್ಯಾರ್ಥಿನಿಯ ಹೇಳಿಕೆಯನ್ನೇ ನಂಬಿ ವಿಡಿಯೋ ಹೇಳಿಕೆ ನೀಡಿದರು.

ಸುದ್ದಿ ತಿಳಿದು ಸ್ಥಳಕ್ಕಾಗಮಿಸಿದ ಆಲೂರು ಎಸ್‌ಐ ಮೋಹನ್‌ರೆಡ್ಡಿ, ಬಿಇಒ ಕೃಷ್ಣೇಗೌಡ ವಿದ್ಯಾರ್ಥಿ ಹೇಳಿಕೆ ಆಧರಿಸಿ ಸಮೀಪದ ಮನೆಯೊಂದರ ಸಿಸಿಟಿವಿ ಕ್ಯಾಮರಾ ಪರಿಶೀಲಿಸಿದಾಗ ಓಮಿನಿ ವಾಹನವೊಂದು ಚಲಿಸಿರುವುದು ತಿಳಿದಿದೆ. ಅದರ ನಂಬರ್‌ನ ಜಾಡು ಹಿಡಿದು ಪರಿಶೀಲನೆ ನಡೆಸಿದಾಗ ತಾಲ್ಲೂಕಿನ ಪಾಳ್ಯ ಹೋಬಳಿ ಕುಂಬಾರಹಳ್ಳಿ ಗ್ರಾಮದ ರವಿ ಎಂಬಾತ ಲಗ್ಗೇಜ್‌ನೊಂದಿಗೆ ರಸ್ತೆಯಲ್ಲಿ ತೆರಳಿರುವುದು ತಿಳಿದು

» ನಾಲ್ಕನೇ ಪುಟದಲ್ಲಿ

### ಇಂದು ಸ್ವಾತಂತ್ರ್ಯ ದಿನಾಚರಣೆ

ಹಾಸನ : ಜಿಲ್ಲಾ ಕ್ರೀಡಾಂಗಣದ ಹಾಕಿ ಮೈದಾನದಲ್ಲಿ ಆ.15 ರಂದು ಬೆಳಿಗ್ಗೆ 9 ಗಂಟೆಗೆ ಸ್ವಾತಂತ್ರ್ಯ ದಿನಾಚರಣೆ ಆಯೋಜಿಸಲಾಗಿದೆ.ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಧ್ವಜಾರೋಹಣ ನೆರವೇರಿಸುವರು. ಗೃಹಮಂಡಳಿ ಅಧ್ಯಕ್ಷ ಕೆ.ಎಂ. ಶಿವಲಿಂಗೇಗೌಡ, ಶಾಸಕ ಹೆಚ್.ಪಿ. ಸ್ವರೂಪ್, ಸಂಸದ ಶ್ರೇಯಸ್ ಪಟೇಲ್, ಮಾಜಿ ಸಚಿವ ಹೆಚ್.ಡಿ. ರೇವಣ್ಣ, ಜಿಲ್ಲೆಯ ಎಲ್ಲಾ ಶಾಸಕರು, ವಿಧಾನಪರಿಷತ್ ಸದಸ್ಯರು, ಮಹಾನಗರಪಾಲಿಕೆಯ ಮಹಾಪೌರ ಎಂ. ಚಂದ್ರೇಗೌಡ ಮತ್ತಿತರರು ಭಾಗವಹಿಸಲಿದ್ದಾರೆ.

# ಶ್ರವಣಬೆಳಗೊಳದಲ್ಲಿ ಹರ್ ಘರ್ ತಿರಂಗಾ ಜಾಥಾ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ :** ಶ್ರವಣಬೆಳಗೊಳದ ವಿಂಧ್ಯಗಿರಿ ಬೆಟ್ಟದ ಮಹಾದ್ವಾರದಲ್ಲಿ ಪುರಾತತ್ವ ಇಲಾಖೆ ಹಾಗು ಅಂಬಿಕಾ ಆಂಗ್ಲ ಮಾಧ್ಯಮ ಪ್ರೌಢಶಾಲೆ ವತಿಯಿಂದ ಗುರುವಾರ ಹರ್ ಘರ್ ತಿರಂಗಾ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿತ್ತು.

ಕೇಂದ್ರ ಪುರಾತತ್ವ ಇಲಾಖೆ ಹಾಸನ ಉಪ ವಿಭಾಗದ ಪುರಾತತ್ವ ಸಂರಕ್ಷಣಾಧಿಕಾರಿ ಸುನಿಲ್ ಕುಮಾರ್ ಅವರು ಮಾತನಾಡಿ, ಹರ್ ಘರ್ ತಿರಂಗಾ ಆಜಾದಿ ಕಾ ಅಮೃತ ಮಹೋತ್ಸವ ಅಂಗವಾಗಿ ನಡೆಸುವ ರಾಷ್ಟ್ರೀಯ ಹಬ್ಬ. ಈ ಅಭಿಯಾನದ





ಉದ್ದೇಶ ದೇಶದ ಪ್ರತಿಯೊಂದು ಮನೆಯಲ್ಲಿ ತ್ರಿವರ್ಣ ಧ್ವಜವನ್ನು ಹಾರಿಸುವ ಮೂಲಕ ರಾಷ್ಟ್ರಭಕ್ತಿಯನ್ನು ಹೆಚ್ಚಿಸಿ, ಧ್ವಜದ ಗೌರವವನ್ನು ಜನಮಾನಸದಲ್ಲಿ ಗಟ್ಟಿಗೊಳಿಸುವುದಾಗಿದೆ ಎಂದರು.

ರಾಷ್ಟ್ರೀಯ ಏಕತೆಯನ್ನು ಬಲಪಡಿಸಿ ವಿದ್ಯಾರ್ಥಿಗಳು ಹಾಗು ಯುವಕರಲ್ಲಿ ದೇಶಭಕ್ತಿಯನ್ನು ಹೆಚ್ಚಿಸುವುದರೊಂದಿಗೆ ನಾಡು-ನುಡಿಗೆ ಗೌರವ ನೀಡಿ ಪ್ರತಿ ನಾಗರಿಕನ ಮನಸ್ಸಿ

» ನಾಲ್ಕನೇ ಪುಟದಲ್ಲಿ

# ಪತ್ನಿ ಹತ್ಯೆಗೈದು ಆತ್ಮಹತ್ಯೆಗೆ ಯತ್ನಿಸಿದ ಪತಿ

• ಪ್ರಜೋದಯ ವರದಿ

**ಸಕಲೇಶಪುರ:** ಕೌಟುಂಬಿಕ ಕಲಹ ದಿಂದ ಶುರುವಾದ ಜಗಳದಲ್ಲಿ ಪತಿ ಮಚ್ಚಿನಿಂದ ಕೊಚ್ಚಿ ಪತ್ನಿಯನ್ನು ಕೊಲೆ ಮಾಡಿ ತಾನೂ ಆತ್ಮಹತ್ಯೆಗೆ ಯತ್ನಿಸಿ ರುವ ಘಟನೆ ತಾಲ್ಲೂಕಿನ ಬೇಡರಜಗ್ಲಿ ಗ್ರಾಮದಲ್ಲಿ ಬುಧವಾರ ನಡೆದಿದೆ.

ಗ್ರಾಮದ ಶಿವಮ್ಮ (60) ಮೃತ ಪಟ್ಟಿದ್ದಾರೆ. ಪತಿ ಸಿದ್ದಯ್ಯ ಕೊಲೆ ಮಾಡಿದ್ದು, ಇಬ್ಬರೂ ಮದ್ಯವ್ಯಸನಿಗಳಾಗಿದ್ದರೆಂದು ಪುತ್ರಿ ಲೀಲಾ ಅವರು ತಿಳಿಸಿದ್ದಾರೆ. ದಂಪತಿಗೆ ನಾಲ್ವರು ಮಕ್ಕಳಿದ್ದು. ಎಲ್ಲರಿಗೂ ಮದುವೆ ಯಾಗಿದೆ. ಬುಧವಾರ ಮಧ್ಯಾಹ್ನ ಗಂಡ-ಹೆಂಡತಿ ಹಣಕಾಸಿನ ವಿಚಾರ ವಾಗಿ ಜಗಳ ಮಾಡಿಕೊಂಡಿದ್ದಾರೆ. ಸಿದ್ದಯ್ಯ ಸಿಟ್ಟಿನಲ್ಲಿ ಮಚ್ಚಿನಿಂದ ಹೆಂಡತಿಯನ್ನು ಕೊಚ್ಚಿ ಕೊಲೆ ಮಾಡಿ ನಂತರ ತಾನು ಸಹ ಕುತ್ತಿಗೆಗೆ ಇರಿದುಕೊಂಡಿದ್ದಾನೆ.

ಈ ವೇಳೆ ಪುತ್ರ ಸೋಮಶೇಖರ್ ಕರೆ ಮಾಡಿದಾಗ ಸಿದ್ದಯ್ಯ ಜೋರಾಗಿ ಉಸಿರಾಡುತ್ತಿರುವುದು ಕೇಳಿಸಿದೆ. ತಕ್ಷಣ ಲೀಲಾ ಹಾಗು ಆಕೆಯ ಪತಿ ಪ್ರಸಾದ್ ಮನೆಗೆ ಬಂದು ನೋಡಿ ದಾಗ ಒಳಗಿನಿಂದಲೇ ಬಾಗಿಲು ಹಾಕಲಾಗಿತ್ತು. ಬಾಗಿಲು ಮುರಿದು ನೋಡಿ ದಾಗ ಶಿವಮ್ಮ ರಕ್ತದ ಮಡುವಿನಲ್ಲಿ ಬಿದ್ದು ಅಲ್ಲೇ ಸಿದ್ದಯ್ಯ ಸಹ ಸಾವು ಬದುಕಿನ ನಡುವೆ ಹೋರಾಡು ತ್ತಿದ್ದುದು ಕಂಡಿದೆ. ತಕ್ಷಣ ಸಿದ್ದಯ್ಯ ರನ್ನು ಪಟ್ಟಣದ ಕ್ರಾಫರ್ಡ್ ಆಸ್ಪತ್ರೆಗೆ ದಾಖಲಿಸಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮಂಜರಾಬಾದ್ ಕೋಟೆ ಅಭಿವೃದ್ಧಿಗೆ ಕ್ರಮದ ಭರವಸೆ

• ಪ್ರಜೋದಯ ವರದಿ

**ಸಕಲೇಶಪುರ:** ಮಂಜರಾಬಾದ್ ಕೋಟೆ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಸಂಸದ ಶ್ರೇಯಸ್ ಪಟೇಲ್ ಅವರು ಭರವಸೆ ನೀಡಿದರು.

ಗುರುವಾರ ಕೋಟೆ ವೀಕ್ಷಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಸತ್ ಕಲಾಪ ಹಿನ್ನಲೆಯಲ್ಲಿ ಭೇಟಿ ನೀಡಲು ಸಾಧ್ಯವಾಗಿರಲಿಲ್ಲ. ಬಿದ್ದಿರುವ ಗೋಡೆಯ ನಿರ್ಮಾಣ ಕಾಮಗಾರಿಯನ್ನು ಸೆಪ್ಟೆಂಬರ್ ನಿಂದ ಪ್ರಾರಂಭಿಸಲಾಗುವುದು. ಹಂತ-ಹಂತವಾಗಿ ಮಂಜರಾಬಾದ್ ಕೋಟೆ ಅಭಿವೃದ್ಧಿಪಡಿಸಲಾಗುವುದು. ಡಿಪಿಆರ್ ತಯಾರಿಸಲು ಅಧಿಕಾರಿಗಳಿಗೆ ಸೂಚಿಸಿದ್ದೇನೆಂದರು.

ನಕ್ಷತ್ರಾಕಾರದ ಕೋಟೆ ರಾಜ್ಯದ ಪ್ರಮುಖ ಪ್ರವಾಸಿ ಸ್ಥಳಗಳಲ್ಲಿ ಒಂದಾಗಿದೆ. ಕೇಂದ್ರ ಪ್ರವಾಸೋದ್ಯಮ ಸಚಿವರಿಗೆ ಸಮಸ್ಯೆ ಮನವರಿಕೆ ಮಾಡಲಾಗುವುದು. ರಾಜ್ಯ ಸರ್ಕಾರದೊಂದಿಗೆ ಸಹ ಚರ್ಚಿಸುತ್ತೇನೆ. ಸಂಸತ್ತಿನಲ್ಲಿ ಈ



ವಿಷಯ ಪ್ರಸ್ತಾಪಿಸಿ ತುರ್ತು ಕ್ರಮ ಕೈಗೊಳ್ಳಲಾಗುವುದು. ಕೋಟೆಯನ್ನು ಪ್ರವಾಸೋದ್ಯಮ ಅಭಿವೃದ್ಧಿ ಪಟ್ಟಿಯಲ್ಲಿ ಸೇರಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತೇನೆಂದರು.

ಈ ಕೋಟೆಯನ್ನು ಪ್ರವಾಸಿಗರ ಹಾಟ್ ಸ್ಪಾಟ್ ಆಗಿ ಮಾಡುವ ಯೋಜನೆ ನನ್ನದಾಗಿದೆ. ಅದಕ್ಕೆ ಪ್ರತಿಯೊಂದು ಹಂತದಲ್ಲೂ ಪುರಾತತ್ವ ಇಲಾಖೆಯ ಅನುಮತಿ ಅಗತ್ಯವಾಗಿರುವುದರಿಂದ ಕೋಟೆಯನ್ನು ಮೊದಲ ನಕ್ಷೆಯ ರೂಪದಲ್ಲಿ ರೂಪಿಸಲು ಪ್ರಯತ್ನಿಸಲಾಗುವುದು. ಐತಿಹಾಸಿಕ ಕೋಟೆ ರಕ್ಷಣೆಗೆ ಸರ್ಕಾರ ಏಕೆ ನಿರ್ಲಕ್ಷ್ಯ ವಹಿಸಿದೆ ಎಂಬುದು ಗೊತ್ತಿಲ್ಲ. ಕೋಟೆಗೆ ಮೊದಲಿನ ಸೌಂದರ್ಯ ನೀಡಲು ಬೇಕಾದ ಕ್ರಮ ಕೈಗೊಳ್ಳಲಾಗುವುದು. ಟಿಪ್ಪು ಸುಲ್ತಾನ್ ನಿರ್ಮಿಸಿದ ಕೋಟೆಯನ್ನು ಭವಿಷ್ಯದ ಪೀಳಿಗೆಗೆ ಉಳಿಸಿಕೊಳ್ಳುವುದು ನಮ್ಮ ಜವಾಬ್ದಾರಿ ಎಂದರು.

ಈ ಕೋಟೆಯನ್ನು ಟಿಪ್ಪು ಸುಲ್ತಾನ್ ನಿರ್ಮಾಣ ಮಾಡಿದ್ದಾನೆಂಬ ಕಾರಣಕ್ಕೆ ನಿರ್ಲಕ್ಷ್ಯಕ್ಕೊಳಗಾಗಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿ, ನಾನು ಯಾವ ಆರೋಪ ಮಾಡುವುದಿಲ್ಲ. ರಾಜಕೀಯ ಉದ್ದೇಶದಿಂದ ಇದು ನಿರ್ಲಕ್ಷ್ಯಕ್ಕೊಳಗಾಗಿಲ್ಲ. ಆ ರೀತಿ ಊಹಿಸುವುದು ತಪ್ಪು ಎಂದರು.

ಪುರಸಭೆ ಮಾಜಿ ಅಧ್ಯಕ್ಷ ಸೈಯದ್ ಮುಫೀಜ್, ಪುರಸಭೆ ಸದಸ್ಯ ಅಣ್ಣಪ್ಪ, ಅನ್ನಪೂರ್ಣ, ಉಪವಿಭಾಗಾಧಿಕಾರಿ ರಾಜೇಶ್, ತಹಶೀಲ್ದಾರ್ ಸುಪ್ರೀತ, ಪುರಾತತ್ವ ಇಲಾಖೆಯ ಸಂರಕ್ಷಣಾಧಿಕಾರಿ ಉಮೇಶ್ ಇತರರಿದ್ದರು.

# ಆಶಾ ಕಾರ್ಯಕರ್ತೆಯರ ಧರಣಿ ಅಂತ್ಯ

• ಪ್ರಜೋದಯ ವರದಿ

**ಹಾಸನ:** ಆಶಾ ಕಾರ್ಯಕರ್ತೆಯರು ಕಳೆದ ಮೂರು ದಿನಗಳಿಂದ ಜಿಲ್ಲಾಧಿಕಾರಿ ಕಚೇರಿ ಎದುರು ನಡೆಸುತ್ತಿದ್ದ ಅನಿರ್ದಿಷ್ಟಾವಧಿ ಧರಣಿ ಗುರುವಾರ ಅಂತ್ಯಗೊಂಡಿದೆ.

ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ರಾಜ್ಯ ಉಪಾಧ್ಯಕ್ಷ ಜಿ. ಹನುಮೇಶ್ ಅವರು ಮಾತನಾಡಿ, ನಮ್ಮ ಹಲವಾರು ಬೇಡಿಕೆಗಳಲ್ಲಿ ಒಂದು ಬೇಡಿಕೆಗೆ ಸಕಾರಾತ್ಮಕವಾಗಿ ಇಲಾಖೆಯಿಂದ ಸ್ಪಂದನೆ ಸಿಕ್ಕಿದೆ. ಹೀಗಾಗಿ ನಮ್ಮ ಅನಿರ್ದಿಷ್ಟಾವಧಿ ಧರಣಿಯನ್ನು ಅಂತ್ಯಗೊಳಿಸುತ್ತಿದ್ದೇವೆ. ಆಶಾ ಕಾರ್ಯಕರ್ತೆರು ಕೆಲಸ ಕಳೆದುಕೊಳ್ಳುತ್ತಾರೆಂದು ಈ ಧರಣಿ ನಡೆಸಿದ್ದು, ಸಂಬಳ 10 ಸಾವಿರ ಎಂದು ಘೋಷಣೆ ಮಾಡಿದ್ದರೂ, ಇಲ್ಲಿಯವರೆಗೂ ಬೇಡಿಕೆ ಈಡೇರಿಲ್ಲ. ಬೇಡಿಕೆ ಈಡೇರದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟ ಮುಂದುವರೆಸುವುದಾಗಿ ಎಚ್ಚರಿಸಿದರು.

ಮುಖ್ಯವಾದ ಹಕ್ಕೊತ್ತಾಯಗಳಲ್ಲಿ ಮುಖ್ಯಮಂತ್ರಿ ಘೋಷಿಸಿದ ರಾಜ್ಯದ ಗೌರವಧನ ಮತ್ತು ಕೇಂದ್ರದ ಭಾಗಶಃ ಪ್ರೋತ್ಸಾಹ ಧನ ಸೇರಿಸಿ ಮಾಸಿಕ ಕನಿಷ್ಠ 10 ಸಾವಿರ



ಗ್ಯಾರಂಟಿಯನ್ನು ಕಳೆದ ಏಪ್ರಿಲ್ ತಿಂಗಳಿನಿಂದಲೇ ಅನ್ವಯವಾಗುವಂತೆ ಆದೇಶ ಹೊರಡಿಸಬೇಕು. ನಮ್ಮ ಬೇಡಿಕೆಗೆ ಸ್ಪಂದನೆ ಸಿಗದಿದ್ದರೆ ಮತ್ತೆ ಹೋರಾಟ ಮುಂದುವರೆಸುವುದಾಗಿ ಎಚ್ಚರಿಕೆ ನೀಡಿ, ಆಶಾ ಕಾರ್ಯಕರ್ತೆಯರು ಮಳೆಯನ್ನು ಲೆಕ್ಕಿಸದೆ ಧರಣಿಯಲ್ಲಿ ಪಾಲ್ಗೊಂಡಿದ್ದಾರೆಂದು ಹೇಳಿದರು.

ಪ್ರಮುಖರಾದ ಮಮತಾ, ಮೇಘನಾ, ನವೀನಾ, ಪುಷ್ಪಲತಾ, ಕೋಮಲ, ಗೀತಾ, ಲಲಿತಾ, ಮಂಜುಳಾ, ಗೌರಮ್ಮ, ಲಕ್ಷ್ಮಿ, ಶಿವಮ್ಮ, ತಾಹೀರಾ, ಕುಮಾರಿ ಇತರರಿದ್ದರು.

15 ಆಗಸ್ಟ್ 2025 ಶುಕ್ರವಾರ

# ಸಿನಿ ಪ್ರಜಾ

E-mail : prajodayahsn@gmail.com

ಪ್ರಜೋದಯ

# ಯಶ್ ಮೊದಲು, ಯಶ್ ಕೊನೆ..

ಪ್ರಶಾಂತ್ ನೀಲ್ ನಿರ್ದೇಶನದಲ್ಲಿ ಯಶ್ ನಟಿಸಿದ ಕೆಜಿಎಫ್ ಸರಣಿ ಸಿನಿಮಾ ಬ್ಲಾಕ್‌ಬಸ್ಟರ್ ಹಿಟ್ ಆಗಿದ್ದು ಗೊತ್ತೇಯಿದೆ. ಚಾಪ್ಟರ್-3 ನೋಡೋಕೆ ಸಿನಿರಸಿಕರು ಕಾಯ್ತಿದ್ದಾರೆ. ಇನ್ನು ಸಿನಿಮಾ ಬಗ್ಗೆ ಹರಿದಾಡುತ್ತಿದ್ದ ವದಂತಿಗಳ ಬಗ್ಗೆ ಚಿತ್ರತಂಡ ಸ್ಪಷ್ಟನೆ ನೀಡಿದೆ. ಹೊಂಬಾಳೆ ಫಿಲ್ಮ್ಸ್‌ನ ಸಹ-ಸಂಸ್ಥಾಪಕ ಚೆಲುವೇಗೌಡ ಇತ್ತೀಚೆಗೆ ಹಿಂದೂಸ್ತಾನ್ ಟೈಮ್ಸ್ ಸಂದರ್ಶನದಲ್ಲಿ ಮಾತನಾಡಿದ್ದಾರೆ. ಸಂಸ್ಥೆಯ ಸಿನಿಮಾಗಳ ಬಗ್ಗೆ ಪ್ರತಿಕ್ರಿಯಿಸಿದ್ದಾರೆ.

ಕೆಜಿಎಫ್ ಚಿತ್ರಕ್ಕೆ ಯಶ್ ಮೊದಲ ಆಯ್ಕೆ ಆಗಿರಲಿಲ್ಲ. ರಾಕಿಭಾಯ್ ಪಾತ್ರಕ್ಕಾಗಿ ಚಿತ್ರತಂಡ ಬೇರೆ ಕಲಾವಿದರನ್ನು ಸಂಪರ್ಕಿಸಿತ್ತು ಎನ್ನುವ ಊಹಾಪೋಹ, ವದಂತಿ ಹರಿದಾಡಿತ್ತು. ಈ ಬಗ್ಗೆ ಚೆಲುವೇಗೌಡ ಮಾತನಾಡಿ ನಮ್ಮ ಸಂಸ್ಥೆ ಕೆಲಸ ಮಾಡುತ್ತಿರುವ ಬೇರೆ ನಟರಿಗಿಂತ ಯಶ್ ಅವರೊಂದಿಗೆ ದೀರ್ಘಕಾಲದ ಪಾಲುದಾರಿಕೆ ಹೊಂದಿದ್ದೇವೆ. ಯಶ್ ನಮ್ಮ ಕುಟುಂಬದ ಭಾಗ. ಯಶ್ ಅವರನ್ನು ಮನಸ್ಸಿನಲ್ಲಿಟ್ಟುಕೊಂಡು ಕೆಜಿಎಫ್ ಚಿತ್ರ ಮಾಡಿದ್ದೆವು. ನಮಗೆ, ಅವರು ಯಾವಾಗಲೂ ನಮ್ಮ ರಾಕಿ ಭಾಯ್. ಕೆಜಿಎಫ್-1 ಚಿತ್ರದ ಬೇರೆ ಪಾತ್ರಗಳಿಗಾಗಿ ನಾವು ಬೇರೆ ಚಿತ್ರರಂಗದ ಸ್ಟಾರ್ ನಟರನ್ನು ಸಂಪರ್ಕಿಸಿದ್ದೆವು. ಆದರೆ ಚಿತ್ರಕ್ಕೆ ಯಶ್ ಮೊದಲ ಆಯ್ಕೆಯಲ್ಲ ಎನ್ನುವುದೆಲ್ಲಾ ಸುಳ್ಳು. ಅಂತಹ ಯಾವುದೇ ಹೇಳಿಕೆ ನಾವು ಕೊಟ್ಟಿಲ್ಲ ಎಂದಿದ್ದಾರೆ.

ಚೆಲುವೆ ಗೌಡ ಮಾತು ಮುಂದುವರೆಸಿ ಕೆಜಿಎಫ್ ಹಾಗೂ ಕಾಂತಾರ ಚಿತ್ರಗಳ ಮೂಲಕ ಹೇಗೆ ಕನ್ನಡ ಚಿತ್ರರಂಗವನ್ನು ಪರಭಾಷಿಕರು ತಿರುಗಿ ನೋಡುವಂತಾಯಿತು ಎನ್ನುವುದನ್ನು ತಿಳಿಸಿದ್ದಾರೆ. ತಮ್ಮ ಚಿತ್ರಗಳಲ್ಲಿ ನಟಿಸುವಂತೆ ಪರಭಾಷಾ ಕಲಾವಿದರನ್ನು ಕೇಳಿದಾಗ ಏನೇನೊ ಸಬೂಬು ಕೊಡುತ್ತಿದ್ದರು. ನಟಿಸೋಕೆ ಒಪ್ಪಲಿಲ್ಲ. ಈ ಕನ್ನಡ ಚಿತ್ರಗಳು ಎಲ್ಲಿ ಓಡುತ್ತವೆ? ಎನ್ನುತ್ತಿದ್ದರು. ಆ ಸಮಯದಲ್ಲಿ, ಕರ್ನಾಟಕದ ಹೊರಗೆ ಕನ್ನಡ ಚಿತ್ರಗಳ ಬಗ್ಗೆ ಹೆಚ್ಚಿನ ಜನರಿಗೆ ಗೊತ್ತಿರಲಿಲ್ಲ. ಡಾ. ರಾಜ್‌ಕುಮಾರ್‌ರಂತ ಕೆಲವು ನಟರ ಹೆಸರುಗಳು ಅವರಿಗೆಲ್ಲಾ ಗೊತ್ತಿತ್ತು. ಈಗ ಅದು ಬದಲಾಗಿದೆ ಎಂದು ವಿವರಿಸಿದ್ದಾರೆ.

## ಕೆಜಿಎಫ್ ವಂದತಿಗೆ ಹೊಂಬಾಳೆ ಫಿಲ್ಮ್ಸ್ ಸ್ಪಷ್ಟನೆ

2018ರಲ್ಲಿ ಕೆಜಿಎಫ್ ಚಾಪ್ಟರ್-1 ಸಿನಿಮಾ ತೆರೆಗೆ ಬಂದಿತ್ತು. 250 ಕೋಟಿ ರೂ. ಗ್ರಾಸ್ ಕಲೆಕ್ಷನ್ ಮಾಡಿತ್ತು. ಪ್ಯಾನ್ ಇಂಡಿಯಾ



ಮಟ್ಟದಲ್ಲಿ ಸಿನಿಮಾ ಸದ್ದು ಮಾಡಿತ್ತು. ಸೀಕ್ವೆಲ್ ನೋಡಲು ಪ್ರೇಕ್ಷಕರನ್ನು ತುದಿಗಾಲಿನಲ್ಲಿ ಕೂರುವಂತೆ ಮಾಡಿತ್ತು. ಬಳಿಕ ಬಂದ ಚಾಪ್ಟರ್-2 ಹೊಸ ಇತಿಹಾಸ ನಿರ್ಮಿಸಿತು. 1200 ಕೋಟಿ ರೂ. ಗ್ರಾಸ್ ಕಲೆಕ್ಷನ್ ಮಾಡಿ ಸಂಚಲನ ಸೃಷ್ಟಿಸಿತು. ಯಶ್ ಪ್ಯಾನ್ ಇಂಡಿಯಾ ಸ್ಟಾರ್ ಆಗಿಬಿಟ್ಟರು.

ಈ ಚಿತ್ರದ ಮೂಲಕ ಸಾಕಷ್ಟು ಜನರಿಗೆ ನೇಮು ಫೇಮು ಲಭಿಸಿತ್ತು. ಯಶ್ ಅವರ ಜೀವನವೇ ಬದಲಾಗಿಬಿಡ್ತು. ಹೊಂಬಾಳೆ ಸಂಸ್ಥೆಗೂ ದೊಡ್ಡ ಗೆಲುವು ಸಿಕ್ಕಿತ್ತು. ಚಾಪ್ಟರ್-3 ಮಾಡುವುದಾಗಿಯೂ ಚಿತ್ರತಂಡ ಘೋಷಿಸಿದೆ. ಆದರೆ ಯಾವಾಗ ಎನ್ನುವ ಪ್ರಶ್ನೆ ಅಭಿಮಾನಿಗಳನ್ನು ಕಾಡುತ್ತಲೇ ಇದೆ. ಯಶ್ ಸದ್ಯ ರಾಮಾಯಣ ಹಾಗೂ ಟಾಕ್ಸಿಕ್ ಚಿತ್ರಗಳಲ್ಲಿ ಬ್ಯುಸಿಯಾಗಿದ್ದಾರೆ. ಪ್ರಶಾಂತ್ ನೀಲ್ ತೆಲುಗು ಸಿನಿಮಾಗಳನ್ನು ಒಪ್ಪಿಕೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಮತ್ತೆ ಇಬ್ಬರೂ ಕೈ ಜೋಡಿಸಲಿದ್ದಾರೆ.

ಮತ್ತೊಂದು ಕಡೆ ಕಾಂತಾರ- 1 ಚಿತ್ರವನ್ನು ಹೊಂಬಾಳೆ ಸಂಸ್ಥೆ ನಿರ್ಮಾಣ ಮಾಡುತ್ತಿದೆ. ಅಕ್ಟೋಬರ್ 2ರಂದು ಸಿನಿಮಾ ತೆರೆಗೆ ಬರಲಿದೆ. ರಿಷಬ್ ಶೆಟ್ಟಿ ಚಿತ್ರ ನಿರ್ದೇಶಿಸಿ ನಟಿಸಿದ್ದಾರೆ. ಬಹುಕೋಟಿ ವೆಚ್ಚದಲ್ಲಿ ಸಿನಿಮಾ ಪ್ರೇಕ್ಷಕರ ಮುಂದೆ ಬರ್ತಿದೆ.

## ಕೆಜಿಎಫ್ ಸ್ಯಾಂಡಲ್‌ವುಡ್‌ನ ಚಿತ್ರಣವನ್ನೇ ಬದಲಾಯಿಸಿದೆ

- ಸ್ಯಾಂಡಲ್‌ವುಡ್‌ನ ಚಿತ್ರಣವನ್ನೇ ಬದಲಾಯಿಸಿದ ಕೆಜಿಎಫ್ ಚಿತ್ರ ಯಾರಿಗೆ ಇಷ್ಟ ಇಲ್ಲ ಹೇಳಿ? ರಾಕಿ ಭಾಯ್ ಪಾತ್ರದಲ್ಲಿ ಕಾಣಿಸಿಕೊಂಡ ಯಶ್ ಅಂತಹ ಮೋಡಿ ಮಾಡಿದ್ದಾರೆ. ಅವರನ್ನು ಬಿಟ್ಟರೆ ಆ ಪಾತ್ರದಲ್ಲಿ ಬೇರೆ ಯಾರನ್ನೂ ಊಹಿಸಲು ಸಾಧ್ಯವಿಲ್ಲ. ಅದಾಗ್ಯೂ ಈ ಪಾತ್ರಕ್ಕೆ ಯಶ್ ಮೊದಲ ಆಯ್ಕೆಯಾಗಿರಲಿಲ್ಲ ಎನ್ನುವ ವದಂತಿ ಹಬ್ಬಿದ್ದು, ಇದಕ್ಕೆ ನಿರ್ಮಾಣ ಸಂಸ್ಥೆ ಹೊಂಬಾಳೆ ಫಿಲ್ಮ್ಸ್ ಸ್ಪಷ್ಟನೆ ನೀಡಿದೆ.
- ಸ್ಪಷ್ಟನೆಯಲ್ಲಿ ಏನಿದೆ?: ಯಾವುದೇ ಇತರ ನಟರಿಗಿಂತ ಹೆಚ್ಚು ಸಮಯ ನಾವು ಯಶ್ ಜತೆ ಕೆಲಸ ಮಾಡಿದ್ದೇವೆ. ಅದಕ್ಕಿಂತ ಹೆಚ್ಚಾಗಿ ಯಶ್ ನಮ್ಮ ಕುಟುಂಬದ ಓರ್ವ ಸದಸ್ಯ. ಅವರನ್ನು ಮನಸ್ಸಿನಲ್ಲಿಟ್ಟುಕೊಂಡೇ ಕೆಜಿಎಫ್ ಕಥೆ ಹೆಣೆದಿದ್ದೇವೆ. ಅವರು ಯಾವತ್ತಿದ್ದರೂ ನಮ್ಮ ರಾಕಿ ಭಾಯ್. ಕೆಜಿಎಫ್ 1 ಚಿತ್ರದ ಇತರ ಪ್ರಮುಖ ಪಾತ್ರಗಳಿಗಾಗಿ ನಾವು ದೇಶದ ಹಲವು ಸ್ಟಾರ್‌ಗಳನ್ನು ಸಂಪರ್ಕಿಸಿದ್ದೆವು. ಅದು ಬಿಟ್ಟರೆ ನಾಯಕ ಪಾತ್ರಕ್ಕೆ ಬೇರೆ ಯಾರನ್ನೂ ಪರಿಗಣಿಸಿರಲಿಲ್ಲ. ನಾಯಕನ ಪಾತ್ರಕ್ಕೆ ಯಶ್ ಮೊದಲ ಆಯ್ಕೆಯಾಗಿರಲಿಲ್ಲ ಎನ್ನುವ ಸುದ್ದಿ ಸತ್ಯಕ್ಕೆ ದೂರವಾದುದು ಎಂದು ತಿಳಿಸಿದ್ದಾರೆ. ಆ ಮೂಲಕ ವದಂತಿಗೆ ತೆರೆ ಎಳೆದಿದ್ದಾರೆ.
- ಆಫರ್ ತಿರಸ್ಕರಿಸಿದ್ದ ಸ್ಟಾರ್: ಕೆಜಿಎಫ್ ಚಿತ್ರದ ಪ್ರಮುಖ ಪಾತ್ರಗಳನ್ನು ವಿವಿಧ ಚಿತ್ರರಂಗಗಳ ಸ್ಟಾರ್‌ಗಳು ನಿರಾಕರಿಸಿದ್ದರು ಎನ್ನುವ ವಿಚಾರವನ್ನೂ ಅವರು ಈ ಸಂದರ್ಭದಲ್ಲಿ ಬಹಿರಂಗಡಿಸಿದ್ದಾರೆ. ಕೆಜಿಎಫ್ ಸಿನಿಮಾದ ಪಾತ್ರವೊಂದಕ್ಕೆ ನಾವು ಬೇರೆ ಚಿತ್ರರಂಗದ ಸ್ಟಾರ್ ನಟರೊಬ್ಬರನ್ನು ಸಂಪರ್ಕಿಸಿದ್ದೆವು. ಕನ್ನಡ ಸಿನಿಮಾಗಳು ಎಲ್ಲಿ ಓಡುತ್ತವೆ? ಎಂದು ಅವರು ಪ್ರಶ್ನಿಸಿದ್ದರು. ಆ ವೇಳೆ ಬೇರೆ ಚಿತ್ರರಂಗದ ಹಲವು ನಟರು ಇದೇ ಅಭಿಪ್ರಾಯ ಹೊಂದಿದ್ದರು. ಡಾ. ರಾಜ್‌ಕುಮಾರ್ ಸೇರಿದಂತೆ ಕೆಲವೇ ಕಲಾವಿದರ ಹೆಸರಷ್ಟೇ ಅವರಿಗೆ ತಿಳಿದಿತ್ತು. ಆದರೆ ಇದೀಗ ಪರಿಸ್ಥಿತಿ ಬದಲಾಗಿದೆ. ಕನ್ನಡ ಚಿತ್ರರಂಗದ ಬಗ್ಗೆ ಎಲ್ಲರಿಗೂ ತಿಳಿಯುವಂತಾಗಿದೆ ಎಂದಿದ್ದಾರೆ.
- ಕೆಜಿಎಫ್ ಸ್ಯಾಂಡಲ್‌ವುಡ್‌ನ ಚಿತ್ರಣವನ್ನೇ ಬದಲಾಯಿಸಿದ್ದು, ಈಗಲೂ ಹಲವರ ಫೇವರೇಟ್ ಎನಿಸಿಕೊಂಡಿದೆ. ಮೊದಲ ಭಾಗ 250 ಕೋಟಿ ರೂ. ದೋಚಿಕೊಂಡರೆ, 2ನೇ ಭಾಗ ಸುಮಾರು 1,200 ಕೋಟಿ ರೂ. ಗಳಿಸಿದೆ. ಅತೀ ಹೆಚ್ಚು ಕಲೆಕ್ಷನ್ ಮಾಡಿದ ಟಾಪ್ 5 ಭಾರತೀಯ ಚಿತ್ರಗಳ ಪೈಕಿ ಕೆಜಿಎಫ್ 2 ಕೂಡ ಸ್ಥಾನ ಪಡೆದುಕೊಂಡಿದೆ.

# ಲವ್ ಯು ಮುದ್ದು ಮೂಲಕ ರೊಮ್ಯಾಂಟಿಕ್ ಚಿತ್ರಕ್ಕೆ ಆ್ಯಕ್ಷನ್ ಕಟ್ ಹೇಳಲು ನಿರ್ದೇಶಕ ಕುಮಾರ್ ಸಜ್ಜು

ಇದು ಸಾಮಾನ್ಯವಾಗಿ ನನ್ನ ಪ್ರಕಾರವಲ್ಲ; ಇದು ನಾನು ಬರೆದು ನಿರ್ದೇಶಿಸಿದ ಪ್ರೇಮಕಥೆ ಮತ್ತು ಇದು ಕಮರ್ಷಿಯಲ್ ಚಿತ್ರ ಎಂದು ಕುಮಾರ್ ಹೇಳುತ್ತಾರೆ.

ವಿಮರ್ಶಾತ್ಮಕವಾಗಿ ಮೆಚ್ಚುಗೆ ಪಡೆದ ಕೆಮಿಸ್ಟ್ರಿ ಆಫ್ ಕರಿಯಪ್ಪ, ಕ್ರಿಟಿಕಲ್ ಕೀರ್ತನೆಗಳು, ನ್ಯಾನೋ ನಾರಾಯಣಪ್ಪ ಮತ್ತು ನವೀನ್ ಸಜ್ಜು ನಟಿಸಿದ ಇನ್ನೂ ಬಿಡುಗಡೆಯಾಗದ ಮ್ಯಾನ್ಷನ್ ಹೌಸ್ ಮುತ್ತು ಚಿತ್ರಗಳಿಗೆ ಹೆಸರುವಾಸಿಯಾದ ನಿರ್ದೇಶಕ ಕುಮಾರ್, ತಮ್ಮ ಮುಂದಿನ ಚಿತ್ರ ಲವ್ ಯು ಮುದ್ದು ಚಿತ್ರವನ್ನು ಪೂರ್ಣಗೊಳಿಸಿದ್ದಾರೆ.

ಇದು ಸಾಮಾನ್ಯವಾಗಿ ನನ್ನ ಪ್ರಕಾರವಲ್ಲ; ಇದು ನಾನು ಬರೆದು ನಿರ್ದೇಶಿಸಿದ ಪ್ರೇಮಕಥೆ ಮತ್ತು ಇದು ಕಮರ್ಷಿಯಲ್ ಚಿತ್ರ ಎಂದು ಕುಮಾರ್ ಹೇಳುತ್ತಾರೆ.

ಚಿತ್ರದಲ್ಲಿ ಕಿರುತೆರೆ ಮತ್ತು ಅಜ್ಞಾತವಾಸಿ ಚಿತ್ರದಿಂದ ಜನಪ್ರಿಯರಾದ ಸಿದ್ದು ಮೂಲಿಮನಿ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ರೇಷ್ಮಾ ನಾಯಕಿಯಾಗಿ ನಟಿಸಿದ್ದಾರೆ. ಇನ್ನುಳಿದಂತೆ ತಬಲಾ ನಾಣಿ, ರಾಜೇಶ್ ನಟರಂಗ, ಗಿರೀಶ್ ಶಿವಣ್ಣ, ಶ್ರೀವತ್ಸ ಮತ್ತು ಸ್ವಾತಿ ಈ ನಟಿಸಿದ್ದಾರೆ.




ಬೆಂಗಳೂರು, ಕಾರ್ಕಳ ಮತ್ತು ಇತರ ಸ್ಥಳಗಳಲ್ಲಿ ಚಿತ್ರೀಕರಿಸಲಾದ ಲವ್ ಯು ಮುದ್ದು ರೊಮ್ಯಾಂಟಿಕ್ ಮತ್ತು ಮನರಂಜನೆಯ ಹೊಸ ಮಿಶ್ರಣವನ್ನು ತರುತ್ತದೆ. ಕಥೆ ಹೇಳುವಿಕೆಯನ್ನು ಆಕರ್ಷಕವಾಗಿ ಇರಿಸಿಕೊಂಡು ಹಗುರವಾದ, ಭಾವನಾತ್ಮಕ ಸ್ಥಳವನ್ನು ಅನ್ವೇಷಿಸಲು ನಾನು ಬಯಸಿದ್ದೆ. ಪ್ರೇಕ್ಷಕರು ನನ್ನ ಚಿತ್ರ ನಿರ್ಮಾಣದ ವಿಭಿನ್ನ ಮುಖವನ್ನು ನೋಡುತ್ತಾರೆ ಎಂದು ಕುಮಾರ್ ಹೇಳುತ್ತಾರೆ.

ಚಿತ್ರಕ್ಕೆ ಕಿಶನ್ ಟಿಎನ್ ಬಂಡವಾಳ ಹೂಡಿದ್ದಾರೆ ಮತ್ತು ಟಿಜಿ ನರಸಿಂಹ ಮೂರ್ತಿ ಪ್ರಸ್ತುತಪಡಿಸಿದ್ದಾರೆ. ಲಕ್ಷ್ಮಿಕಾಂತ್ ಟಿಎಸ್, ಅನಿರುದ್ಧ್ ಶಾಸ್ತ್ರಿ, ಮತ್ತು ಕೃಷ್ಣ ದೀಪಕ್ ತಾಂತ್ರಿಕ ತಂಡದ ಭಾಗವಾಗಿದ್ದಾರೆ. ಚಿತ್ರವು ಸದ್ಯ ಪೋಸ್ಟ್-ಪ್ರೊಡಕ್ಷನ್ ಹಂತದಲ್ಲಿದೆ ಮತ್ತು ಈ ವರ್ಷದ ಕೊನೆಯಲ್ಲಿ ಬಿಡುಗಡೆಯಾಗುವ ನಿರೀಕ್ಷೆಯಲ್ಲಿದೆ.

# ಹಚ್ಚೆ ಬಿಡುಗಡೆಗೆ ಸಿದ್ಧ

**ಆಗಸ್ಟ್‌ನಲ್ಲಿ ತೆರೆಗೆ**

ಚಿತ್ರದಲ್ಲಿ ಅಭಿಮನ್ಯು ನಾಯಕನಾಗಿ ನಟಿಸಿದ್ದು, ಅವರಿಗೆ ಜೋಡಿಯಾಗಿ ಆದ್ಯ ಪ್ರಿಯಾ ನಟಿಸಿದ್ದಾರೆ.

ಸಸ್ಪೆನ್ಸ್ ಥ್ರಿಲ್ಲರ್ ಚಿತ್ರ ಹಚ್ಚೆ ಚಿತ್ರ ಬಿಡುಗಡೆಗೆ ಸಜ್ಜಾಗಿದ್ದು, ಆಗಸ್ಟ್ 22 ರಂದು ರಾಜ್ಯದಾದ್ಯಂತ ಚಿತ್ರ ಮಂದಿರಗಳಲ್ಲಿ ಬಿಡುಗಡೆ ಯಾಗಲಿದೆ. ಟ್ರೇಲರ್ ಬಿಡುಗಡೆ ಜೊತೆಗೆ ಅಧಿಕೃತ ಘೋಷಣೆ ಮಾಡಲಾಯಿತು. ಅಶ್ವ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಿಸಲಾದ ಈ ಚಿತ್ರವನ್ನು ಯಶೋಧರ ಬರೆದು ನಿರ್ದೇಶಿಸಿದ್ದಾರೆ.




ದಿ ಪವರ್ ಆಫ್ ಹಿಸ್ಟ್ರಿ ಎಂಬ ಟ್ಯಾಗ್‌ಲೈನ್ ಹೊಂದಿರುವ ಈ ಟ್ರೇಲರ್, ನಿಗೂಢತೆ, ಡ್ರಾಮಾ ಮತ್ತು ಐತಿಹಾಸಿಕ ಅಂಶಗಳನ್ನು ಮಿಶ್ರಣ ಮಾಡುವ ಕಥಾವಸ್ತುವಿನ ಸುಳಿವು ನೀಡುತ್ತದೆ. ಈ ಚಿತ್ರದಲ್ಲಿ ಅಭಿಮನ್ಯು ನಾಯಕನಾಗಿ ನಟಿಸಿದ್ದು, ಅವರಿಗೆ ಜೋಡಿಯಾಗಿ ಆದ್ಯ ಪ್ರಿಯಾ ನಟಿಸಿದ್ದಾರೆ. ಅನು ಪ್ರಭಾಕರ್, ಗುರುರಾಜ್ ಹೊಸಕೋಟೆ, ದುಷ್ಯಂತ್, ಶ್ರೀಮಂತ್ ಸುರೇಶ್ ಮತ್ತು ಚಂದ್ರು ಬಂಡೆ ಸೇರಿದಂತೆ ಇತರರು ಚಿತ್ರದಲ್ಲಿ ನಟಿಸಿದ್ದಾರೆ.

ಕರ್ನಾಟಕದ ವಿವಿಧ ಸುಂದರ ಸ್ಥಳಗಳಲ್ಲಿ ಚಿತ್ರೀಕರಣಗೊಂಡ ಹಚ್ಚೆ ಈ ವರ್ಷದ ಆರಂಭದಲ್ಲಿ ತನ್ನ 50 ದಿನಗಳ ಚಿತ್ರೀಕರಣವನ್ನು ಪೂರ್ಣಗೊಳಿಸಿತು. ಹಚ್ಚೆಯ ತಾಂತ್ರಿಕ ತಂಡದಲ್ಲಿ ಸಂಗೀತ ಸಂಯೋಜಕ ವಿವೇಕ್ ಚಕ್ರವರ್ತಿ, ಸಂಪಾದಕ ಸುರೇಶ್ ಆರುಮುಗಂ ಮತ್ತು ಛಾಯಾಗ್ರಾಹಕ ಯಾಸೀನ್ ಇದ್ದಾರೆ.

## 15-8-2025 ದಿನ ಭವಿಷ್ಯ

**ಮೇಷ:** ಕುತ್ತಿಗೆ / ಬೆನ್ನಿನಲ್ಲಿ ನಿರಂತರ ನೋವಿನಿಂದ ಬಳಲುವ ಸಾಧ್ಯತೆಯಿದೆ. ವಿಶೇಷವಾಗಿ ಇದರ ಜೊತೆ ಸಾಮಾನ್ಯ ದೌರ್ಬಲ್ಯವಿದ್ದಾಗ ಇದನ್ನು ನಿರ್ಲಕ್ಷಿಸದಿರಿ. ಇಂದು ವಿಶ್ರಾಂತಿ ಬಹಳ ಪ್ರಮುಖವಾಗಿರುತ್ತದೆ. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ. ಇಂದು ನೀವು ಹಣದ ಪ್ರಯೋಜನವನ್ನು ಪಡೆಯಬಹುದು.

**ವೃಷಭ:** ಸ್ನೇಹಿತರಿಂದ ಒಂದು ವಿಶೇಷ ಅಭಿನಂದನೆ ಸಂತೋಷದ ಮೂಲವಾಗುತ್ತದೆ. ಇದೇಕೆಂದರೆ ನೀವು ನಿಮ್ಮ ಜೀವನವನ್ನು ಮರಗಳಂತೆ ಮಾಡಿಕೊಳ್ಳುತ್ತೀರಿ-ಅವುಗಳು ತಾವು ಸೂರ್ಯನಡಿ ನಿಂತು ಶಾಖದ ಬೇಗೆ ತಡೆದುಕೊಂಡು ಇತರರಿಗೆ ನೆರಳು ನೀಡುತ್ತವೆ.

**ಮಿಥುನ:** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ.

**ಕರ್ಕಾಟಕ:** ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೈಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ.

**ಸಿಂಹ:** ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳೆರಡಕ್ಕೂ ಪ್ರಯೋಜನಕಾರಿಯಾಗುತ್ತದೆ. ಯಾರಿಂದಲೂ ಸಲಹೆಯನ್ನು ತೆಗದುಕೊಳ್ಳದೆ ನೀವು ಹಣವನ್ನು ಎಲ್ಲಿಯೂ ಹೂಡಿಕೆ ಮಾಡಬಾರದು. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಸಂಗಾತಿಯ ಪ್ರೀತಿಯ ಜೊತೆ ನಿಮ್ಮ ಜೀವನದ ಎಲ್ಲಾ ಕಷ್ಟಗಳನ್ನು ಮರೆಯುತ್ತೀರಿ.

**ಕನ್ಯಾ:** ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ನಿಮ್ಮ ತೂಕದ ಮೇಲೆ ಹಿಡಿತ ಹೊಂದಿರಿ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನೀವು ಕೆಲಸದಲ್ಲಿ ಸಂಭವಿಸುವ ಬದಲಾವಣೆಗಳಿಂದ ಪ್ರಯೋಜನ ಪಡೆಯುತ್ತೀರಿ.

**ತುಲಾ:** ನೀವು ಬಹಳ ವಿಚಿತ್ರವಾದ ಪರಿಸ್ಥಿತಿಯಲ್ಲಿ ಸಿಲುಕಿದರೂ ಅದನ್ನು ಎದುರಿಸಲು ನಿಮ್ಮ ಇಚ್ಛಾಶಕ್ತಿ ಇಂದು ಸಹಾಯ ಮಾಡಬಹುದು. ಒಂದು ಅತ್ಯಂತ ಭಾವನಾತ್ಮಕ ನಿರ್ಧಾರ ಕೈಗೊಳ್ಳುವಾಗ ನೀವು ಸ್ತಿಮಿತ ಕಳೆದುಕೊಳ್ಳಬಾರದು. ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ.

**ವೃಶ್ಚಿಕ:** ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಬ್ಯಾಂಕ್ ವ್ಯವಹರಗಳಲ್ಲಿ ಕಾಳಜಿ ವಹಿಸಬೇಕು. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಇಂದು ಪ್ರೀತಿಪಾತ್ರರಿಗೆ ನಿಮ್ಮ ವಿಚಿತ್ರ ವರ್ತನೆಯ ಜೊತೆ ಏಗಲು ಅತ್ಯಂತ ಕಷ್ಟವಾಗುತ್ತದೆ.

**ಧನು:** ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ಆಲೋಚಿಸದೆ ನೀವು ಯಾರಿಗೂ ತಮ್ಮ ಹಣವನ್ನು ಕೊಡಬಾರದು, ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ದೊಡ್ಡ ತೊದರೆಗೊಳಗಾಗಬಹುದು. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ.

**ಮಕರ:** ನಿಮ್ಮ ಕಾಯಿಲೆ ಅತೃಪ್ತಿಯ ಕಾರಣವಾಗಿಬಹುದು. ಕುಟುಂಬದಲ್ಲಿ ಸಂತೋಷವನ್ನು ಪುನಃಸ್ಥಾಪಿಸಲು ನೀವು ಸಾಧ್ಯವಾದಷ್ಟೂ ಬೇಗ ಇದರಿಂದ ಹೊರಬರುವ ಅಗತ್ಯವಿದೆ. ಯಾರಿಂದಲೂ ಸಲಹೆಯನ್ನು ತೆಗದುಕೊಳ್ಳದೆ ನೀವು ಹಣವನ್ನು ಎಲ್ಲಿಯೂ ಹೂಡಿಕೆ ಮಾಡಬಾರದು. ನಿಮ್ಮ ನಿರೀಕ್ಷೆಗಳಿಗೆ ತಕ್ಕಂತೆ ಬದುಕಲು ನಿಮ್ಮ ಮಗುವನ್ನು ಪ್ರೇರೇಪಿಸಿ.


**ಕುಂಭ:** ಒಬ್ಬ ಸಂತನ ಆಶೀರ್ವಾದದಿಂದ ಮನಶ್ಶಾಂತಿ. ನೀವು ವಿದ್ಯಾರ್ಥಿಯಾಗಿದ್ದರೆ ಮತ್ತು ವಿದೇಶಕ್ಕೆ ಹೋಗಿ ಅಧ್ಯಯನ ಮಾಡಲು ಬಯಸುತ್ತಿದ್ದರೆ ಆರ್ಥಿಕ ಬಿಕ್ಕಟ್ಟು ಇಂದು ನಿಮ್ಮ ಹಣೆಯ ಮೇಲೆ ಸುಕ್ಕು ತರಬಹುದು. ಸಂಜೆ ಸ್ನೇಹಿತರೊಡನೆ ಹೋಗಿ, ಇದು ತುಂಬ ಒಳ್ಳೆಯದನ್ನು ಮಾಡುತ್ತದೆ. ಪ್ರಣಯ ನಿಮ್ಮ ಹೃದಯವನ್ನು ಆಳುತ್ತದೆ.

**ಮೀನ:** ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ನಿಮ್ಮ ಸಂಗಾತಿಯ ಅನುಪಸ್ಥಿತಿ ಕಾಡುವ ಸಾಧ್ಯತೆಯಿದೆ.

# ಗಣೇಶ ಹಬ್ಬಕ್ಕೆ ದೊಡ್ಡ ಸಿನಿಮಾಗಳನ್ನು ಬಿಡುಗಡೆ ಮಾಡಲ್ಲ ಯಾಕೆ?

ಹಬ್ಬದ ಸಂಭ್ರಮದಲ್ಲಿ ಸಿನಿಮಾಗಳು ಬಿಡುಗಡೆಯಾದರೆ ಸಕ್ಸಸ್ ಸಿಗುತ್ತದೆ ಎನ್ನುವ ನಂಬಿಕೆ ಇದೆ. ಹಾಗಾಗಿ ಹಬ್ಬದ ವೀಕೆಂಡ್‌ನಲ್ಲೇ ದೊಡ್ಡ ದೊಡ್ಡ ಸಿನಿಮಾಗಳನ್ನು ತೆರೆಗೆ ತರಲು ಫಿಲ್ಮ್ ಮೇಕರ್ಸ್ ಇಷ್ಟಪಡುತ್ತಾರೆ. ಸಂಕ್ರಾಂತಿ, ದೀಪಾವಳಿ, ಸ್ವಾತಂತ್ರ್ಯ ದಿನಾಚರಣೆ, ದಸರಾ ಹಾಗೂ ಕ್ರಿಸ್‌ಮಸ್ ವೀಕೆಂಡ್‌ಗಳಲ್ಲಿ ಸಿನಿಮಾಗಳ ಕಾರುಬಾರು ಜೋರು. ಆದರೆ ಗಣೇಶ್ ಹಬ್ಬದಲ್ಲಿ ಇಂತಹ ಸಂಭ್ರಮ ಕಾಣಿಸಲ್ಲ.

ಮೊದಲಿನಿಂದಲೂ ಗಮನಿಸಿದರೆ ಗಣೇಶ ಹಬ್ಬದ ಸಂಭ್ರಮದಲ್ಲಿ ಯಾವುದೇ ದೊಡ್ಡ ಸಿನಿಮಾ ಬಿಡುಗಡೆ ಆಗಿ ಗೆದ್ದಿರುವ ಉದಾಹರಣೆ ಇಲ್ಲ. ಆಗೊಮ್ಮೆ ಈಗೊಮ್ಮೆ ಇಂತಹ ಪ್ರಯತ್ನ ನಡೆದಿರಬಹುದು. ಈ ವರ್ಷ ಕೂಡ ಗಣೇಶ ಚತುರ್ಥಿಗೆ ಯಾವುದೇ ದೊಡ್ಡ ಸಿನಿಮಾ ಬಿಡುಗಡೆಗೆ ಸಜ್ಜಾಗಿಲ್ಲ. ಹಬ್ಬದ ವೀಕೆಂಡ್‌ನಲ್ಲಿ ಸ್ಟಾರ್ ನಟರು ತಮ್ಮ ಸಿನಿಮಾಗಳನ್ನು ಬಿಡುಗಡೆ ಮಾಡಲು ಮುಗಿಬೀಳುತ್ತಾರೆ. ಇದೇ ಕಾರಣಕ್ಕೆ ಕೆಲವೊಮ್ಮೆ ಮನಸ್ತಾಪಗಳು



ಮೂಡಿರುವುದು ಇದೆ. ಆದರೆ ಗಣೇಶ ಹಬ್ಬಕ್ಕೆ ಅಂತಹ ಪೈಪೋಟಿ ಏರ್ಪಡದೇ ಇರುವುದಕ್ಕೆ ಕಾರಣವೂ ಇದೆ.

ಸಾಮಾನ್ಯವಾಗಿ ಹಬ್ಬದ ಸಂಭ್ರಮದಲ್ಲಿ ಜನ ಹಬ್ಬ ಮುಗಿಸಿ ಸಿನಿಮಾ ನೋಡಲು ಬರುತ್ತಾರೆ. ರಜೆ ಇರುವುದರಿಂದ ಸಹಜವಾಗಿಯೇ ಸಿನಿಮಾ ನೋಡುವವರ ಸಂಖ್ಯೆ ಹೆಚ್ಚುತ್ತದೆ ಎನ್ನುವ ಲೆಕ್ಕಾಚಾರ ಇದೆ. ಇದು ನಿಜ ಕೂಡ ಹೌದು. ಅದೇ ಕಾರಣಕ್ಕೆ ಕಾಲಿವುಡ್, ಟಾಲಿವುಡ್‌ನಲ್ಲಿ ಸಂಕ್ರಾಂತಿ, ದೀಪಾವಳಿಗೆ ಸ್ಟಾರ್ ನಟರ ಸಿನಿಮಾಗಳು ಒಟ್ಟೊಟ್ಟಿಗೆ ಬಿಡುಗಡೆ ಆಗುತ್ತವೆ. ಬಾಕ್ಸಾಫೀಸ್ ಕ್ಲ್ಯಾಶ್‌ಗೂ ಜಗ್ಗದೇ ತೆಲುಗಿನಲ್ಲಿ ಸಂಕ್ರಾಂತಿ ಎರಡ್ಮೂರು ಸಿನಿಮಾಗಳನ್ನು ಬಿಡುಗಡೆ ಮಾಡುತ್ತಾರೆ.

ಸಂಕ್ರಾಂತಿಗೆ ಕನ್ನಡದ ದೊಡ್ಡ ಸಿನಿಮಾಗಳು ಬರುವುದು ಕಮ್ಮಿ. ಸ್ವಾತಂತ್ರ್ಯ ದಿನಾಚರಣೆ, ದಸರಾ ಹಾಗೂ ದೀಪಾವಳಿ ಕನ್ನಡ ಫಿಲ್ಮ್ ಮೇಕರ್ಸ್‌ಗೆ ಫೇವರಿಟ್. ಇತ್ತೀಚೆಗೆ ವರ್ಷದ ಕೊನೆಗೆ ಕ್ರಿಸ್‌ಮಸ್ ವೀಕೆಂಡ್ ಮೇಲೆ ಕೂಡ ಕೆಲವರು ಕಣ್ಣಿಟ್ಟಿದ್ದಾರೆ. ಆದರೆ ಗಣೇಶ ಹಬ್ಬಕ್ಕೆ ಸಿನಿಮಾಗಳನ್ನು ಬಿಡುಗಡೆ ಮಾಡಲು ಹಿಂದೇಟು ಹಾಕುತ್ತಾರೆ. ಗಣೇಶ ಹಬ್ಬದ ಗುಂಗಿನಲ್ಲಿ ಇರುವವರು ಸಿನಿಮಾ ನೋಡೋಕೆ ಬರಲ್ಲ ಎನ್ನುವ ಲೆಕ್ಕಾಚಾರ ಇದು.

ಗಣೇಶ ಹಬ್ಬಕ್ಕೆ ಯುವಕರು ತಿಂಗಳಿಗೂ ಮುನ್ನ ತಯಾರಿ ಆರಂಭಿಸುತ್ತಾರೆ. ಹಬ್ಬಕ್ಕೆ ಗಲ್ಲಿ ಗಲ್ಲಿಗಳಲ್ಲಿ ಪೆಂಡಾಲ್ ಹಾಕಿ ವಿಘ್ನ ವಿನಾಶಕನನ್ನು ಕೂರಿಸಿ ಹಾಡು, ತಮಟೆ, ಆರ್ಕೆಸ್ಟ್ರಾ, ಅನ್ನದಾನ ಎಂದು ಸಂಭ್ರಮಿಸುತ್ತಾರೆ. ಬಹುತೇಕ ಕಡೆಗಳಲ್ಲಿ ಶುಕ್ರವಾರ ಗಣೇಶಮೂರ್ತಿ ಪ್ರತಿಷ್ಠಾಪಿಸಿ 3 ದಿನಗಳ ಕಾಲ ಯುವಕರು ಗಣೇಶನನ್ನು ಪೂಜಿಸುತ್ತಾರೆ. ಗಣೇಶನನ್ನು ನೀರಿಗೆ ವಿಸರ್ಜಿಸುವವರೆಗೂ ಅದೇ ಗುಂಗಿನಲ್ಲಿ ಇರುತ್ತಾರೆ. ಇಂತಹ ಸಮಯದಲ್ಲಿ ಚಿತ್ರಮಂದಿರಗಳಿಗೆ ಹೋಗಿ ಸಿನಿಮಾ ನೋಡುವ ಮನಸ್ಸು ಮಾಡುವುದಿಲ್ಲ. ಯಾವುದೇ ಚಿತ್ರಕ್ಕೆ ಮೊದಲ ಪ್ರೇಕ್ಷಕರು ಯುವಕರು, ಅಭಿಮಾನಿಗಳು. ಅವರೆಲ್ಲರೂ ಗಣೇಶ ಹಬ್ಬದ ಗುಂಗಿನಲ್ಲಿ ಇದ್ದರೆ ಬಂದು ಸಿನಿಮಾ ನೋಡುವವರು ಯಾರು? ಹಾಗಾಗಿ ಇಂತಹ ಸಮಯದಲ್ಲಿ ಸಿನಿಮಾ ಬಿಡುಗಡೆ ಮಾಡದೇ ಇರುವುದೇ ಒಳಿತು ಎನ್ನುವ ಲೆಕ್ಕಾಚಾರ ಬಹುತೇಕರದ್ದು.

ಈ ವರ್ಷ ಮೊದಲ 7 ತಿಂಗಳು ಕನ್ನಡದಲ್ಲಿ ಯಾವುದೇ ಸಿನಿಮಾ ಹಿಟ್ ಆಗಲಿಲ್ಲ. ಆದರೆ ಎಕ್ಕ ಸಿನಿಮಾ ಬಳಿಕ ಸು ಫ್ರಂ ಸೋ ಸಿನಿಮಾ ಬಂದು ಬಾಕ್ಸಾ ಫೀಸ್ ಶೇಕ್ ಮಾಡುತ್ತಿದೆ. 15 ದಿನ ಕಳೆದರೂ ಸಿನಿಮಾ ಆರ್ಭಟ ಕಮ್ಮಿ ಆಗಿಲ್ಲ. ಇನ್ನು ಪ್ರೇಮ್ ನಿರ್ದೇಶನದ ಕೆಡಿ, ಅರ್ಜುನ್ ಜನ್ಯಾ ಸಾರಥ್ಯದ 45 ಸೇರಿ ಒಂದಷ್ಟು ಸಿನಿಮಾಗಳು ಬಿಡುಗಡೆಗೆ ಸಜ್ಜಾಗಿದೆ. ಆದರೆ ಆಗಸ್ಟ್ ಕೊನೆ ವಾರ ಅಂದರೆ ಗಣೇಶ ಹಬ್ಬದ ವೀಕೆಂಡ್ ಯಾವುದೇ ಸಿನಿಮಾ ಬಿಡುಗಡೆ ಆಗುತ್ತಿಲ್ಲ.

ಅಕ್ಟೋಬರ್ 2ಕ್ಕೆ ಗಾಂಧಿ ಜಯಂತಿ ಸಂಭ್ರಮದಲ್ಲಿ ರಿಷಬ್ ಶೆಟ್ಟಿ ನಿರ್ದೇಶಿಸಿ ನಟಿಸಿರುವ ಕಾಂತಾರ-1 ಸಿನಿಮಾ ತೆರೆಗೆ ಬರ್ತಿದೆ. ದುನಿಯಾ ವಿಜಯ್ ನಟನೆಯ ಲ್ಯಾಂಡ್ ಲಾರ್ಡ್ ಚಿತ್ರತಂಡ ದೀಪಾವಳಿ ವೀಕೆಂಡ್ ಮೇಲೆ ಕಣ್ಣಿಟ್ಟಿದೆ. ದರ್ಶನ್-ಮಿಲನಾ ಪ್ರಕಾಶ್ ಕಾಂಬಿನೇಷನ್ ಡೆವಿಲ್ ಸಿನಿಮಾ ದಸರಾ ಸಂಭ್ರಮದಲ್ಲಿ ತೆರೆಗೆ ಬರುವ ನಿರೀಕ್ಷೆಯಿದೆ. ಸುದೀಪ್ ನಟನೆಯ 47 ಚಿತ್ರವನ್ನು ಕ್ರಿಸ್‌ಮಸ್ ಹಬ್ಬಕ್ಕೆ ತೆರೆಗೆ ತರುವ ಪ್ರಯತ್ನ ನಡ್ತೀದೆ.

# ಸಾರಥಿ ರೀತಿ ದರ್ಶನ್ ಡೆವಿಲ್ ಸಿನಿಮಾ ಬಿಡುಗಡೆ?

**ಫಸ್ಟ್ ಸಾಂಗ್ ಕಥೆಯೇನು?**

ರೇಣುಕಾಸ್ವಾಮಿ ಪ್ರಕರಣದಲ್ಲಿ ನಟ ದರ್ಶನ್ ಮತ್ತೆ ಜೈಲು ಸೇರುವಂತಾಗಿದೆ. ಸಂಜೆ ವೇಳೆಗೆ ತಾವೇ ಶರಣಾಗುವುದಾಗಿ ದರ್ಶನ್ ಪೊಲೀಸರಿಗೆ ತಿಳಿಸಿದ್ದಾರೆ ಎನ್ನಲಾಗಿದೆ. ಪ್ರಕರಣದ ವಿಚಾರಣೆ ಬೇಗ ನಡೆಸುವಂತೆ ಸುಪ್ರೀಂ ಕೋರ್ಟ್ ಹೇಳಿದೆ. ಹಾಗಾಗಿ ಸದ್ಯಕ್ಕೆ ದರ್ಶನ್‌ಗೆ ಜೈಲೇ ಗತಿ ಎನ್ನುವಂತಾಗಿದೆ.

ಕಳೆದ ವರ್ಷ ಜೂನ್ 11 ರಂದು ದರ್ಶನ್ ಬಂಧನವಾಗಿತ್ತು. ಬಳಿಕ ವಿಚಾರಣಾಧೀನ ಕೈದಿಯಾಗಿ ಜೈಲು ಸೇರಿದ್ದರು. ಚಿಕಿತ್ಸೆ ನೆಪವೊಡ್ಡಿ ಮಧ್ಯಂತರ ಜಾಮೀನು ಪಡೆದು 131 ದಿನಗಳ ಬಳಿಕ ಜೈಲಿನಿಂದ ಬಿಡುಗಡೆ ಆಗಿದ್ದರು. ಬಳಿಕ ಎಲ್ಲಾ ಆರೋಪಿಗಳಿಗೆ ಜಾಮೀನು ಸಿಕ್ಕಿತ್ತು. ಆದರೆ ಈ ಬಾರಿ ಮತ್ತೆ ಜಾಮೀನು ಸಿಗುವುದು ಕಷ್ಟ ಎಂದೇ ಹೇಳಲಾಗ್ತಿದೆ. ಕುಂಟು ನೆಪವೊಡ್ಡಿ ಜಾಮೀನು ಕೇಳಲು ಅವಕಾಶ ಇಲ್ಲ ಎನ್ನುವಂತಾಗಿದೆ. ಇದೆಲ್ಲದರ ನಡುವೆ ಡೆವಿಲ್ ಸಿನಿಮಾ ಕಥೆ ಏನು? ಎನ್ನುವ ಚರ್ಚೆ ಶುರುವಾಗಿದೆ.

ಡೆವಿಲ್ ಚಿತ್ರದ ಒಂದು ವಾರದ ಚಿತ್ರೀಕರಣದ ಬಳಿಕ ದರ್ಶನ್ ಕೈಗೆ ಪೆಟ್ಟಾಗಿತ್ತು. ಬಳಿಕ ದರ್ಶನ್ ಕೈಗೆ ಸರ್ಜರಿ ಮಾಡಲಾಗಿತ್ತು. ಬಳಿಕ ವಿಶ್ರಾಂತಿ ಪಡೆದು 2ನೇ ಶೆಡ್ಯೂಲ್ ಆರಂಭಿಸುವ ವೇಳೆಗೆ ರೇಣುಕಾಸ್ವಾಮಿ ಪ್ರಕರಣ ಬೆಳಕಿಗೆ ಬಂದಿತ್ತು. ದರ್ಶನ್ ಜೈಲು ಸೇರಿ ಡೆವಿಲ್ ಸಿನಿಮಾ ನಿಂತು ಹೋಗಿತ್ತು. ಜೈಲಿನಿಂದ ಬಿಡುಗಡೆಯಾಗಿದ್ದ ದರ್ಶನ್ ಬೆನ್ನು ನೋವಿನ ಸಮಸ್ಯೆಯಿಂದ ವಿಶ್ರಾಂತಿ




ಪಡೆದಿದ್ದರು. 5 ತಿಂಗಳ ಹಿಂದೆ ಮತ್ತೆ ಚಿತ್ರೀಕರಣ ಆರಂಭವಾಗಿತ್ತು.

ಮೈಸೂರು, ರಾಜಸ್ಥಾನದಲ್ಲಿ ಚಿತ್ರದ ಚಿತ್ರೀಕರಣ ಮುಗಿಸಲಾಗಿತ್ತು. ಬಳಿಕ ಸ್ವಿಟ್ಜರ್‌ಲ್ಯಾಂಡ್‌ಗೆ ತೆರಳಿ ಸಾಂಗ್ ಶೂಟ್ ಮಾಡಲು ಪ್ಲ್ಯಾನ್ ಮಾಡಲಾಗಿತ್ತು. ಆದರೆ ದರ್ಶನ್ ಅಲ್ಲಿಗೆ ತೆರಳಲು ವೀಸಾ ಸಿಕ್ಕಿರಲಿಲ್ಲ. ಬಳಿಕ ಥಾಯ್ಲೆಂಡ್ ವೀಸಾ ಪಡೆದು ಹೋಗಿ ಚಿತ್ರೀಕರಣ ನಡೆಸಿದ್ದರು. 10 ದಿನಗಳ ಕಾಲ ಅಲ್ಲಿ ದರ್ಶನ್ ಉಳಿದುಕೊಂಡಿದ್ದರು. ಡೆವಿಲ್ ಸಿನಿಮಾ ಚಿತ್ರೀಕರಣ ಸಂಪೂರ್ಣವಾಗಿ ಮುಕ್ತಾಯವಾಗಿದೆ. ದರ್ಶನ್ ಡಬ್ಬಿಂಗ್ ಸಹ ಮುಗಿಸಿದ್ದಾರೆ. ಅಕ್ಟೋಬರ್ ಕೊನೆ ವಾರದಲ್ಲಿ ಸಿನಿಮಾ ಬಿಡುಗಡೆಗೆ ತಯಾರಿ ನಡ್ತೀದೆ.

ಇಂದು (ಆಗಸ್ಟ್ 15) ಚಿತ್ರದ ಫಸ್ಟ್ ಸಾಂಗ್ ರಿಲೀಸ್ ಮಾಡಲು ಚಿತ್ರತಂಡ ತಯಾರಿ ನಡೆಸಿತ್ತು. ದರ್ಶನ್ ಕೂಡ ಈ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿ ಪ್ರಚಾರ ಮಾಡುತ್ತಿದ್ದರು. ಅಷ್ಟರಲ್ಲೇ ಸುಪ್ರೀಂ ಕೋರ್ಟ್ ಜಾಮೀನು ರದ್ದು ಮಾಡಿ ಆದೇಶ ಹೊರಡಿಸಿದೆ. ದರ್ಶನ್ ಮತ್ತೆ ಜೈಲಿಗೆ ಹೋಗಬೇಕಾಗಿದೆ. ಇದೆಲ್ಲದರ ನಡುವೆ ನಾಳೆ ಸಾಂಗ್ ಬಿಡುಗಡೆ ಆಗುತ್ತಾ ಎನ್ನುವ ಅನುಮಾನ ಕೆಲವರನ್ನು ಕಾಡುತ್ತಿದೆ. ಆಪ್ತ ಮೂಲಗಳ ಪ್ರಕಾರ ಅಂದುಕೊಂಡ ಸಮಯಕ್ಕೆ ಸರಿಯಾಗಿ ಸಾಂಗ್ ಹೊರಬರಲಿದೆ.

ಡೆವಿಲ್ ಚಿತ್ರದಲ್ಲಿ ಗ್ರಾಫಿಕ್ಸ್ ಕೆಲಸ ಜಾಸ್ತಿಯಿದೆ. ಹಾಗಾಗಿ ಪೋಸ್ಟ್ ಪ್ರೊಡಕ್ಷನ್ ತಡವಾಗುತ್ತಿದೆ. ದರ್ಶನ್ ಸದ್ಯಕ್ಕೆ ಜೈಲಿನಿಂದ ಹೊರಬರುವುದು ಕಷ್ಟ ಎನ್ನಲಾಗ್ತಿದ್ದು ಡೆವಿಲ್ ಸಿನಿಮಾ ಬಿಡುಗಡೆ ಆಗುತ್ತಾ? ಎನ್ನುವ ಪ್ರಶ್ನೆ ಕೆಲವರನ್ನು ಕಾಡುತ್ತಿದೆ. 14 ವರ್ಷಗಳ ಹಿಂದೆ ದರ್ಶನ್ ಕೌಟುಂಬಿಕ ಕಲಹ ಹಿನ್ನೆಲೆಯಲ್ಲಿ ಪರಪ್ಪನ ಅಗ್ರಹಾರ ಜೈಲು ಸೇರಿದ್ದರು. ಅವರು ಜೈಲಿನೊಳಗೆ ಇದ್ದಾಗಲೇ ಸಾರಥಿ ಸಿನಿಮಾ ತೆರೆಕಂಡು ಗೆದ್ದಿತ್ತು. ಬಳಿಕ ಜಾಮೀನು ಪಡೆದು ಹೊರ ಬಂದಿದ್ದರು. ರಾಜ್ಯಾದ್ಯಂತ ವಿಜಯಯಾತ್ರೆ ನಡೆಸಿದ್ದರು. ದರ್ಶನ್ ಜೈಲಿನಲ್ಲಿ ಇದ್ದರೂ ಡೆವಿಲ್ ಸಿನಿಮಾ ಬಿಡುಗಡೆ ಆಗುತ್ತಾ? ಅಥವಾ ಸಿನಿಮಾ ಬಿಡುಗಡೆ ವೇಳೆಗೆ ದರ್ಶನ್ ಜೈಲಿನಿಂದ ಹೊರಬರ್ತಾರಾ? ಕಾದು ನೋಡಬೇಕಿದೆ.

ಮಿಲನಾ ಪ್ರಕಾಶ್ ನಿರ್ದೇಶನದ ಡೆವಿಲ್ ಚಿತ್ರದಲ್ಲಿ ರಚನಾ ರೈ ನಾಯಕಿಯಾಗಿ ನಟಿಸಿದ್ದಾರೆ. ಅಜನೀಶ್ ಲೋಕನಾಥ್ ಸಂಗೀತ, ಸುಧಾಕರ್ ರಾಜ್ ಛಾಯಾಗ್ರಹಣ ಚಿತ್ರಕ್ಕಿದೆ. ಸ್ವತಃ ಮಿಲನಾ ಪ್ರಕಾಶ್ ಚಿತ್ರಕ್ಕೆ ಹಣ ಹೂಡಿದ್ದಾರೆ.





# ಬೀದಿ ನಾಯಿಗಳ ಕುರಿತ ಸುಪ್ರೀಂ ಕೋರ್ಟ್ ಆದೇಶ; ಸುದೀಪ್ ಪ್ರತಿಕ್ರಿಯೆ ಬಗ್ಗೆ ಪರ ವಿರೋಧ ಚರ್ಚೆ

ರಾಷ್ಟ್ರ ರಾಜಧಾನಿಯಲ್ಲಿ ನಾಯಿ ಕಡಿತ ಮತ್ತು ರೇಬೀಸ್ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆ, ವಸತಿ ಪ್ರದೇಶಗಳಲ್ಲಿ ಇರುವ ಎಲ್ಲಾ ಬೀದಿ ನಾಯಿಗಳನ್ನು ಆಶ್ರಯ ತಾಣಗಳಿಗೆ ಸ್ಥಳಾಂತರಿಸುವಂತೆ ಸುಪ್ರೀಂ ಕೋರ್ಟ್ ಸೋಮವಾರ (ಆಗಸ್ಟ್ 11) ಆದೇಶ ನೀಡಿದೆ. ಈ ಬಗ್ಗೆ ಪರ ವಿರೋಧ ಚರ್ಚೆ ನಡ್ತೀದೆ.

ಕನ್ನಡ ಸಿನಿಮಾ ತಾರೆಯರು ಕೂಡ ಸುಪ್ರೀಂ ಕೋರ್ಟ್ ಆದೇಶದ ಬಗ್ಗೆ ಪ್ರತಿಕ್ರಿಯಿಸುತ್ತಿದ್ದಾರೆ. ನಟ ಸುದೀಪ್, ನಟಿಯರಾದ ರಮ್ಯಾ, ಮೇಘಾ ಶೆಟ್ಟಿ ಸೇರಿದಂತೆ ಹಲವರು ಈ ಬಗ್ಗೆ ತಮ್ಮ ಅಭಿಪ್ರಾಯ ಹಂಚಿಕೊಂಡಿದ್ದಾರೆ. ಈ ಬಗ್ಗೆ ನಟ ಸುದೀಪ್ ಕೂಡ ಪ್ರತಿಕ್ರಿಯಿಸಿ ಟ್ವೀಟ್ ಮಾಡಿದ್ದಾರೆ. ಬೀದಿ ನಾಯಿಗಳನ್ನು ದತ್ತು ಪಡೆಯುವಂತೆ ಮನವಿ ಮಾಡಿದ್ದಾರೆ.

ದೆಹಲಿ ಎನ್‌ಸಿಆರ್‌ನಲ್ಲಿ ಬೀದಿ ನಾಯಿಗಳನ್ನು ಆಶ್ರಯ ತಾಣಗಳಿಗೆ ಸ್ಥಳಾಂತರಿಸುವ ಸುಪ್ರೀಂ ಕೋರ್ಟ್ ನಿರ್ಧಾರವನ್ನು ನಾನು ಪ್ರಶ್ನಿಸಲು ಬಯಸುವುದಿಲ್ಲ. ಏಕೆಂದರೆ ಈ ನಿರ್ಧಾರಕ್ಕೆ ಅದರದ್ದೇ ಆದ ಕಾರಣಗಳಿರಬಹುದು. ಆದರೆ ಇದು ನಾಯಿಗಳ ಯೋಗಕ್ಷೇಮ ಮತ್ತು ಅವುಗಳ ಜೀವನದ ಮೇಲೆ ಬೀರುವ ಪರಿಣಾಮದ ಬಗ್ಗೆ ಗಂಭೀರ ಕಳವಳ ಹುಟ್ಟುಹಾಕುತ್ತದೆ ಎಂದು ನಟ ಸುದೀಪ್ ಅಭಿಪ್ರಾಯ ಪಟ್ಟಿದ್ದಾರೆ.

ಟ್ವೀಟ್ ಮುಂದುವರೆಸಿ ನಾನು ಚಿಕ್ಕಂದಿನಿಂದ ನಾಯಿಗಳನ್ನು ಸಾಕುತ್ತಾ ಬೆಳೆದವನು. ನನ್ನ ಕುಟುಂಬವು ಇಂಡೀಸ್ ನಾಯಿಗಳನ್ನು ದತ್ತು ಪಡೆದಿರುವುದರಿಂದ, ಅವು ತರುವ ಪ್ರೀತಿ ಮತ್ತು ನಿಷ್ಠೆ ಎಂಥದ್ದು ಎಂದು ನನಗೆ ಗೊತ್ತು. ನಾಯಿಗಳು ಬದುಕಲು ಬೀದಿಗಳನ್ನು ಆಯ್ಕೆ ಮಾಡಿಕೊಳ್ಳಲಿಲ್ಲ, ಆದರೆ ನಾವು ಅವುಗಳಿಗೆ ಆಶ್ರಯ ನೀಡಬಹುದು. ನಾವು ಖಂಡಿತವಾಗಿಯೂ ಧ್ವನಿಯಿಲ್ಲದವರಿಗೆ ಧ್ವನಿಯಾಗಬಹುದು. ದಯವಿಟ್ಟು ಬೀದಿ ನಾಯಿಗಳನ್ನು ದತ್ತು ತೆಗೆದುಕೊಳ್ಳಿ ಎಂದು ಸುದೀಪ್ ಮನವಿ ಮಾಡಿದ್ದಾರೆ. ನಟ ಸುದೀಪ್ ಟ್ವೀಟ್ ಬಗ್ಗೆ ಕಾಮೆಂಟ್ ಬಾಕ್ಸ್‌ನಲ್ಲಿ ತರಹೇವಾರಿ ಕಾಮೆಂಟ್ ಬರ್ತಿದೆ. ಕಾರಿನಲ್ಲಿ ಓಡಾಡುವವರಿಗೆ ಬೀದಿನಾಯಿಗಳ ಕಾಟ ಏನು ಎನ್ನುವುದು ಗೊತ್ತಿಲ್ಲ. ರಸ್ತೆಯಲ್ಲಿ ನಡೆದಾಡುವವರೆಗೆ ಆ ಕಷ್ಟ ಗೊತ್ತು ಎಂದು ಕೆಲವರು ಕಾಮೆಂಟ್ ಮಾಡಿ ವ್ಯಂಗ್ಯವಾಡಿದ್ದಾರೆ. ಆದರೆ ಅಭಿಮಾನಿಗಳು ಮಾತ್ರ ಸುದೀಪ್ ಪರ ಬ್ಯಾಟ್ ಬೀಸಿದ್ದಾರೆ. ಸುದೀಪ್ ಸರ್ ಸುಪ್ರೀಂ ಆದೇಶದ ಬಗ್ಗೆ ವಿರೋಧ ವ್ಯಕ್ತಪಡಿಸಿಲ್ಲ. ಬದಲಿಗೆ ನಾಯಿಗಳನ್ನು ದತ್ತು ಪಡೆಯಲು ಮನವಿ ಮಾಡಿದ್ದಾರೆ. ಅವರ ಟ್ವೀಟ್ ಅನ್ನು ತಪ್ಪಾಗಿ ಅರ್ಥ ಮಾಡಿಕೊಳ್ಳಬೇಡಿ ಎನ್ನುತ್ತಿದ್ದಾರೆ.

ಸುಪ್ರೀಂ ಕೋರ್ಟ್ ಆದೇಶವನ್ನು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರೋಧಿಸಿದ್ದಾರೆ. ಈ ಬಗ್ಗೆ ಟ್ವೀಟ್ ಮಾಡಿ ದೆಹಲಿ-ಎನ್‌ಸಿಆರ್‌ನಿಂದ ಎಲ್ಲಾ ಬೀದಿ ನಾಯಿಗಳನ್ನು ಸ್ಥಳಾಂತರಿಸಬೇಕು ಎಂದ ಸುಪ್ರೀಂ ಕೋರ್ಟ್‌ನ ನಿರ್ದೇಶನ ದಶಕಗಳ ಮಾನವೀಯ, ವೈಜ್ಞಾನಿಕ ಬೆಂಬಲಿತ ನೀತಿಯಿಂದ ಹಿಂದಕ್ಕೆ ಸರಿದಂತೆ. ಮೂಕ ಪ್ರಾಣಿಗಳ ಸಮಸ್ಯೆ ಅಳಿಸುವಂಥದ್ದಲ್ಲ. ಕ್ರೌರ್ಯವಿಲ್ಲದೇ ಅವುಗಳಿಗೆ ಆಶ್ರಯ ಕಲ್ಪಿಸುವುದು, ಸಂತಾನಹರಣ ಚಿಕಿತ್ಸೆ, ವ್ಯಾಕ್ಸಿನೇಷನ್ ಮತ್ತು ಸಮುದಾಯ ಆರೈಕೆ ಮೂಲಕ ಬೀದಿಗಳನ್ನು ಸುರಕ್ಷಿತವಾಗಿರಿಸಬಹುದು ಎಂದು ಅವರು ಟ್ವೀಟ್ ಮಾಡಿದ್ದಾರೆ.

ರಾಹುಲ್ ಗಾಂಧಿ ಟ್ವೀಟ್ ರೀಟ್ವೀಟ್ ಮಾಡಿ ಕರ್ನಾಟಕ ಸಿಎಂ ಸಿದ್ದರಾಮಯ್ಯ ಕೂಡ ಈ ಬಗ್ಗೆ ಪ್ರತಿಕ್ರಿಯಿಸಿದ್ದಾರೆ. ಬೀದಿ ನಾಯಿಗಳನ್ನು ಸ್ಥಳಾಂತರಿಸುವುದೇ ಆಡಳಿತವಲ್ಲ. ಇದು ಕ್ರೌರ್ಯ. ಸಂತಾನಶಕ್ತಿ ಹರಣ ಚಿಕಿತ್ಸೆ, ಲಸಿಕೆ, ಆರೈಕೆ ಕೇಂದ್ರಗಳಂತಹ ಪರಿಹಾರ ಕ್ರಮಗಳಿವೆ. ಅದು ಬಿಟ್ಟು ಇಂತಹ ಭಯದಿಂದ ಇಂತಹ ನಿರ್ಧಾರ ಕೈಗೊಂಡರೆ ಸಮಸ್ಯೆ ಹೆಚ್ಚುತ್ತದೆ ಎಂದು ಬರೆದುಕೊಂಡಿದ್ದಾರೆ.

# ಭಾರತ ಸ್ವಾತಂತ್ರ್ಯಕ್ಕೆ ಕ್ರಾಂತಿಕಾರಿಗಳ ಕೊಡುಗೆ ಅಪಾರ

• ಪ್ರಜೋದಯ ವರದಿ

**ಸಕಲೇಶಪುರ:** ದೇಶಕ್ಕೆ ಬ್ರಿಟಿಷರಿಂದ ಸ್ವಾತಂತ್ರ್ಯ ತಂದುಕೊಡುವ ನಿಟ್ಟಿನಲ್ಲಿ ಸಾವರ್ಕರ್‌ರಂತಹ ಕ್ರಾಂತಿಕಾರಿಗಳ ಪಾತ್ರವು ದೊಡ್ಡದಾಗಿದೆ ಎಂದು ಹಿಂದೂ ಹಿತ ರಕ್ಷಣಾ ಸಮಿತಿ ರಾಜ್ಯ ಮುಖಂಡ ರಘು ಸಕಲೇಶಪುರ ಅವರು ಹೇಳಿದರು.

ಪಟ್ಟಣದಲ್ಲಿ ಹಿಂದೂ ಹಿತ ರಕ್ಷಣಾ ವೇದಿಕೆ ವತಿಯಿಂದ ಹಳೆ ಬಸ್ ನಿಲ್ದಾಣದಲ್ಲಿ ಆಯೋಜಿಸಲಾಗಿದ್ದ ಅಖಂಡ ಭಾರತ ಸಂಕಲ್ಪ ದಿನಾಚರಣೆ ಸಭಾ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಈ ಕಾರ್ಯಕ್ರಮದ ಮುಖ್ಯ ಭಾಷಣಕಾರರಾಗಿ ಹಿಂದೂ ಮುಖಂಡ ಪುನೀತ್ ಕೆರೆಹಳ್ಳಿಯವರು ಬರಬೇಕಾಗಿದ್ದರೂ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾಂಗ್ರೆಸ್ ಸರ್ಕಾರದ ಒತ್ತಡದಿಂದ ಪುನೀತ್ ಕೆರೆಹಳ್ಳಿಯವರಿಗೆ ಜಿಲ್ಲಾಡಳಿತ ನಿರ್ಬಂಧ ಹೇರಿರುವುದು ಖಂಡನೀಯ ಎಂದು ಹೇಳಿದರು.

1947ರ ಆಗಸ್ಟ್ 14ರ ಮಧ್ಯರಾತ್ರಿ ದೇಶಕ್ಕೆ ಸ್ವಾತಂತ್ರ್ಯ ದೊರಕಿತು. ಆದರೆ ದೇಶ ಪಾಕಿಸ್ತಾನ, ಬಾಂಗ್ಲಾದೇಶ, ಶ್ರೀಲಂಕಾ ಎಂದು ಮೂರು ತುಂಡಾಯಿತು. ಆಗಸ್ಟ್ 14ರ




ಮಧ್ಯರಾತ್ರಿ ದೇಶದ ಲಕ್ಷಾಂತರ ಹಿಂದೂ ಹೆಣ್ಣುಮಕ್ಕಳ ಮೇಲೆ ಅತ್ಯಾಚಾರ ನಡೆಯಿತು. ಲಕ್ಷಾಂತರ ಹಿಂದೂಗಳನ್ನು ಹತ್ಯೆ ಮಾಡಲಾಯಿತು. ಆದರೆ ಇಂತಹ ಕರಾಳ ರಾತ್ರಿಯನ್ನು ನಾವು ನೆನಪಿಸಿಕೊಳ್ಳುವ ಬದಲು ಪ್ರತಿವರ್ಷ ಆಗಸ್ಟ್ 15ರಂದು ಸಂಭ್ರಮಾಚರಣೆಯಲ್ಲಿ ಮುಳುಗುತ್ತೇವೆ. ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ದೇಶ ವಿಭಜನೆಯ ದುರಂತ ಕಥೆಯನ್ನು ಹೇಳಿಕೊಡಬೇಕು ಎಂದರು.

ದೇಶಕ್ಕೆ ಸ್ವಾತಂತ್ರ್ಯವನ್ನು ಯಾರು ತಂದು ಕೊಟ್ಟರು ಎಂದರೆ ಗಾಂಧೀಜಿ ಹಾಗೂ ನೆಹರು ಎಂದು ಹೇಳಲಾಗುತ್ತದೆ. ಆದರೆ ಇವರಿಬ್ಬರಿಗಿಂತ ಶೇಕಡಾರು ಕ್ರಾಂತಿಕಾರರು ದೇಶಕ್ಕೆ ಸ್ವಾತಂತ್ರ್ಯ ತರಲು ಪ್ರಾಣವನ್ನೇ ಮುಡಿಪಾಗಿಟ್ಟಿದ್ದರು. ಅದಕ್ಕಾಗಿ ಮಕ್ಕಳಿಗೆ ನಾವು ನೈಜ ಇತಿಹಾಸವನ್ನು ತಿಳಿಸಬೇಕು. ದೇಶ ವಿಭಜನೆಯಾದರೆ ದೇಶದಲ್ಲಿರುವ ಎಲ್ಲಾ ಮುಸ್ಲಿಂರು ಪಾಕಿಸ್ತಾನಕ್ಕೆ ಹೋಗಬೇಕು, ಅಲ್ಲಿರುವ ಎಲ್ಲಾ ಹಿಂದೂಗಳು ಭಾರತಕ್ಕೆ ಬರಬೇಕು ಎಂದು ಸಂವಿಧಾನದ ಪಿತಾಮಹ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಹೇಳಿದ್ದರು. ಆದರೆ ಅಂಬೇಡ್ಕರ್ ಅವರ ಮಾತಿಗೆ ಬೆಲೆ ಕೊಡದೆ ಜಾತ್ಯಾತೀತ ದೇಶವನ್ನಾಗಿ ಮಾಡಲಾಗಿದೆ.

ಇಂದಿಗೂ ದೇಶದಲ್ಲಿ ಹಿಂದೂ ಧಾರ್ಮಿಕ ಕೇಂದ್ರಗಳು, ಹಿಂದೂಗಳ ನಂಬಿಕೆಗಳ ವಿರುದ್ಧ ಅಪಪ್ರಚಾರ ನಡೆಯುತ್ತಿದೆ. ಧರ್ಮಸ್ಥಳ ಹಿಂದೂಗಳ ಪವಿತ್ರ ಕ್ಷೇತ್ರವಾಗಿದ್ದು, ಆದರೂ ಸಹ ಅನಾಮಿಕನಿಗೆ ಮುಖವಾಡ ಹಾಕಿಸಿ ಎಸ್.ಐ.ಟಿ. ತಂಡ ರಚಿಸಿ ತನಿಖೆ ನಡೆಯುತ್ತಿದೆ. ಕೂಡಲೆ ಈ ಅನಾಮಿಕನನ್ನು ಮಂಪರು ಪರೀಕ್ಷೆಗೆ ಒಳಪಡಿಸಬೇಕು ಹಾಗೂ ಧರ್ಮಸ್ಥಳ ವಿರುದ್ಧದ ಅಪಪ್ರಚಾರ ನಿಲ್ಲಿಸಬೇಕೆಂದು ಆಗ್ರಹಿಸಿದರು.

ದತ್ತಪೀಠಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಹೋಗುವವರು ಸಕಲೇಶಪುರದ ಕಾರ್ಯಕರ್ತರಾಗಿದ್ದಾರೆ. ಸರ್ಕಾರಕ್ಕೆ ತಾಕತ್ತಿದ್ದರೆ ದತ್ತಪೀಠದಲ್ಲಿರುವ ಗೋರಿಗಳ ಉತ್ಖನನವನ್ನು ಜಿಪಿಆರ್ ಹಾಗೂ ರಾಡರ್ ಮುಖಾಂತರ ಮಾಡಲಿ. ಕ್ಷೇತ್ರದ ಶಾಸಕರು ಗೆಲುವು ಸಾಧಿಸುವಲ್ಲಿ ಹಿಂದೂ ಕಾರ್ಯಕರ್ತರ ಶ್ರಮ ಹೆಚ್ಚಿದ್ದು, ಇದಕ್ಕೆ ತಕ್ಕಂತೆ ಕ್ಷೇತ್ರದ ಜನರಿಗೆ ಶಾಸಕರು ಕ್ಷೇತ್ರದ ಸಮಸ್ಯೆಗಳನ್ನು ಸದನದಲ್ಲಿ ಗಟ್ಟಿಧ್ವನಿಯಲ್ಲಿ ಹೊರಹಾಕುತ್ತಿದ್ದು, ಅದರಿಂದಾಗಿ ಅವರು ಜನಸಾಮಾನ್ಯರ ಶಾಸಕರಾಗಿ ಹೊರಹೊಮ್ಮಿದ್ದಾರೆ. ಮುಂಬರುವ ರಾಮಧೂತ ಗಣಪತಿ ಉತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಬೇಕು ಎಂದರು.

ಹಿಂದೂ ಹಿತ ರಕ್ಷಣಾ ವೇದಿಕೆಯ ಮುಖಂಡ ಶಿವುಜಿಪ್ಪಿ ಮಾತನಾಡಿ, ಸಕಲೇಶಪುರದಲ್ಲಿ ಎಲ್ಲಾ ವರ್ಗದವರು ಹಿಂದೂ ಸಂಘಟನೆಯಲ್ಲಿ ಗುರುತಿಸಿಕೊಂಡಿದ್ದಾರೆ. ಸಂಘಟನೆ ವತಿಯಿಂದ ಗೋಹತ್ಯೆ ತಡೆಗೆ, ಲವ್ ಜಿಹಾದ್ ಹಾಗೂ ಮರಳು ಮಾಫಿಯಾ ತಡೆಗೆ ನಿರಂತರವಾಗಿ ಕಾರ್ಯ ನಡೆಯುತ್ತಿದೆ ಎಂದು ತಿಳಿಸಿದರು.

ಪಟ್ಟಣದ ಆಂಜನೇಯಸ್ವಾಮಿ ದೇವಸ್ಥಾನದಿಂದ ಹಳೆ ಬಸ್ ನಿಲ್ದಾಣದವರೆಗೆ ಮಳೆಯ ನಡುವೆಯೇ ಬೃಹತ್ ಪಂಜಿನ ಮೆರವಣಿಗೆ ನಡೆಯಿತು.

ಹಿಂದೂ ಹಿತ ರಕ್ಷಣಾ ವೇದಿಕೆಯ ಮುಖಂಡ ರಾದ ಕೌಶಿಕ್ ಹೆನ್ನಲಿ, ಮಂಜು ಕಬ್ಬಿನಗದ್ದೆ, ದಿಲೀಪ್, ದುಷ್ಯಂತ್, ಧರ್ಮೇಶ್, ಶೇಖರ್ ಕಬ್ಬಿನಗದ್ದೆ, ಬಿಜೆಪಿ ತಾಲ್ಲೂಕು ಅಧ್ಯಕ್ಷ ವಳಲಹಳ್ಳಿ ಅಶ್ವಥ್, ಪ್ರತಿಭಾ ಮಂಜನಾಥ್, ಬಬಿತಾ ಅಶ್ವನಾಥ್ ಹಾಜರಿದ್ದರು.

## ಸ್ವಾತಂತ್ರ್ಯ ದಿನಾಚರಣೆ ಸಿದ್ಧತೆ ವೀಕ್ಷಣೆ



• ಪ್ರಜೋದಯ ವರದಿ

**ಹಾಸನ:** ಜಿಲ್ಲಾ ಕ್ರೀಡಾಂಗಣದ ಹಾಕಿ ಮೈದಾನದಲ್ಲಿ ಶುಕ್ರವಾರ ನಡೆಯುವ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದ ಸಿದ್ಧತೆಯನ್ನು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಪರಿಶೀಲನೆ ಮಾಡಿ ಅಧಿಕಾರಿಗಳಿಗೆ ಸಲಹೆ ಸೂಚನೆ ನೀಡಿದರು.

ಮುಖ್ಯ ವೇದಿಕೆ, ಪಥಸಂಚಲನದ ಸ್ಥಳ, ಧ್ವಜಾರೋಹಣ ಸ್ಥಳವನ್ನು ಪರಿಶೀಲಿಸಿ, ಯಾವುದೇ ಲೋಪವಾಗದಂತೆ ಸಿದ್ಧತೆ ಮಾಡಿಕೊಳ್ಳುವಂತೆ ತಿಳಿಸಿದರು.

ಈ ವೇಳೆ ಲೋಕೋ ಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನೀಯರ್ ಗಿರೀಶ್, ಮಹಾನಗರಪಾಲಿಕೆ ಆಯುಕ್ತ ಕೃಷ್ಣಮೂರ್ತಿ, ಉಪ ವಿಭಾಗಾಧಿಕಾರಿ ಮಾರುತಿ, ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆ ಸಹಾಯಕ ನಿರ್ದೇಶಕ ಹರೀಶ್, ತಹಶೀಲ್ದಾರ್ ಗೀತಾ ಮತ್ತಿತರರು ಹಾಜರಿದ್ದರು.

## ತರಬೇತಿಗೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

• ಪ್ರಜೋದಯ ವರದಿ

**ಹಾಸನ:** ಅಲ್ಪಸಂಖ್ಯಾತರ ನಿರ್ದೇಶನಾಲಯದ ವತಿಯಿಂದ 2025-26ನೇ ಸಾಲಿಗೆ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಯು.ಪಿ.ಎಸ್.ಸಿ ನಾಗರೀಕ ಸೇವೆ, ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರ್, ಗ್ರೂಪ್-ಸಿ, RRB & SSC ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ರಾಜ್ಯದ ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಮತ್ತು ಪಾರ್ಸಿ. ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿಯನ್ನು ನೀಡಲಾಗುತ್ತಿದ್ದು, ಸದರಿ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಸೇವಾ ಸಿಂಧು ಪೋರ್ಟಲ್ (https://sevasindhuservices.karnataka.gov.in) ಅರ್ಜಿಗಳನ್ನು ಆಹ್ವಾನಿಸಿದ್ದು, ಆ.11 ರವರೆಗೆ ವಿಸ್ತರಿಸಿ ಕೊನೆಯ ದಿನಾಂಕ ನಿಗಧಿಪಡಿಸಲಾಗಿತ್ತು.

ಸದರಿ ತರಬೇತಿಗೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು ಆ.26 ರವರೆಗೆ ವಿಸ್ತರಿಸಲಾಗಿದೆ. ಅಭ್ಯರ್ಥಿಗಳು ಸೇವಾಸಿಂಧು ಪೋರ್ಟಲ್ (https://sevasindhu.karnataka.gov.in) ನಲ್ಲಿ ಸದರಿ ದಿನಾಂಕದ ವರೆಗೆ ಸಲ್ಲಿಸಲು ತಿಳಿಸಿದೆ.

ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಆಕಾಶವಾಣಿ ಹಿಂಭಾಗ, ಹಾಸನ. ದೂ.ಸಂ.: 08172-268373/ 08172-267373 ಗೆ ಅಥವಾ ಆಯಾ ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿದೆ. ಅಥವಾ ಅಲ್ಪಸಂಖ್ಯಾತರ ಸಹಾಯವಾಣಿ ಸಂಖ್ಯೆ: 82777 99990 ಇವರನ್ನು ಸಂಪರ್ಕಿಸಬಹುದು.

## ಆ.25 ರಂದು ದಿಶಾ ಸಭೆ

• ಪ್ರಜೋದಯ ವರದಿ



**ಹಾಸನ:** ಸಂಸದ ಶ್ರೇಯಸ್ ಎಂ. ಪಟೇಲ್ ಅವರ ಅಧ್ಯಕ್ಷತೆಯಲ್ಲಿ ಆ.25 ರಂದು ಬೆಳಿಗ್ಗೆ 11 ಗಂಟೆಗೆ ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿ ಪರಿಶೀಲನೆ (DISHA) ಸಭೆಯನ್ನು ಹಾಸನ ಜಿಲ್ಲಾ ಪಂಚಾಯತ್ ಹೊಯ್ಸಳ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ ಎಂದು

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

## ಮಗುವಿಗೆ ತಾಯಿಯ ಎದೆ ಹಾಲು ಅತ್ಯಂತ ಶ್ರೇಷ್ಠ

• ಪ್ರಜೋದಯ ವರದಿ

**ಹಾಸನ:** ನವಜಾತ ಶಿಶುಗಳಿಗೆ ತಾಯಿ ಎದೆ ಹಾಲು ಶ್ರೇಷ್ಠವಾದದ್ದು, ಮಗು ಹುಟ್ಟಿದ ಆರಂಭದಲ್ಲಿ ಮಗುವಿಗೆ ನಿರಂತರವಾಗಿ ಹಾಲು ನೀಡುವುದರಿಂದ ಮಕ್ಕಳ ಉತ್ತಮ ಆರೋಗ್ಯಕ್ಕೆ ಸಹಕಾರಿ ಎಂದು ವೈದ್ಯ ಡಾ.ನಿತೀನ್ ಅವರು ಹೇಳಿದರು.

ತಾಲ್ಲೂಕಿನ ಸಂತೆಕೊಪ್ಪಲು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಗುರುವಾರ ಹಮ್ಮಿಕೊಂಡಿದ್ದ ವಿಶ್ವ ಸ್ತನ್ಯಪಾನ ಸಪ್ತಾಹದಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಗರ್ಭಿಣಿ ಹಾಗೂ ಬಾಣಂತಿ ಸ್ತ್ರೀಯರಿಗೆ ಹಲವು ಯೋಜನೆಗಳನ್ನು ರೂಪಿಸಿದೆ. ಅದಕ್ಕಾಗಿ ಕೋಟ್ಯಾಂತರ ರೂ. ವೆಚ್ಚದ ಯೋಜನೆಯನ್ನು ಜಾರಿಗೆ ತಂದಿದೆ. ಸ್ತ್ರೀಯರು ಈ




ಎಲ್ಲಾ ಯೋಜನೆಯನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಸರ್ಕಾರಿ ಆಸ್ಪತ್ರೆಗಳ ಬಗ್ಗೆ ಜನ ಸಾಮಾನ್ಯರು ಹೊಂದಿರುವ ತಪ್ಪು ಕಲ್ಪನೆಯನ್ನು ಬಿಟ್ಟು, ಯಾವುದೇ ಹಿಂಜರಿಕೆ ಮನೋಭಾವ ಇಲ್ಲದೆ ಆಸ್ಪತ್ರೆಗಳಿಗೆ ಭೇಟಿ ನೀಡಬೇಕು. ಸ್ತ್ರೀಯರು ಯೋಜನೆಯ ಜೊತೆ ಜೊತೆಗೆ ನಿಗದಿತ ಸಮಯದಲ್ಲಿ ಸರಿಯಾದ ಆಹಾರ ಪದಾರ್ಥಗಳನ್ನು ಸೇವಿಸಿ ತಮ್ಮ ಆರೋಗ್ಯದ ಜೊತಗೆ ಮಕ್ಕಳ ಆರೋಗ್ಯ ಕಾಪಾಡಿಕೊಳ್ಳಬೇಕು. ಭವಿಷ್ಯದಲ್ಲಿ ಮಕ್ಕಳು ಉತ್ತಮ ಆರೋಗ್ಯ ಹೊಂದಬೇಕಾದರೆ ತಾಯಿ ಪಾತ್ರ ಮುಖ್ಯ ಎಂದರು.

ರೋಟರಿ ಜೋನ್ 9ರ ಮಾಜಿ ವಲಯ ಸೇನಾನಿ ಡಾ.ಬಿ.ವಿಕ್ರಂ ಅವರು ಮಾತನಾಡಿ, ಬದಲಾದ ಜೀವನ ಕ್ರಮದಿಂದಾಗಿ ಬಹುತೇಕ ಎಲ್ಲರೂ ಹೊಸ ನಾಗರೀಕತೆಗೆ ಹೊಂದಿಕೊಂಡಿರುವುದರಿಂದ ಪಟ್ಟಣದ ಕಡೆ ಮುಖ ಮಾಡಿದ್ದಾರೆ. ಬಹುತೇಕರು ಸರ್ಕಾರಿ ಆಸ್ಪತ್ರೆಗೆ ಬರಲು ಹಿಂಜರಿಯುತ್ತಿದ್ದು, ಖಾಸಗಿ ಆಸ್ಪತ್ರೆಗಳಲ್ಲಿ ಅಧಿಕ ಹಣ ನೀಡಿ ಅನಾವಶ್ಯಕವಾಗಿ ವ್ಯಯ ಮಾಡುತ್ತಿದ್ದಾರೆ. ಜನರು ಸರ್ಕಾರಿ ಸೌಲಭ್ಯ ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಚಿಂತನೆ ನಡೆಸಬೇಕೆಂದು ಹೇಳಿದರು.

ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ಅಧ್ಯಕ್ಷ ಬಿ.ಕೆ.ಟೈಮ್ಸ್ ಗಂಗಾಧರ್ ಅವರು ಮಾತನಾಡಿ, ಪ್ರತಿಯೊಬ್ಬ ಸ್ತ್ರೀ ಹಾಗೂ ಪುರುಷರಿಗೆ ಜೀವನದ ಅತ್ಯಂತ ಸಂತಸದ ಕ್ಷಣವೆಂದರೆ ಅದು ಅವರಿಗೆ ಮಗು ಜನಿಸಿದ ಸಂದರ್ಭ. ಮಗು ಜನಿಸುವ ವೇಳೆ ತಾನು ಅನುಭವಿಸುವ ಕಷ್ಟ ಆ ದೇವರು ನೀಡಿರುವ ದೊಡ್ಡ ಶಕ್ತಿ. ಪ್ರತಿಯೊಬ್ಬ ತಾಯಿಯು ತನಗೆ ದೊಡ್ಡ ವ್ಯಕ್ತಿಯೆ ಜನಿ ಸುತ್ತಾನೆಂಬ ಮನೋಭಾವ ಹೊಂದಬೇಕು. ದೊಡ್ಡ ದೊಡ್ಡ ವ್ಯಕ್ತಿಗಳು ಹುಟ್ಟಿರುವುದು ಸಣ್ಣ ಗ್ರಾಮಗಳಿಂದಲೇ. ಪೋಷಕರು ತಮ್ಮ ಮಕ್ಕಳನ್ನು ಸಮಾಜಕ್ಕೆ ದೊಡ್ಡ ಆಸ್ತಿಗಳನ್ನಾಗಿ ಮಾಡಬೇಕೆಂದರು.

ಭೂಮಿಗೆ ಒಂದು ಹೊಸ ಜೀವವನ್ನು ನೀಡುವ ತಾಯಿಗೆ ಅತ್ಯಂತ ಶ್ರೇಷ್ಠವಾದ ಸ್ಥಾನವಿದೆ. ತಾಯ್ತನದ ಅವಧಿಯಲ್ಲಿ ಸ್ತ್ರೀಯರು ಬಹಳ ಜಾಗರೂಕತೆಯಿಂದ ಇರಬೇಕಾದುದು ಅತ್ಯವಶ್ಯಕ. ಎಂದರು.

ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ಕಾರ್ಯದರ್ಶಿ ಪಿ.ರವಿಕುಮಾರ್, ದಿಲೀಪ್‌ಕುಮಾರ್, ಡಾ. ಹರೀಶ್, ಮಮತ, ಲಲಿತ, ಶುಭಲಕ್ಷ್ಮೀ, ಸುನೀಲ್ ಹಾಜರಿದ್ದರು.

## ಧರ್ಮಸ್ಥಳಕ್ಕೆ ಕಳಂಕ ತರುವವರ ವಿರುದ್ಧ ಇಂದು ಪ್ರತಿಭಟನೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಜನರ ಆರಾಧ್ಯ ದೈವ ಶ್ರೀ ಮಂಜುನಾಥಸ್ವಾಮಿ ನೆಲೆಸಿರುವ ಧರ್ಮಸ್ಥಳದ ಬಗ್ಗೆ ಹಾಗೂ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿಗಳನ್ನು ಹರಿಬಿಡುತ್ತಿರುವವರ ವಿರುದ್ಧ ಸೂಕ್ತ ಕಾನೂನು ಕ್ರಮಕ್ಕೆ ಆಗ್ರಹಿಸಿ ಶನಿವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಲಾಗುವುದೆಂದು ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಹಡೇನಹಳ್ಳಿ ಲೋಕೇಶ್ ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಶ್ವದಾದ್ಯಂತ ಭಕ್ತರನ್ನು ಹೊಂದಿರುವ ಧರ್ಮಸ್ಥಳಕ್ಕೆ ಅದರದ್ದೇ ಆದ ಪಾವಿತ್ರ್ಯತೆ ಇದೆ. ಕೆಲವರಿಂದ ಕ್ಷೇತ್ರದ ಬಗ್ಗೆ ನಡೆಯುತ್ತಿರುವ ಅಪಪ್ರಚಾರ ಅಸಂಖ್ಯಾತ ಭಕ್ತರನ್ನು ಕೆರಳಿಸಿದೆ. ಈಗಾಗಲೇ ಎಸ್‌ಐಟಿ



ತನಿಖೆ ಕೈಗೊಂಡಿದೆ. ವೀರೇಂದ್ರ ಹೆಗ್ಗಡೆ ತನಿಖೆಗೆ ಸ್ವಾಗತಿಸಿದ್ದಾರೆ. ಹೀಗಿದ್ದರೂ ಯುಟ್ಯೂಬ್ ಸೇರಿ ಇತರೆ ಜಾಲತಾಣಗಳಲ್ಲಿ ಭಕ್ತರ ನಂಬಿಕೆಗೆ ಧಕ್ಕೆ ತರುವ ಕೆಲಸ ವಾಗುತ್ತಿದೆ ಎಂದರು.

ಕೆಲ ಕಿಡಿಗೇಡಿಗಳು ಧರ್ಮಸ್ಥಳದ ಬಗ್ಗೆ ಇಲ್ಲಸಲ್ಲದ ಅಪಪ್ರಚಾರ ಮಾಡುತ್ತಿದ್ದಾರೆ. ಸರ್ಕಾರಗಳು ಮಾಡದ ಅಭಿವೃದ್ಧಿ ಕೆಲಸಗಳನ್ನು ಧರ್ಮಸ್ಥಳದ ಧರ್ಮದರ್ಶಿ ವೀರೇಂದ್ರ ಹೆಗ್ಗಡೆಯವರು ಮಾಡುತ್ತಾ ಬಂದಿದ್ದಾರೆ. ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಸಾಲಸೌಲಭ್ಯ, ಗ್ರಾಮೀಣ ಪ್ರದೇಶಗಳಲ್ಲಿ ಆಸ್ಪತ್ರೆಗಳು, ದೇವಸ್ಥಾನಗಳ ಜೀರ್ಣೋದ್ಧಾರ ಸೇರಿ ಅನೇಕ ಅಭಿವೃದ್ಧಿಗಳನ್ನು ಮಾಡಿದ್ದು, ಯಾರೋ ಒಬ್ಬ ಅನಾಮಿಕ ತಾನು ನೂರಾರು ಶವಗಳನ್ನು ಹೂತು ಹಾಕಿದ್ದೇನೆಂದು ಹೇಳಿದ್ದನ್ನೇ ನಂಬಿ ಸರ್ಕಾರ ಶೋಧ ನಡೆಸುತ್ತಿದೆ. ಎಸ್‌ಐಟಿ ತನಿಖಾ ತಂಡ ರಚಿಸಿರುವುದು ಒಳ್ಳೆಯ ಬೆಳವಣಿಗೆಯಾಗಿದೆ. ಅನಾಮಿಕ ವ್ಯಕ್ತಿ ತೋರಿಸಿದ 16 ಸ್ಥಳಗಳಲ್ಲೂ ಯಾವುದೇ ಶವಗಳ ಅಸ್ಥಿಪಂಜರವಾಗಲಿ ಸಿಕ್ಕಿಲ್ಲ. ಇದು ಅನ್ಯಧರ್ಮಿಯರು ಹಿಂದೂ ಧರ್ಮದ ಮೇಲೆ ಹೂಡಿರುವ ಕುತಂತ್ರವಾಗಿದ್ದು, ಹಿಂದೂ ಧರ್ಮದ ವಿರುದ್ಧ ಅಪಪ್ರಚಾರ ಮಾಡಲೆಂದೇ ಅನಾಮಿಕ ವ್ಯಕ್ತಿಯನ್ನು ಸೃಷ್ಟಿಸಲಾಗಿದೆ. ಅನಾಮಿಕ ಮುಸುಕುಧಾರಿ ವ್ಯಕ್ತಿಯನ್ನು ಮೊದಲು ತನಿಖೆಗೊಳಪಡಿಸಿ ಸತ್ಯಾಸತ್ಯತೆ ತಿಳಿಯಬೇಕು. ಮುಂದಿನ ದಿನಗಳಲ್ಲಿ ಈ ರೀತಿಯ ಸುಳ್ಳು ಸುದ್ದಿಗಳು ಸಮೂಹ ಮಾಧ್ಯಮಗಳಲ್ಲಿ ಪ್ರಸಾರವಾಗದಂತೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಕತ್ತರಿಘಟ್ಟದ ಮೇಳೆಯಮ್ಮ ಆಧ್ಯಾತ್ಮಿಕ ಕೇಂದ್ರದ ಶ್ರೀ ಚಂದ್ರಶೇಖರ ಗುರೂಜಿ ಶ್ರೀ ಪುರವರ್ಗ ಹಿರೇಮಠದ ಶ್ರೀ ಮಹೇಶ್ವರ ಸ್ವಾಮೀಜಿ, ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ಸಿ.ಎನ್.ಅಶೋಕ್, ಕೆಂಪೇಗೌಡ ವೇದಿಕೆ ಸಂಸ್ಥಾಪಕ ಅಧ್ಯಕ್ಷ ಆನಂದ್ ಕಾಳೇನಹಳ್ಳಿ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಂಬಿಹಳ್ಳಿ ಗಿರೀಶ್, ನಾಗೇಶ್ ಹಿರಿಬಿಳ್ಳಿ, ಮುಖಂಡರಾದ ಸಿ.ಪಿ.ಕುಮಾರ್, ಗೋಪಿ, ಯಶೋದ ಜೈನ್ ಇದ್ದರು.

## ನಾಳೆ ಪ್ರಾಣಿವಧೆ ಮಾಂಸ ಮಾರಾಟ ನಿಷೇಧ

• ಪ್ರಜೋದಯ ವರದಿ

**ಹಾಸನ:** ಹಾಸನದ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆ.16 ರಂದು ಶ್ರೀಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಪ್ರಾಣಿವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿರುತ್ತದೆ. ಆದ್ದರಿಂದ ಮೇಲ್ಕಂಡ ದಿನದಂದು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಾಣಿವಧೆ ಮತ್ತು ಎಲ್ಲಾ ರೀತಿಯ ಮಾಂಸ ಮಾರಾಟವನ್ನು ನಿಷೇಧಿಸಲಾಗಿರುತ್ತದೆ.

ಸದರಿ ಆದೇಶವನ್ನು ಉಲ್ಲಂಘಿಸಿ, ಪ್ರಾಣಿವಧೆ ಹಾಗೂ ಮಾಂಸ ಮಾರಾಟ ಮಾಡುವುದು ಕಂಡುಬಂದಲ್ಲಿ, ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದುಶ್ಚಟದಿಂದ ಜನರು ದೂರವುಳಿದರೆ ಆರೋಗ್ಯವಂತ ಸಮಾಜ




• ಪ್ರಜೋದಯ ವರದಿ

**ಹೊಳೆನರಸೀಪುರ:** ಜೀವನವನ್ನು ಪ್ರೀತಿಸುವ ಮೂಲಕ ದುಶ್ಚಟದಿಂದ ಜನರು ದೂರ ಉಳಿದಾಗ ಮಾತ್ರ ಆರೋಗ್ಯ ವಂತ ಸಮಾಜ ನಿರ್ಮಾಣ ಸಾಧ್ಯ ಎಂದು ಸರ್ಕಾರಿ ನರ್ಸಿಂಗ್ ಕಾಲೇಜು ಪ್ರಾಂಶುಪಾಲ ಚಂದ್ರಶೇಖರ್ ಹಡಪದ ಅವರು ತಿಳಿಸಿದರು.

ಪಟ್ಟಣದಲ್ಲಿ ಸರ್ಕಾರಿ ಶುಶ್ರೂಷ ಮಹಾವಿದ್ಯಾಲಯ ವಿದ್ಯಾರ್ಥಿಗಳು ನಡೆಸಿದ ನಶೆ ಮುಕ್ತ ಭಾರತ ಜಾಗೃತಿ ಜಾಥಾ ನಡೆಸಿದ ಸಂದರ್ಭ ಮಾತನಾಡಿದ ಅವರು, ದೇಶದ ಪ್ರಗತಿಗೆ ಸಮುದಾಯ ಆರೋಗ್ಯ ಬಹು ಮುಖ್ಯವಾಗಿರುತ್ತದೆ. ಬಹುತೇಕ ಜನರು ಒಂದಲ್ಲೊಂದು ದುಶ್ಚಟಗಳಿಗೆ ದಾಸರಾಗಿರುತ್ತಾರೆ. ಅದರಿಂದ ಕಾಯಿಲೆಗಳಿಗೆ ಆಸ್ಪದವಾಗುತ್ತದೆ. ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಂಡಲ್ಲಿ ಸುಖಮಯವಾದ ಜೀವನ ನಿಮ್ಮದಾಗಲಿದೆ ಎಂದು ಅರಿವು ಮೂಡಿಸಿದರು.

ಪಟ್ಟಣದ ಪ್ರಮುಖ ಬೀದಿಗಳಲ್ಲಿ ನಶೆಯಿಂದ ದೂರ ಉಳಿಯುವಂತೆ ಜಾಗೃತಿ ಫಲಕ ಹಿಡಿದು ವಿದ್ಯಾರ್ಥಿನಿಯರು ಜಾಥಾ ನಡೆಸಿದರು.

ಎಎಸ್ಪಿ ಶಾಲೂ, ಉಪನ್ಯಾಸಕಿ ಶೈಲ ಇತರರು ಹಾಜರಿದ್ದರು.

## ಸುಂದರ ಭವಿಷ್ಯಕ್ಕೆ ಪರಿಸರ ಸಂರಕ್ಷಿಸಿ



• ಪ್ರಜೋದಯ ವರದಿ

**ಹಾಸನ:** ಭವಿಷ್ಯದ ಪೀಳಿಗೆಗೆ ಉತ್ತಮ ಪರಿಸರ ನೀಡ ಬೇಕೆಂದರೆ ಸಾಕಷ್ಟು ಗಿಡಗಳನ್ನು ಬೆಳೆಸಬೇಕೆಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲ್ಲೂಕು ಘಟಕದ ಅಧ್ಯಕ್ಷೆ ಮಮತಾ ಪಾಟೀಲ್ ಅವರು ಹೇಳಿದರು.

ನಗರದ ವಿಜಯನಗರ ಬಡಾವಣೆಯ ಪುಷ್ಪಗಿರಿ ಸಂಸ್ಥಾನದ ಬಸವರಾಜೇಂದ್ರ ಆಂಗ್ಲ ಮಾಧ್ಯಮ ಶಾಲೆಯ ಆವರಣದಲ್ಲಿ ವಿವಿಧ ಬಗೆಯ ಹಣ್ಣಿನ ಗಿಡಗಳನ್ನು ನೆಡುವ ಕಾರ್ಯಕ್ರಮದಲ್ಲಿ ಮಾತನಾಡಿ, ಸಂಘ ಸಂಸ್ಥೆಗಳು ಪರಿಸರಕ್ಕೆ ಆದ್ಯತೆ ನೀಡಬೇಕು. ಮಾನವನ ಹಸ್ತಕ್ಷೇಪದಿಂದ ನೈಸರ್ಗಿಕ ಸಂಪನ್ಮೂಲ ಹಾಳಾಗುತ್ತಿದೆ. ಈ ಬಗ್ಗೆ ನಾಗರಿಕರು ಎಚ್ಚೆತ್ತುಕೊಳ್ಳಬೇಕೆಂದರು.

ಶಾಲೆಯ ಕಾರ್ಯದರ್ಶಿ ರಾಜಶೇಖರ್ ಅಧ್ಯಕ್ಷತೆ ವಹಿಸಿದ್ದರು. ಘಟಕದ ಕಾರ್ಯದರ್ಶಿ ಧನಲಕ್ಷ್ಮೀ ಲೋಕೇಶ್, ಸಹ ಕಾರ್ಯದರ್ಶಿ ಇಂದಿರಾ ಸತೀಶ್, ನಿರ್ದೇಶಕಿ ಭಾಮಿನಿ, ಮುಖ್ಯ ಶಿಕ್ಷಕ ಶೃತಿ, ಬಾಲಚಂದ್ರ, ಜಯಪ್ರಕಾಶ್ ಹಾಜರಿದ್ದರು.

## ಆ.16 ರಂದು ಜನಸ್ಪಂದನ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯ ಎಲ್ಲಾ ರೈತಾಪಿ ವರ್ಗದವರಿಗೆ, ಸಾರ್ವಜನಿಕರಿಗೆ ಹಾಗೂ ಗ್ರಾಮೀಣ ಜನತೆಗೆ ಸಾಮಾಜಿಕ, ಶೈಕ್ಷಣಿಕ, ವಾಣಿಜ್ಯ ಹಾಗೂ ಕೃಷಿ ಚಟುವಟಿಕೆಗಳಿಗೆ ವಿವಿಧ ಇಲಾಖೆಗಳಲ್ಲಿ ದೊರೆಯಬೇಕಾದ ಸೌಲಭ್ಯಗಳು ನಿಗಧಿತ ಅವಧಿಯೊಳಗೆ ದೊರೆಯದೆ ಇದ್ದಾಗ ರೈತರು ತಮ್ಮ ಅಹವಾಲನ್ನು ದಾಖಲಿಸಲು ಸರ್ಕಾರವು ಏಕೀಕೃತ ಸಾರ್ವಜನಿಕ ದೂರು ನಿವಾರಣಾ ತಂತ್ರಾಂಶ (Integrated Public Grievance Redressal System) ಸಾರ್ವಜನಿಕರು ನೇರವಾಗಿ ತಮ್ಮ ಅಹವಾಲುಗಳನ್ನು ದಾಖಲಿಸಲು ಜಿಲ್ಲಾ ಮಟ್ಟದಲ್ಲಿ ಆ.16 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಜನಸ್ಪಂದನಾ ಕಾರ್ಯಕ್ರವನ್ನು ಆಯೋಜಿಸಲಾಗಿದೆ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬಹುದು.

## ಬಿಜೆಪಿಯಿಂದ ಹರ್ ಘರ್ ತಿರಂಗ ಅಭಿಯಾನ

• ಪ್ರಜೋದಯ ವರದಿ

**ಸಕಲೇಶಪುರ:** 78ನೇ ಸ್ವಾತಂತ್ರ್ಯ ಮಹೋತ್ಸವ ಅಂಗವಾಗಿ ತಾಲ್ಲೂಕು ಬಿಜೆಪಿ ವತಿಯಿಂದ ಹರ್ ಘರ್ ತಿರಂಗಾ ಅಭಿಯಾನ ಅಂಗವಾಗಿ ಗುರುವಾರ ತಾಲ್ಲೂಕು ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ನಿಖಿಲ್ ಹಲಸುಲಿಗೆ ನೇತೃತ್ವದಲ್ಲಿ ಬೃಹತ್ ಬೈಕ್ ರ್‍ಯಾಲಿ ನಡೆಸಲಾಯಿತು.

ನಂತರ ಮಾತನಾಡಿದ ಅವರು ದೇಶವನ್ನು 70 ವರ್ಷಗಳ ಕಾಲ ಆಳ್ವಿಕೆ ಮಾಡಿದ್ದ ಕಾಂಗ್ರೆಸ್ಸಿಗರು ಕಾಶ್ಮೀರಕ್ಕೆ ಪ್ರತ್ಯೇಕ ಕಾನೂನು ಮಾಡಿ ಭಾರತವನ್ನು ವಿಭಜಿಸಿದ್ದರು. ನರೇಂದ್ರ ಮೋದಿ ಪ್ರಧಾನಿಯಾದ ಮೇಲೆ ಕಾಶ್ಮೀರಕ್ಕೆ ನೀಡಿದ್ದ ವಿಶೇಷ ಸ್ಥಾನಮಾನ ತೆರವುಗೊಳಿಸಿ ಕಾಶ್ಮೀರದಿಂದ ಕನ್ಯಾಕುಮಾರಿ ವರೆಗೆ ಭಾರತವನ್ನು ಒಗ್ಗೂಡಿಸಿದರು ಎಂದರು.

ಬೌದಿಕ್ ಮಧು ಬೊಮ್ಮನಕೆರೆ



ಮಾತನಾಡಿ, ಭಾರತೀಯ ಸೇನೆ ಆಪರೇಷನ್ ಸಿಂಧೂರ ಮತ್ತು ಮಹದೇವ್ ಕಾರ್ಯಾಚರಣೆಯಲ್ಲಿ ಯಶಸ್ವಿಯಾದ ಕಾರಣ ಬಿಜೆಪಿಯಿಂದ ಬೈಕ್ ರ್‍ಯಾಲಿ ಹಾಗೂ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಯುವಕರು ದೇಶಾಭಿಮಾನ ಬೆಳೆಸಿಕೊಳ್ಳುವ ಅಗತ್ಯವಿದೆ. ದೇಶದ ಸುರಕ್ಷತೆಗೆ ನಮ್ಮ ಇಡೀ ಸೈನ್ಯ ತಮ್ಮ ಕುಟುಂಬ ತೊರೆದು ಗಡಿಯಲ್ಲಿ ಶತೃಗಳೊಂದಿಗೆ ನಿರಂತರ ಹೋರಾಡುತ್ತಾ ಪ್ರಾಣ ಕಳೆದುಕೊಳ್ಳುತ್ತಾರೆ. ಆದರೆ ದೇಶದೊಳಗಿನ ಕೆಲ ರಾಜಕೀಯ ವ್ಯಕ್ತಿಗಳು ಭಾರತೀಯ ಸೈನ್ಯ ಮತ್ತು ಸೈನಿಕರಿಗೆ ಅಪಮಾನಗೊಳಿಸುವ ಮಾತನ್ನಾಡುತ್ತಾರೆ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ಬಿಜೆಪಿ ತಾಲ್ಲೂಕು ಮಹಿಳಾ ಮೋರ್ಚಾ ಅಧ್ಯಕ್ಷೆ ಬಬಿತ ವಿಶ್ವನಾಥ್ ಮಾತನಾಡಿ, ಪಕ್ಷದ ಸೂಚನೆಯಂತೆ ದೇಶಕ್ಕಾಗಿ ಹೋರಾಡಿ ವೀರ ಮರಣ ಹೊಂದಿದ ಯೋಧರ ಸ್ಮಾರಕಗಳ ಸ್ವಚ್ಛತಾ ಕಾರ್ಯ ನಡೆಸಿದ್ದೇವೆ. ದೇಶ ಸೇವೆ ಮಾಡಿದ ಯೋಧನರನ್ನು ನೆನಪು ಮಾಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ ಎಂದು ಹೇಳಿದರು.

ಈ ಸಂಧರ್ಭದಲ್ಲಿ ತಾಲ್ಲೂಕು ಬಿಜೆಪಿ ಅಧ್ಯಕ್ಷ ವಳಲಹಳ್ಳಿ ಅಶ್ವಥ್, ಉಪಾಧ್ಯಕ್ಷ ಜೈ ಪ್ರಕಾಶ್, ಶಾಸಕ ಸಿಮೆಂಟ್ ಮಂಜು ಧರ್ಮಪತ್ನಿ ಪ್ರತಿಭಾ ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಅಗ್ನಿ ಸೋಮಶೇಖರ್, ನಗರ ಘಟಕದ ಅಧ್ಯಕ್ಷ ಲೋಕೇಶ್ (ದಿಂಬು), ಬಿಜೆಪಿ ಅಲ್ಪ ಸಂಖ್ಯಾತ ಘಟಕದ ಆನಂದ್ ಲಿಯೋ, ಪರಿಶಿಷ್ಟ ಜಾತಿ / ಪಂಗಡದ ಸ್ಟಿವನ್ ಪ್ರಕಾಶ್ ಸೇರಿದಂತೆ ಬಿಜೆಪಿ ಮಂಡಲ ಪದಾಧಿಕಾರಿಗಳು, ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು.

## ಶನಿದೇವರ ಉತ್ಸವ

**ಚನ್ನರಾಯಪಟ್ಟಣ:** ಗಾಣಿಗರ ಬೀದಿಯಲ್ಲಿರುವ ಶ್ರೀ ಶನಿದೇವರ ದೇವಸ್ಥಾನದಲ್ಲಿ ಶ್ರಾವಣ ಶನಿವಾರದ ಪ್ರಯುಕ್ತ ಶನಿವಾರ ಸ್ವಾಮಿಯವರ ವೈಭವದ ಉತ್ಸವ ನಡೆಯಲಿದೆ ಎಂದು ಶ್ರೀ ಶನಿದೇವರ ದೇವಸ್ಥಾನ ಮತ್ತು ಕಲ್ಯಾಣ ಮಂಟಪ ಸೇವಾ ಸಮಿತಿ ಟ್ರಸ್ಟ್‌ನ ಅಧ್ಯಕ್ಷ ಸಿ.ಬಿ. ಸುಬ್ರಹ್ಮಣ್ಯ ಅವರು ತಿಳಿಸಿದ್ದಾರೆ.

ಉತ್ಸವವು ದೇವಸ್ಥಾನದ ಸನ್ನಿಧಿಯಿಂದ ಬೆಳಿಗ್ಗೆ 8.30ಕ್ಕೆ ಆರಂಭವಾಗಲಿದೆ. ಉತ್ಸವ ಮೂರ್ತಿಯನ್ನು ಸುವರ್ಣ ರಥದಲ್ಲಿ ಕೂರಿಸಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಗುತ್ತದೆ. ಭಾನುವಾರ ದೇವಸ್ಥಾನದ ಆವರಣದಲ್ಲಿ ಭಕ್ತಾಧಿಗಳಿಗೆ ಮಹಾ ಅನ್ನದಾನ ಏರ್ಪಡಿಸಲಾಗಿದೆ. ಭಕ್ತಾ ಧಿಗಳು ಆಗಮಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕಾಗಿ ಮನವಿ ಮಾಡಿದ್ದಾರೆ.

ಗೌರವಾಧ್ಯಕ್ಷ ಮೂರ್ತಿ, ಪರಮೇಶ್, ಸಿ.ಆರ್.ರಾಘವೇಂದ್ರ ಇತರರಿದ್ದರು.

**ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 110ನೇ ಜಯಂತಿ ಮಹೋತ್ಸವ**

## ವಚನಗಳು ಸಾಮಾಜಿಕ ಅಸಮಾನತೆ ತೊಡೆಯಲು ಸಹಕಾರಿ

• ಪ್ರಜೋದಯ ವರದಿ

**ಹೊಳೆನರಸೀಪುರ:** ವಚನಗಳು ಸಾಮಾಜಿಕ ಮತ್ತು ಧಾರ್ಮಿಕ ಅಸಮಾನತೆಯನ್ನು ತೊಡೆದು ಹಾಕಲು ಸಹಕಾರಿಯಾಗಿವೆ. ಮಹಾನ್ ಕ್ರಾಂತಿಕಾರಿ ಬಸವಣ್ಣನವರ ವಚನಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಂಡಾಗ ಮಾತ್ರ ನಾವು ಅವರಿಗೆ ನಮನ ಸಲ್ಲಿಸಿದಂತಾಗುತ್ತದೆ ಎಂದು ಟಿ. ಮಾಯಿಗೌಡನಹಳ್ಳಿ ಮಠದ ಶ್ರೀ ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ ಆಶೀರ್ವಚನ ನೀಡಿದರು.

ತಾಲ್ಲೂಕಿನ ದೊಡ್ಡಕಾಡನೂರು ಗ್ರಾಮದ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಪರಮ ಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 110ನೆಯ ಜಯಂತಿ ಮಹೋತ್ಸವ ಪ್ರಯುಕ್ತ ನಡೆದ ದತ್ತಿ ಉಪನ್ಯಾಸ ಹಾಗೂ ವಚನ ಕಂಠ ಪಾಠ ಮಾಡಿದ ವಿದ್ಯಾರ್ಥಿಗಳಿಗೆ ವಚನ ಪುಸ್ತಕಗಳನ್ನು ವಿತರಣೆ ಕಾರ್ಯಕ್ರಮದಲಿ ಆಶೀರ್ವಚನ ನೀಡಿ, ವಚನಗಳಲ್ಲಿ ಇರುವ ಒಳಾರ್ಥವನ್ನು ಪ್ರತಿಯೊಬ್ಬ ವಿದ್ಯಾರ್ಥಿಯು ಅರ್ಥಮಾಡಿಕೊಳ್ಳಬೇಕು. ಆಗ ವಚನಗಳು ಒಳ್ಳೆಯ ಮಾರ್ಗದಲ್ಲಿ ನಡೆಯುವಂತೆ ಮಾಡುತ್ತವೆ ಎಂದು ತಿಳಿಸಿದರು.

ನಿವೃತ್ತ ಪ್ರಾಂಶುಪಾಲ ಎಚ್.ಎಸ್. ಪ್ರಭುಶಂಕರ್ ಮಾತನಾಡಿ, ಜ್ಞಾನಕ್ಕೆ ಬೆಲೆಯಿದೆ. ಆದ್ದರಿಂದ ವಿದ್ಯರ್ಥಿಗಳು ಆಸಕ್ತಿಯಿಂದ ಓದಿ ಜ್ಞಾನ ಸಂಪಾದನೆ ಮಾಡಬೇಕು. ಡಾ. ಬಿ ಆರ್ ಅಂಬೇಡ್ಕರ್ ಅವರು ಜ್ಞಾನ ಸಾಗರ ಆಗಿದ್ದರು. ಆದ್ದರಿಂದಲೇ ಅವರು ಪ್ರತಿಯೊಬ್ಬರೂ ಶಿಕ್ಷಣ ಪಡೆದುಕೊಳ್ಳಬೇಕು. ಆಗ ಎಲ್ಲರೂ ಒಗ್ಗಟ್ಟಾಗುತ್ತೇವೆ. ಒಗ್ಗಟ್ಟಿನಿಂದ ಹೋರಾಟ ಮಾಡಿದರೆ ಮಾತ್ರ ನಾವು ಸಂವಿಧಾನ ಬದ್ಧ ಹಕ್ಕುಗಳನ್ನು ಪಡೆದುಕೊಳ್ಳಲು ಸಾಧ್ಯ ಎಂದು ತಿಳಿಸಿದ್ದಾರೆ. ಬೇರೆಯವರನ್ನು ನೋಡಿ ನಾವು ಓದ



ಬಾರದು, ನಮ್ಮ ಉದ್ದಾರಕ್ಕೆ ನಾವು ಓದಬೇಕು. ವಿದ್ಯಾರ್ಥಿಗಳು ಸಣ್ಣ ಸಣ್ಣ ವಿಷಯಕ್ಕೂ ಬೇಸರ, ಕೋಪ ಮಾಡಿಕೊಳ್ಳಬಾರದು. ಕೋಪ ಅತ್ಯಂತ ಕೆಟ್ಟದು. ಸರಳವಾಗಿರುವ ಶರಣರ ವಚನಗಳನ್ನು ಓದಿ ಅರ್ಥ ಮಾಡಿಕೊಂಡರೆ ಉತ್ತಮ ಜೀವನ ರೂಪಿಸಿಕೊಳ್ಳಬಹುದು ಎಂದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಕಟ್ಟಾಯ ಶಿವಕುಮಾರ್ ಮಾತನಾಡಿ, ವಚನ ಸಾಹಿತ್ಯದ ಬಗ್ಗೆ ಜನಸಾಮಾನ್ಯರಲ್ಲಿ ಜಾಗೃತಿ ಉಂಟು ಮಾಡಲು ಸುತ್ತೂರು ಮಠದ ಲಿಂಗೈಂಕ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು 1986 ರಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತನ್ನು ಸ್ಥಾಪಿಸಿದ್ದಾರೆ. ಇಂದಿನ ಸಾಮಾಜದಲ್ಲಿ ಪ್ರತಿಯೊಬ್ಬರು ವಚನಗಳನ್ನು ದೈನಂದಿನ ಬದುಕಿನಲ್ಲಿ ಅಳವಡಿಕೊಳ್ಳಬೇಕು. ವಿದ್ಯಾರ್ಥಿಗಳು ಇವತ್ತು ಪರಿಶ್ರಮಪಟ್ಟು ಓದಿದರೆ, ಮುಂದಿನ ದಿನಗಳಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬಹುದು. ಪ್ರತಿಯೊಬ್ಬರೂ ಒಂದೊಂದು ಗುರಿ ಹೊಂದಿರಬೇಕು. ಗುರಿಯನ್ನು ತಲುಪಬೇಕಾದರೆ, ಪ್ರತಿಯೊಬ್ಬರೂ ತಮ್ಮದೇ ಆದ ಕನಸು ಕಾಣಬೇಕು ಎಂದು ತಿಳಿಸಿದರು.

ತಾಲ್ಲೂಕು ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಹಾಗೂ ಹರಿಕಥೆ ವಿದ್ವಾನ್ ಕಾವ್ಯಶ್ರೀಕೃಷ್ಣ ಮಾತನಾಡಿ, ಮಕ್ಕಳಲ್ಲಿ ಕಳ್ಳತನ, ಸುಳ್ಳು, ಕೊಲೆ ಸುಲಿಗೆ ಕಡಿಮೆಯಾಗಬೇಕೆಂದರೆ, ಶರಣರ ವಚನಗಳನ್ನು ಕಲಿಯಬೇಕು ಮತ್ತು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಹಾಸನ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಂ.ಎನ್. ಕುಮಾರಸ್ವಾಮಿ, ತಾಲ್ಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಪ್ರಸಾದ್, ಕಾಲೇಜಿನ ಪ್ರಾಂಶುಪಾಲ ಡಾ. ಚೌಡಯ್ಯ ಕಟ್ನವಾಡಿ, ಪ್ರೌಢಶಾಲಾ ಮುಖ್ಯ ಶಿಕ್ಷಕ ಪಿ.ಸುರೇಶ್, ಕಾರ್ಯದರ್ಶಿ ರಾಮನಾಥಪುರ ಆರ್.ಕೆ. ಶ್ರೀನಿವಾಸ್, ನಿವೃತ್ತ ಶಿಕ್ಷಕರು ಶಂಕರಪ್ಪ ಇನ್ನಿತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

## ಕನಸು ನನಸಾಗಲು ನಿರಂತರ ಶ್ರಮವಿರಲಿ: ನಟ ಮನು

• ಪ್ರಜೋದಯ ವರದಿ

**ಹಾಸನ:** ನಮ್ಮ ಶಕ್ತಿ, ಉತ್ಸಾಹ, ಹೊಸ ಕಲ್ಪನೆ ಮತ್ತು ದೃಢ ಸಂಕಲ್ಪ ಭವಿಷ್ಯ ರೂಪಿಸುತ್ತದೆ. ಕನಸುಗಳು ಕೇವಲ ಕನಸುಗಳಾಗಿಯೇ ಉಳಿಯದೆ ಗುರಿಯಾಗಿ ನಂತರ ಸಾಧನೆಯಾಗಿ ಮಾರ್ಪಾಡಾಗಬೇಕೆಂದು ನಟ, ನಿರ್ದೇಶಕ ಯು.ಬಿ.ಮನು ಅವರು ಹೇಳಿದರು.

ನಗರದ ರಾಜೀವ್ ಪಾಲಿಟೆಕ್ನಿಕ್‌ನಲ್ಲಿ ಬುಧವಾರ ನಡೆದ ಅಂತರ ರಾಷ್ಟ್ರೀಯ ಯುವ ದಿನಾಚರಣೆಯಲ್ಲಿ ಮಾತನಾಡಿ, ರಾಷ್ಟ್ರದ ಭವಿಷ್ಯ ರೂಪಿಸುವ ಗುರುತರ ಜವಾಬ್ದಾರಿ ಜನರ ಕೈಯಲ್ಲಿರುತ್ತದೆ. ಎಂತಹ ವ್ಯಕ್ತಿಯನ್ನು ಚುನಾವಣೆಯಲ್ಲಿ ಗೆಲ್ಲಿಸಬೇಕೆಂಬ ಸಾಮಾನ್ಯ ಜ್ಞಾನ ನಮಗಿರಬೇಕೆಂದರು. ಯುವಕರು ಮತದಾನದ ಹಕ್ಕನ್ನು ಹೊಣೆಗಾರಿಕೆಯಿಂದ ಉಪಯೋಗಿ ಸಿದರೆ ಸ್ವಚ್ಛ, ಜವಾಬ್ದಾರಿಯುತ ಮತ್ತು ಅಭಿವೃದ್ಧಿಯತ್ತ ಕೊಂಡೊಯ್ಯುವ ಆಡಳಿತವನ್ನು ತಂದು ಕೊಡಬಹುದೆಂದು ಹೇಳಿದರು.

ಪ್ರಾಂಶುಪಾಲ ಡಾ.ಎಂ.ಆರ್. ಶಂಕರೇಗೌಡ ಮಾತನಾಡಿ, ಸುಸ್ಥಿರ ಅಭಿವೃದ್ಧಿಗೆ ಯುವಕರ ಪಾತ್ರ ಮತ್ತು



ಅದಕ್ಕೂ ಮೀರಿದ ಪ್ರಯತ್ನಗಳು ಎಂಬುದು 2025ರ ಅಂತರ ರಾಷ್ಟ್ರೀಯ ಯುವ ದಿನದ ಉದ್ಘೋಷ. ನಾವು ಜೀವನದಲ್ಲಿ ಸಾಧಿಸಬೇಕಾದರೆ ಆರೋಗ್ಯವಂತರಾ ಗಿರುವುದು ಬಹಳ ಮುಖ್ಯ. ಸಾಧಿಸುವ ಛಲವಿರುವವರು ದೈಹಿಕವಾಗಿ ಸದೃಢರಾಗಿರಬೇಕು. ನಾವು ಕಾಣುವ ಕನಸು ನಿದ್ದೆ ಬಾರದಿರುವ ತರಹ ಇರಬೇಕು. ಆ ಕನಸು ನಮ್ಮನ್ನು ರಾತ್ರಿ- ಹಗಲು ಚಿಂತನೆ, ಶ್ರಮ, ಪ್ರಯತ್ನಗಳಿಂದಲೇ ಬದುಕುವಂತೆ ಮಾಡಬೇಕು. ಅದನ್ನು ಸಾಧಿಸುವವರೆಗೆ ವಿಶ್ರಾಂತಿ ಮಾಡಬಾರದು. ಇಂತಹ ಕನಸುಗಳೇ ಜೀವನದ ಮಾರ್ಗ ಬದಲಾಯಿಸಿ ಯಶಸ್ಸಿನತ್ತ ಕರೆದೊಯ್ಯುತ್ತವೆ ಎಂದರು.

ಅಂತರರಾಷ್ಟ್ರೀಯ ಯುವ ದಿನಾಚರಣೆಯ ಅಂಗವಾಗಿ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ವಿವಿಧ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಕಾಲೇಜು ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ಅಧಿಕಾರಿ ಗಂಗರಾಜು ಇದ್ದರು.

# ಕಾಡಾನೆ ಕಂಡು ಗುಂಡಿಗೆ ಬಿದ್ದ ಕಾರು



• ಪ್ರಜೋದಯ ವರದಿ

**ಅರೇಹಳ್ಳಿ:** ಕಾಡಾನೆ ದಾಳಿಯಿಂದ ತಪ್ಪಿಸಿಕೊಳ್ಳಲು ಹೋಗಿ ಕಾರು ರಸ್ತೆ ಬದಿಯ ಗುಂಡಿಗೆ ಬಿದ್ದು, ಕಾರಿನಲ್ಲಿದ್ದ ಚಾಲಕ ಹಾಗು ತಾಯಿ, ಮಗು ಪ್ರಾಣಾಪಾಯದಿಂದ ಪಾರಾಗಿರುವ ಲಿಂಗಾಪುರ ಗ್ರಾಮದ ಬಳಿ ಬುಧವಾರ ರಾತ್ರಿ ನಡೆದಿದೆ.

ಲಿಂಗಾಪುರ ಗ್ರಾಮ ವ್ಯಾಪ್ತಿಯ ಸ್ಮಶಾನದ ಹತ್ತಿರದ ರಸ್ತೆಯಲ್ಲೇ 10 ರಿಂದ 15 ಕಾಡಾನೆಗಳು ಗುಂಪು ನಿಂತಿತ್ತು. ಈ ವೇಳೆಗೆ ಕಾರು ಚಾಲಕ ಸಕಲೇಶಪುರ ಕಡೆಯಿಂದ ಬೇಲೂರು ಕಡೆಗೆ ತೆರಳುತ್ತಿದ್ದರು. ಕಾರು ಕಂಡು ಕಾಡಾನೆಗಳು ಘೀಳಿಡುತ್ತಾ ವೇಗವಾಗಿ ಕಾರಿನ ಕಡೆಗೆ ಹೆಜ್ಜೆ ಹಾಕಲು ಆರಂಭಿಸಿದವು. ಹೆದರಿದ ಚಾಲಕ ಗಾಬರಿಯಿಂದ ಕಾರನ್ನು ಹಿಮ್ಮುಖವಾಗಿ ತೆಗೆಯುವಾಗ ನಿಯಂತ್ರಣ ತಪ್ಪಿ ರಸ್ತೆ ಪಕ್ಕದ ಗುಂಡಿಗೆ ಕಾರು ಬಿದ್ದಿತು.

ಅದೃಷ್ಟವಶಾತ್ ಪ್ರಾಣಾಪಾಯದಿಂದ ಕಾರು ಚಾಲಕ ಪಾರಾಗಿದ್ದಾರೆ. ಅದಾದ ಬಳಿಕ ರಸ್ತೆ ದಾಟಿ ಕಾಫಿ ತೋಟದೊಳಗೆ ಕಾಡಾನೆಗಳು ತೆರಳಿವೆ. ಸುದ್ದಿ ತಿಳಿದ ಕೂಡಲೇ ಸ್ಥಳಕ್ಕೆ ಅರಣ್ಯ ಇಲಾಖೆ ಇಟಿಎಫ್, ಆರ್‌ಆರ್‌ಟಿ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪ್ರತಿದಿನವೂ ಒಂದಲ್ಲ ಒಂದು ಅವಘಡಗಳು ಸಂಭವಿಸುತ್ತಿದ್ದರೂ ಕಾಡಾನೆಗಳ ಹಾವಳಿ ನಿಯಂತ್ರಣಕ್ಕೆ ಮುಂದಾಗದ ಅರಣ್ಯ ಇಲಾಖೆ ಹಾಗು ಸರ್ಕಾರದ ವಿರುದ್ಧ ಸಾರ್ವಜನಿಕರು ಆಕ್ರೋಶ ಮುಂದುವರಿಸಿದ್ದಾರೆ.

# ಕೇಂದ್ರ ಕಸಾಪ ಗೌರವ ಕಾರ್ಯದರ್ಶಿಯಾಗಿ ಹೆಚ್.ಬಿ.ಮದನಗೌಡ

» ಮೊದಲನೇ ಪುಟದಿಂದ

ಕನ್ನಡಪರ ಆಸಕ್ತಿಯನ್ನು ಹೊಂದಿರುವ ಹೆಚ್.ಬಿ.ಮದನಗೌಡ ಅವರು ಗೌರವ ಕಾರ್ಯದರ್ಶಿಯಾಗಿ ಕನ್ನಡ ಸಾಹಿತ್ಯ ಪರಿಷತ್ತಿಗೆ ಇನ್ನಷ್ಟು ಕ್ರಿಯಾತ್ಮಕತೆಯನ್ನು ತುಂಬುವುದರ ಜೊತೆಗೆ ಧನಾತ್ಮಕ ಆಯಾಮವನ್ನು ನೀಡಲಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತು ಇಂದು ಬಹುಮುಖಿ ಆಯಾಮಗಳನ್ನು ಪಡೆಯುತ್ತಿದ್ದು, ಅದರ ಸರಹದ್ದಿನ ವಿಸ್ತರಣೆಗೆ ಇದು ನೆರವಾಗಲಿದೆ ಎಂದು ರಾಜ್ಯಾಧ್ಯಕ್ಷ ಡಾ. ಮಹೇಶ್ ಜೋಶಿ ಅವರು ಆಶಿಸಿದ್ದಾರೆ.

ಈ ಸಂದರ್ಭದಲ್ಲಿ ಹಾಸನ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಎಚ್.ಎಲ್.ಮಲ್ಲೇಶಗೌಡ, ಕರ್ನಾಟಕ ಕಾರ್ಯ ನಿರತ ಪತ್ರ ಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾ ನಂದ ತಗಡೂರು, ಗೌರವ ಕಾರ್ಯ ದರ್ಶಿ ಪಟೇಲ್ ಪಾಂಡು, ಕನ್ನಡ ಸಾಹಿತ್ಯ ಪರಿಷತ್ ಅಂತರಾಷ್ಟ್ರೀಯ ಸಂಯೋಜಕಿ ನಿವೇದಿತಾ ಹಾವ ನೂರು, ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳ ಸಂಘದ ರಾಜ್ಯಾಧ್ಯಕ್ಷ ಜೆ.ಆರ್.ಕೆಂಚೇಗೌಡ ಹಲವರು ಹಾಜರಿದ್ದರು.

# ಭ್ರಮೆಯಲ್ಲಿ ಅಪಹರಣವೆಂದು ಪೇಚಿಗೆ ಸಿಲುಕಿಸಿದ ವಿದ್ಯಾರ್ಥಿನಿ

» ಮೊದಲನೇ ಪುಟದಿಂದ

ಬಂದಿದೆ. ಬಳಿಕ ಬಾಲಕಿ ಪೋಷಕರನ್ನು ಕರೆಸಿ ವಿಷಯ ತಿಳಿಸಿದ್ದಾರೆ.

**ವಿದ್ಯಾರ್ಥಿನಿಗೆ ಖಾಯಿಲೆ**

ಬಾಲಕಿ ಸಣ್ಣಪುಟ್ಟ ವಿಚಾರಗಳಿಗೆ ಹೆದರುವುದು, ಮನೆಯಲ್ಲಿ ಯಾರಾದರೂ ಜೋರಾಗಿ ಮಾತನಾಡಿದರೆ ಕಿರುಚುವುದು ಮಾಡುತ್ತಾಳೆ. ವಾಹನ ನಿಧಾನಕ್ಕೆ ಚಲಿಸಿದ್ದರಿಂದ ಭ್ರಮೆಯಲ್ಲಿ ಅಪಹರಣವೆಂದು ಬಿಂಬಿಸಿದ್ದಾಳೆ. ಹಲವು ವರ್ಷಗಳಿಂದ ಆಕೆಗೆ ಚಿಕಿತ್ಸೆ ನಡೆಯುತ್ತಿದ್ದು, ಆ ವಿಚಾರ ಶಿಕ್ಷಕರಿಗೆ ತಿಳಿದಿರಲಿಲ್ಲ. ಪೋಷಕರೇ ಅದನ್ನು ದೃಢಪಡಿಸಿದ್ದರಿಂದ ಎಲ್ಲರೂ ನಿರಾಳರಾದರು. ಸ್ವಲ್ಪ ಸಮಯದ ಬಳಿಕ ಪೊಲೀಸರು ಆಕೆಯನ್ನು ಮತ್ತೆ ಪ್ರಶ್ನಿಸಿದಾಗ ರಾತ್ರಿ ಕನಸಿನಲ್ಲಿ ಅಪಹರಣವಾಗಿತ್ತು ಅದನ್ನೇ ನಿಜವೆಂದು ತಿಳಿದಿದ್ದೇ ಎಂಬ ಹೇಳಿಕೆ ನೀಡಿದ್ದಾಳೆ.

ಕಾರಿಗನಹಳ್ಳಿ ತಿರುವಿನಲ್ಲಿ ವಾಹನ ನಿಧಾನವಾಗಿ ಚಲಿಸುತ್ತಿದ್ದ ವೇಳೆ ವಿದ್ಯಾರ್ಥಿನಿ ಬ್ಯಾಗ್ ಎಸೆದು ಓಡುತ್ತಿದ್ದುದ್ದನ್ನು ಕನ್ನಡಿಯಲ್ಲಿ ಗಮನಿಸಿದ್ದೆ. ಕೂಲಿ ಕಾರ್ಮಿಕರನ್ನು ಕರೆದೊಯ್ಯುವ ಕೆಲಸ ಮಾಡಿಕೊಂಡಿರುವ ನಾನು ಮಕ್ಕಳನ್ನು ಅಪಹರಣ ಏಕೆ ಮಾಡಲಿ ಎಂದು ವಾಹನ ಚಾಲಕ ರವಿ ತಿಳಿಸಿದ್ದಾನೆ.

# ಶ್ರವಣಬೆಳಗೊಳದಲ್ಲಿ ಹರ್ ಘರ್ ತಿರಂಗಾ ಜಾಥಾ

» ಮೊದಲನೇ ಪುಟದಿಂದ

ನಲ್ಲಿ ರಾಷ್ಟ್ರಭಕ್ತಿಯನ್ನು ಮತ್ತಷ್ಟು ಗಟ್ಟಿಗೊಳಿಸಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಅಂಬಿಕಾ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕ ಕುಮಾರ್ ಅವರು ಹರ್ ಘರ್ ತಿರಂಗಾ ಅಭಿಯಾನದ ಮಹತ್ವ ವಿವರಿಸಿದರು. ವಿಂಧ್ಯಗಿರಿ ಮಹಾ ದ್ವಾರದಿಂದ ಜಾಥಾ ಪ್ರಾರಂಭವಾಗಿ ಶ್ರೀಮಠದ ಬೀದಿ, ಬೆಂಗಳೂರು ರಸ್ತೆ ಮೂಲಕ ಚಂದ್ರಗಿರಿ ಬೆಟ್ಟದ ಮಹಾ ದ್ವಾರದ ವರೆಗೆ ಸಾಗಿತು. ಎಲ್ಲರೂ ರಾಷ್ಟ್ರಧ್ವಜ ಹಿಡಿದು ವಂದೇ ಮಾತರಂ, ಭಾರತ ಮಾತಾ ಕೀ ಜಯ ಎಂಬ ಘೋಷಣೆಗಳನ್ನು ಕೂಗುತ್ತಾ ವಿದ್ಯಾರ್ಥಿಗಳು ಸಾಗಿದರು.

ಪುರಾತತ್ವ ಇಲಾಖೆ ಸಿಬ್ಬಂದಿ ಶ್ರೀನಿವಾಸ್, ಪ್ರಿಯಾಂಶು ದೀಕ್ಷಿತ್, ಸುರೇಂದ್ರ, ಮುರುಳಿ, ಜ್ಞಾನೇಶ್, ಪ್ರವಾಸಿ ಮಿತ್ರರಾದ ಮಣಿಕಂಠ, ಕೃಷ್ಣಮೂರ್ತಿ, ಅಮಿತ್, ರಾಜಣ್ಣ ಮುಂತಾದವರಿದ್ದರು.

# ಮತಗಳ್ಳತನ ವಿರೋಧಿಸಿ ಪ್ರತಿಭಟನೆ



• ಪ್ರಜೋದಯ ವರದಿ

**ಹೊಳೆನರಸೀಪುರ:** ಕಳೆದ ಲೋಕಸಭಾ ಚುನಾವಣೆಯಲ್ಲಿ ದೇಶಾದ್ಯಂತ ಮತಗಳ್ಳತನ ನಡೆದಿದೆ ಎಂದು ಆರೋಪಿಸಿ ಪಟ್ಟಣದಲ್ಲಿ ಗುರುವಾರ ಸಂಜೆ ಕಾಂಗ್ರೆಸ್‌ನಿಂದ ಮೇಣದ ಬತ್ತಿ ಪ್ರತಿಭಟನೆ ನಡೆಸಲಾಯಿತು.

ಸಂಸದ ಶ್ರೇಯಸ್ ಪಟೇಲ್ ಅವರು ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಗೆ ಧಕ್ಕೆ ತರುವ ಆಘಾತಕಾರಿ ಘಟನೆಗಳು ನಡೆಯುತ್ತಿವೆ. ಚುನಾವಣಾ ಆಯೋಗದ ಮೇಲೆ ನಂಬಿಕೆಯಿದ್ದು ಆಗಿರುವ ಲೋಪ ಸರಿಪಡಿಸಿ ಸಂವಿಧಾನದ ಆಶಯಗಳನ್ನು ರಕ್ಷಿಸಬೇಕು. ಬಿಹಾರ, ಪಶ್ಚಿಮ ಬಂಗಾಳ, ಅಸ್ಸಾಂನಲ್ಲಿ ನಡೆದಿರುವ ಮತಗಳ್ಳತನ ಪ್ರಜಾಪ್ರಭುತ್ವಕ್ಕೆ ಮಾರಕವಾಗಿದೆ. ರಾಜ್ಯದ ಜನರು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಬೇಕು. ಷಡ್ಯಂತ್ರದ ವಿರುದ್ಧ ಪ್ರತಿಭಟನೆ ನಡೆಸಬೇಕೆಂದರು.

# ನಾಶಪಡಿಸಿದ ಗಿಡಗಳ ಕಂಡು ಮರುಗಿದ ಸಾಲುಮರದ ತಿಮ್ಮಕ್ಕ

• ಪ್ರಜೋದಯ ವರದಿ



**ಬೇಲೂರು:** ತಾಲ್ಲೂಕು ಕಚೇರಿ ಆವರಣದಲ್ಲಿ ನೆಟ್ಟಿದ್ದ ಗಿಡಗಳನ್ನು ಕಿತ್ತು ಹಾಕಿರುವುದು ಬೇಸರ ತರಿಸಿದೆ ಎಂದು ರಾಜ್ಯ ಸರ್ಕಾರದ ಪರಿಸರ ರಾಯಭಾರಿ ಡಾ.ಸಾಲುಮರದ ತಿಮ್ಮಕ್ಕ ಅವರು ಹೇಳಿದರು.

ಪಟ್ಟಣದ ತಾಲ್ಲೂಕು ಕಚೇರಿ ಆವರಣಕ್ಕೆ ಗುರುವಾರ ಭೇಟಿ ನೀಡಿ ಮಮ್ಮಲ ಮರುಗಿದ ಅವರು, ನಮ್ಮ ಟ್ರಸ್ಟ್ ವತಿಯಿಂದ ನೆಡಲಾಗಿದ್ದ ನೇರಲೆ ಹಾಗು ಇತರೆ ಗಿಡಗಳನ್ನು ಕಿತ್ತು ಹಾಕಿ ರುವುದು ನೋವು ತರಿಸಿದೆ ಎಂದರು.

ಸಾಲುಮರದ ತಿಮ್ಮಕ್ಕ ದತ್ತು ಪುತ್ರ ಬಳ್ಳೂರು ಉಮೇಶ್ ಅವರು ಮಾತನಾಡಿ, ಗಿಡಗಳನ್ನು ಕಿತ್ತುಹಾಕಿರುವ ಬಗ್ಗೆ ತಿಮ್ಮಕ್ಕನವರಿಗೆ ತಿಳಿಸಿದಾಗ ಅವರು ಬೇಸರ ಮಾಡಿಕೊಂಡರು. ಅವರೇ ಹಠ ಹಿಡಿದು ನೋಡಲೇಬೇಕೆಂದು ಇಲ್ಲಿಗೆ ಬಂದಿದ್ದಾರೆ. ಗಿಡ ಮರ ಬೆಳೆಸುವುದು ಎಷ್ಟು ಕಷ್ಟ ಎಂಬುದು ಎಲ್ಲರಿಗೂ ಗೊತ್ತು. ಹೀಗಿರುವಾಗ ಗಿಡಗಳನ್ನು ಕಿತ್ತುಹಾಕಲು ಹೇಗೆ ಮನಸ್ಸು ಬಂತು ಎಂದು ಅಳಲು ತೋಡಿಕೊಂಡರು.

ಈ ಬಗ್ಗೆ ತಹಶೀಲ್ದಾರ್ ಅವರನ್ನು ಕೇಳಿದಾಗ ಅವರು, ನಾನೇ ಕಿತ್ತು ಹಾಕಿರುವುದು ಏನಾ ದರೂ ಮಾಡಿಕೊಳ್ಳಿ ಎಂದು ಉಡಾಫೆ ಉತ್ತರ ನೀಡಿದ್ದಾರೆ. ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರಿಗೂ ವಿಚಾರ ತಿಳಿಸಿದ್ದೇನೆ. ಶೀಘ್ರದಲ್ಲೇ ಖುದ್ದಾಗಿ ಭೇಟಿಯಾಗಿ ತಹಶೀಲ್ದಾರ್ ವಿರುದ್ಧ ಕ್ರಮಕ್ಕೆ ಆಗ್ರಹಿಸುತ್ತೇನೆಂದರು.

# ವಿದ್ಯುತ್ ತಂತಿ ತುಳಿದು ವ್ಯಕ್ತಿ ಸಾವು

• ಪ್ರಜೋದಯ ವರದಿ

**ಬೇಲೂರು:** ಜಮೀನಿನಲ್ಲಿ ಹುಲ್ಲು ಕುಯ್ಯುತ್ತಿದ್ದಾಗ ತುಂಡಾಗಿ ಬಿದ್ದಿದ್ದ ವಿದ್ಯುತ್ ತಂತಿ ಸ್ಪರ್ಶಿಸಿ ವ್ಯಕ್ತಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಪಂಡಿತನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಕಲ್ಲುವೀರೇಗೌಡ ಮೃತರು. ಕಿವುಡ ಹಾಗು ಮಂದ ಬುದ್ಧಿಯವರಾಗಿದ್ದ ಅವರು ಸಹೋದರರ ಜೊತೆಗಿದ್ದರು. ಬುಧವಾರ ಬೆಳಿಗ್ಗೆ 9 ಗಂಟೆಗೆ ಸಹೋದರ ಧರ್ಮಪ್ಪ ಹಾಗು ಭರತ್ ಹಸುವಿಗೆ ಹುಲ್ಲು ಕುಯ್ದುಕೊಂಡು ಬರಲು ಕಳುಹಿಸಿದ್ದರು. ಸಾಕು ನಾಯಿ ಯೊಂದಿಗೆ ಜಮೀನಿಗೆ ತೆರಳಿದ್ದ ಕಲ್ಲು ವೀರೇಗೌಡ ಎಷ್ಟೇ ಹೊತ್ತಾದರೂ ವಾಪಾಸ್ ಬಾರದೆ ಇದ್ದಾಗ ಪರಿ ಶೀಲಿಸಿದಾಗ ವಿದ್ಯುತ್ ತಗುಲಿಮೃತಪಟ್ಟಿರುವುದು ಗೊತ್ತಾಗಿದೆ.

ಜಮೀನಿನ ವಿದ್ಯುತ್ ಕಂಬದಿಂದ ಮನೆಗೆ ಎಳೆದಿದ್ದ ಲೈನ್ ಕತ್ತರಿಸಿ ಬಿದ್ದಿದ್ದು ನೋಡದೆ ಕಲ್ಲುವೀರೇಗೌಡ ಅವರು ಸ್ಪರ್ಶಿಸಿದ್ದಾರೆ. ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಹಳೇಬೀಡು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕಾರು ಡಿಕ್ಕಿ : ವೃದ್ಧ ಸಾವು

• ಪ್ರಜೋದಯ ವರದಿ

**ಹೊಳೆನರಸೀಪುರ:** ಕಾರು ಡಿಕ್ಕಿಯಾಗಿ ವೃದ್ಧ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಪೆದ್ದನಹಳ್ಳಿ ಗ್ರಾಮದಲ್ಲಿ ಬುಧವಾರ ನಡೆದಿದೆ.

ಗ್ರಾಮದ ಕಾಳೇಗೌಡ (65) ಮೃತರು. ಮನೆಗೆ ಸಾಮಾಗ್ರಿ ತರುವುದಕ್ಕಾಗಿ ನಯಾರಾ ಪೆಟ್ರೋಲ್ ಬಂಕ್ ಸಮೀಪದ ಅಂಗಡಿಗೆ ತೆರಳಿದ್ದ ಅವರು ರಸ್ತೆ ದಾಟಲು ಪಾದಚಾರಿ ಮಾರ್ಗದ ಮೇಲೆ ನಿಂತಿದ್ದಾಗ ಮೈಸೂರು ಕಡೆಯಿಂದ ವೇಗವಾಗಿ ಬಂದ ಕಾರು ಡಿಕ್ಕಿಯಾಗಿದೆ. ಗಂಭೀರ ಗಾಯಗೊಂಡಿದ್ದ ಕಾಳೇಗೌಡ ಅವ ರನ್ನು ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಪ್ರಥಮ ಚಿಕಿತ್ಸೆ ಕೊಡಿಸಲಾ ಯಿತು. ಹೆಚ್ಚಿನ ಚಿಕಿತ್ಸೆಗಾಗಿ ಹಾಸನದ ಹಿಮ್ಸ್‌ಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆ ಸ್ಪಂದಿಸದೆ ಮೃತಪಟ್ಟಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವಿದ್ಯಾರ್ಥಿಗಳು ಓದಿಗೆ ಪೂರಕ ವಾತಾವರಣ ಸೃಷ್ಟಿಸಿಕೊಳ್ಳಿ

• ಪ್ರಜೋದಯ ವರದಿ



**ಹಾಸನ:** ವಿದ್ಯಾರ್ಥಿಗಳು ಓದುವುದನ್ನು ಹವ್ಯಾಸ ಮಾಡಿಕೊಳ್ಳಲು ಓದಿಗೆ ಪೂರಕ ವಾತಾ ವರಣ ಸೃಷ್ಟಿಸಿಕೊಳ್ಳಬೇಕೆಂದು ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಮಾಜ ಶಾಸ್ತ್ರ ವಿಭಾಗ ಮುಖ್ಯಸ್ಥ ಡಾ.ಬಾಷಾ ಅವರು ಹೇಳಿದರು.

ನಗರದ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಾಲೇಜಿನ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರ, ಸಮಾಜಶಾಸ್ತ್ರ ವಿಭಾಗದಿಂದ ಹಮ್ಮಿಕೊಂಡಿದ್ದ ಗ್ರಂಥಾಲಯ ಪಿತಾಮಹ ಪದ್ಮಶ್ರೀ ಡಾ.ಎಸ್.ಆರ್.ರಂಗನಾಥನ್ ಅವರ 133ನೇ ಜನ್ಮ ದಿನಾಚರಣೆ ಹಾಗು ಗ್ರಂಥ ಪಾಲಕರ ದಿನಾಚರಣೆಯಲ್ಲಿ ಮಾತನಾಡಿ, ವಿದ್ಯಾರ್ಥಿಗಳು ಜ್ಞಾಪಕ ಶಕ್ತಿ ವೃದ್ಧಿಯಾಗಬೇಕೆಂದರೆ ಪ್ರತಿ ಪುಟವನ್ನು ಓದಿದ ನಂತರ ಟಿಪ್ಪಣಿ ಮಾಡಿಕೊಳ್ಳುವ ಅಭ್ಯಾಸ ಮಾಡಿಕೊಳ್ಳಬೇಕು. ಓದಿಗೆ ಮೀಸಲಾದ ಸಮಯದಲ್ಲಿ ಮೊಬೈಲ್ ಬಳಕೆ ಯನ್ನು ಸಂಪೂರ್ಣ ತ್ಯಜಿಸಬೇಕೆಂದು ಕರೆ ನೀಡಿದರು.

ಪ್ರಾಂಶುಪಾಲರಾದ ಡಾ.ಕೆ.ಜಿ. ಕವಿತ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಪುಸ್ತಕ ಓದುವ ಹವ್ಯಾಸ ಮಾಡಿಕೊಂಡರೆ ಭಾಷಾ ಸ್ವಚ್ಛತೆ ಹಾಗು ಭಾಷೆಯ ಮೇಲೆ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆಂದರು.

ಗ್ರಂಥಪಾಲಕ ಎಸ್.ಮಂಜು ನಾಥ, ಪತ್ರಾಂಕಿತ ವ್ಯವಸ್ಥಾಪಕ ಎಂ.ಪಿ.ಹರ್ಷ, ಸಹ ಪ್ರಾಧ್ಯಾಪಕ ಎಸ್.ಯೋಗೇಶ್, ಕೆ.ಎಸ್.ಮೋಹನ್ ಕುಮಾರ್ ಹಾಗು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ನೂತನ ಉಸ್ತುವಾರಿ ಸ್ವಾಗತಿಸಲು ಸಜ್ಜು

• ಪ್ರಜೋದಯ ವರದಿ



**ಹಾಸನ:** ಜಿಲ್ಲಾ ಉಸ್ತುವಾರಿ ಸಚಿವರಾದ ಬಳಿಕ ಮೊದಲ ಬಾರಿಗೆ ಕೃಷ್ಣಬೈರೇಗೌಡ ಅವರು ಜಿಲ್ಲೆಗೆ ಆಗಮಿಸುತ್ತಿದ್ದಾರೆ. ಉಸ್ತುವಾರಿ ಸಚಿವರನ್ನು ಸ್ವಾಗತಿಸಲು ಕಾಂಗ್ರೆಸ್ ಮುಖಂಡರು, ಜಿಲ್ಲಾಡಳಿತ ಸಜ್ಜಾಗಿದೆ.

ಸ್ವಾತಂತ್ರ್ಯ ದಿನಾಚರಣೆಯಲ್ಲಿ ಧ್ವಜರೋಹಣ ನೆರವೇರಿಸಲು ಆಗಮಿಸುತ್ತಿರುವ ಕೃಷ್ಣ ಬೈರೇಗೌಡ ಅವರು ಬೆಳಿಗ್ಗೆ 8.30ಕ್ಕೆ ಜಿಲ್ಲಾ ಕ್ರೀಡಾಂಗಣದ ಹಾಕಿ ಮೈದಾನದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬಳಿಕ ಪಕ್ಷದ ಮುಖಂಡರು, ಕಾರ್ಯಕರ್ತರನ್ನು ಭೇಟಿಯಾಗಲಿದ್ದಾರೆ.

ನೂತನ ಉಸ್ತುವಾರಿ ಸಚಿವರಿಗೆ ಸ್ವಾಗತ ಕೋರಲು ಕಾಂಗ್ರೆಸ್ ಮುಖಂಡರು ಜಿಲ್ಲಾ ಗಡಿ ಯಿಂದ ಹಿಡಿದು ರಸ್ತೆ ಉದ್ದಕ್ಕೂ ಫ್ಲೆಕ್ಸ್, ಬ್ಯಾನರ್‌ಗಳನ್ನು ಹಾಕಿಸಿದ್ದಾರೆ. ಈಗಾಗಲೇ ಹಲವು ಜಿಲ್ಲಾ ಕಾಂಗ್ರೆಸ್ ಮುಖಂಡರು ಬೆಂಗಳೂರಿಗೆ ತೆರಳಿ ಸಚಿವರನ್ನು ಭೇಟಿ ಮಾಡಿದ್ದು, ಉಳಿದವರು ಶುಕ್ರವಾರ ಭೇಟಿಯಾಗಿ ಸ್ವಾಗತ ಕೋರಲಿದ್ದಾರೆ. ಕಾರ್ಯಕ್ರಮ ಮುಗಿದ ಬಳಿಕ ಸಚಿವರು ಪಕ್ಷದ ಮುಖಂಡರನ್ನು ಭೇಟಿಯಾಗಿ ಸಮಾಲೋಚನೆ ನಡೆಸಲಿದ್ದಾರೆ.

# ನಾಮಫಲಕದಲ್ಲಿ ಕನ್ನಡವಿಲ್ಲದಿದ್ದರೆ ಮಸಿ: ಎಚ್ಚರಿಕೆ



• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಅಂಗಡಿ ಮುಂಗಟ್ಟುಗಳಿಗೆ ಹಾಕುವ ನಾಮಫಲಕದಲ್ಲಿ ಶೇ.60 ರಷ್ಟು ಕನ್ನಡ ಬಳಸಬೇಕೆಂಬ ನಿಯಮವಿದ್ದರೂ ಪಟ್ಟಣದಲ್ಲಿ ಅನುಷ್ಠಾನವಾಗಿಲ್ಲ. ಈ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಅಂತಹ ಫಲಕಗಳಿಗೆ ಮಸಿ ಬಳಿಯುವುದಾಗಿ ಕರ್ನಾಟಕ ರಕ್ಷಣಾ ವೇದಿಕೆ ಎಚ್ಚರಿಸಿದೆ.

ವರ್ತಕರು ತಮ್ಮ ಅಂಗಡಿಗಳ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡವನ್ನು ಕಡ್ಡಾಯವಾಗಿ ಬಳಸಬೇಕೆಂದು ಸರ್ಕಾರವು ಅಧಿಸೂಚನೆ ಹೊರಡಿಸಿದೆ. ಸಾರ್ವಜನಿಕ ಸ್ಥಳಗಳಲ್ಲಿ ಪ್ರದರ್ಶಿಸುವ ನಾಮಫಲಕಗಳಲ್ಲಿ ಶೇ.60 ಕನ್ನಡ, ಶೇ.40ರಷ್ಟು ಆಂಗ್ಲಭಾಷೆ ಸೇರಿ ಇನ್ನಿತರ ಭಾಷೆಗಳ ಬಳಸು ವಂತೆ ಸ್ಪಷ್ಟ ನಿರ್ದೇಶನ ನೀಡಿದೆ. ಈ ನಿಯಮವನ್ನು ಯಾರೂ ಪಾಲಿಸುತ್ತಿಲ್ಲ. ಅಂತಹ ಅಂಗಡಿಗಳಿಗೆ ನೋಟೀಸ್ ಕೊಡುವ ಮೂಲಕ ಎಚ್ಚರಿಕೆ ನೀಡಬೇಕೆಂದು ಕರವೇ ಪದಾಧಿಕಾರಿಗಳು ಆಗ್ರಹಿಸಿದರು.

ಈ ಕಾನೂನು ಜಾರಿಯಾಗದಿದ್ದರೆ ನಾಮಫಲಕಗಳಿಗೆ ಮಸಿ ಬಳಿದು ಪ್ರತಿಭಟನೆ ನಡೆಸ ಲಾಗುವುದೆಂದು ಎಚ್ಚರಿಕೆ ನೀಡಿದರು. ಪುರಸಭೆ ಮುಖ್ಯಾಧಿಕಾರಿಗೆ ಮನವಿ ಸಲ್ಲಿಸಿದರು.

ತಾಲ್ಲೂಕು ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ಮಧು ಕರಡೇವು, ಜಿಲ್ಲಾ ಉಪಾಧ್ಯಕ್ಷ ಸತೀಶ್ ಕರಡೇವು, ಜಿಲ್ಲಾ ಕಾರ್ಮಿಕ ಘಟಕದ ಅಧ್ಯಕ್ಷ ಗಣೇಶ್‌ಗೌಡ, ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ಧರ್ಮರಾಜ್, ತಾಲ್ಲೂಕು ಯುವ ಘಟಕದ ಅಧ್ಯಕ್ಷ ಎಸ್.ಎಂ.ಹರೀಶ್, ನವೀನ್ ಆರ್ಯ, ವೆಂಕಟೇಶ್, ಆನಂದ್ ಇತರರಿದ್ದರು.




ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

C M Y K C M Y K C M Y K C M Y K